10 December 2025 Wednesday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಹೃದಯ ಕದ್ದರೆ ಹೃದಯ ಚೋರ
ಕಳ್ಳತನವಲ್ಲ , ವಸ್ತು ಕದ್ದರೆ ಕಳ್ಳತನ!
ಎರಡೂ ಒಂದೇ ಪದವಾದರೂ ವಿಷಯ
ಬೇರೆ ಬೇರೆ!
ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಬೇರೆಯವರಿಗೆ
ಕೊಟ್ಟಿದ್ದನ್ನು ಒಂದು ಬಾರಿ
ಉಸಿರಾಡುವ ಮುನ್ನವೇ
ಮರೆತುಬಿಡಿ"
ಬೇರೆಯವರಿಂದ
ಪಡೆದುದ್ದನ್ನು ಕೊನೆ
ಉಸಿರಿರು ವವರಿಗೂ
ನೆನಪಿನಲ್ಲಿಡಿ"
ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 49 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಜಗತ್ತಿನ 2ನೇ ಅತಿ ದೊಡ್ಡ ಖಾದಿ ಧ್ವಜ ಅನಾವರಣ

**ಬೆಳಗಾವಿ:** ಬೆಳಗಾವಿ ಸುವರ್ಣಸೌಧದ ಪಶ್ಚಿಮ ದ್ವಾರದಲ್ಲಿ ಜಗತ್ತಿನ ಎರಡನೇ ಅತಿ ದೊಡ್ಡ ಖಾದಿ ರಾಷ್ಟ್ರಧ್ವಜವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಮಂಗಳವಾರ ಚರಕ ತಿರುಗಿಸುವ ಮೂಲಕ ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರಗೀತೆ ಮೊಳಗಿತು.

ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಅವರು ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ ನೆನಪಾರ್ಥ ಈಚೆಗೆ ಆಯೋಜಿಸಿದ್ದ ಗಾಂಧೀ ಭಾರತ ಕಾರ್ಯಕ್ರಮದ ಬೆನ್ನಲ್ಲೇ ಮತ್ತೊಂದು ಮಹತ್ವದ ರಾಷ್ಟ್ರಪ್ರೇಮದ ಕಾರ್ಯಕ್ರಮ ಗಂಡುಮೆಟ್ಟಿನ ನಾಡು ಬೆಳಗಾವಿಯಲ್ಲಿ ನೆರವೇರಿದೆ.

75 ಅಡಿ ಉದ್ದ ಹಾಗೂ 55 ಅಡಿ ಅಗಲದ ವಿಶಾಲ



## ದೇಶಭಕ್ತಿ ಸಂದೇಶ: ಡಿಕೆಶಿ

**ಬೆಳಗಾವಿ:** ಸುವರ್ಣಸೌಧದಲ್ಲಿ ಬೃಹತ್ ತ್ರಿವರ್ಣ ಧ್ವಜ ಪ್ರದರ್ಶಿಸುತ್ತಿರುವುದು ಮುಂದಿನ ಪೀಳಿಗೆಗೆ ದೇಶಭಕ್ತಿಯ ಸಂದೇಶ ರವಾನಿಸುವ ಕೆಲಸವಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಶ್ಲಾಘಿಸಿದರು.

ಬೆಳಗಾವಿ ಸುವರ್ಣಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಬೃಹತ್ ರಾಷ್ಟ್ರಧ್ವಜ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದರು. ಕಳೆದ ವರ್ಷ ಮಹಾತ್ಮ ಗಾಂಧಿ ಅವರ ಸ್ವಾತಂತ್ರ ಹೋರಾಟದ ನೇತೃತ್ವದ ಶತಮಾನೋತ್ಸವ ಹಿನ್ನೆಲೆ ಸ್ಪೀಕರ್ ಅವರು ಸುವರ್ಣಸೌಧದಲ್ಲಿ ಮಹಾತ್ಮ ಗಾಂಧೀಜಿ

ಪುಟ 2ಕ್ಕೆ

ಧ್ವಜ ದೇಶಪ್ರೇಮದ ಸಂಕೇತವಾಗಿದೆ. ನೋಡುಗರಲ್ಲಿ ದೇಶಭಕ್ತಿ ಭಾವನೆಗಳನ್ನು ಬಿತ್ತಲಿದೆ. ಇಂತಹ ಮಹತ್ವದ ಧ್ವಜದ ನಿರ್ಮಾಣಕ್ಕೆ ಶ್ರಮಿಸಿದ ವಿನೋದಕುಮಾರ ರೇವಪ್ಪ ಬಮ್ಮಣ್ಣವರ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸನ್ಮಾನಿಸಿದರು.

ಸಿದ್ದರಾಮಯ್ಯ ಅವರು ಮಾತನಾಡಿ, ವಿಧಾನ ಸಭೆಯ ಭವ್ಯ ಮೆಟ್ಟಿಲುಗಳ ಮೇಲೆ ಜಗತ್ತಿನ ಎರಡನೆ ಅತಿ ದೊಡ್ಡ ರಾಷ್ಟ್ರಧ್ವಜ ಅನಾವರಣಕ್ಕೆ ಶ್ರಮಿಸಿ ಉತ್ತಮ ಕಾರ್ಯ ಮಾಡಿದ ಸಭಾಧ್ಯಕ್ಷರಾದ ಯು.ಟಿ.ಖಾದರ್ ತಂಡದವರಿಗೆ ಮತ್ತು ಈ ಧ್ವಜ ನೇಯ್ಗೆಗೆ ಶ್ರಮಿಸಿದ ಕಲಬುರಗಿ ಜಿಲ್ಲೆಯ ಕಮಲಾಪುರದ ವಿನೋದಕುಮಾರ ರೇವಪ್ಪ ಅವರಿಗೆ ಸರ್ಕಾರದಿಂದ

ಪುಟ 2ಕ್ಕೆ

## ಗ್ಯಾಸ್ ಗೀಸರ್ ಸೋರಿಕೆ: ತಾಯಿ, ಮಗು ಸಾವು



**ಬೆಂಗಳೂರು:** ಗ್ಯಾಸ್ ಗೀಸರ್ ಸೋರಿಕೆಯಿಂದ ತಾಯಿ ಮತ್ತು ಮಗು ಸಾವನ್ನಪ್ಪಿದ ಘಟನೆ ಗೋವಿಂದರಾಜ ನಗರದಲ್ಲಿ ನಡೆದಿದೆ. ಚಾಂದಿನಿ (26), ಯುವಿ (4) ಮೃತಪಟ್ಟವರು.

ಸ್ನಾನಕ್ಕೆಂದು ತೆರಳಿದ್ದಾಗ ಗ್ಯಾಸ್ ಸೋರಿಕೆಯಾಗಿ ಅಸ್ವಸ್ಥರಾಗಿದ್ದರು. ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಇಬ್ಬರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ಅವರ ತಮ್ಮ ಪ್ರವೀಣ್ ಮನೆಗೆ ಬಂದು ನೋಡಿದಾಗ ಬಾತ್ ರೂಮ್‌ನಟಿಲ್ಲಿ ತಾಯಿ ಮಗು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದು ಗೊತ್ತಾಗಿದೆ. ಗ್ಯಾಸ್ ಗೀಸರ್ ಸೋರಿಕೆಯಿಂದ ದುರ್ಘಟನೆ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ.

## ಎಂಇಎಸ್ ಹಳದಿ ಪೇಟಕ್ಕೆ ಕಾಂಗ್ರೆಸ್ ಶಾಸಕರ ವಿರೋಧ

**ಬೆಳಗಾವಿ:** ವಿಧಾನ ಪರಿಷತ್‌ನಲ್ಲಿ ವಿಪಕ್ಷಗಳು ಧರಿಸಿಕೊಂಡು ಬಂದಿದ್ದ ಹಳದಿ ಪೇಟ ಮಂಗಳವಾರ ಗದ್ದಲಕ್ಕೆ ಕಾರಣವಾಗಿ ಕಲಾಪ ಮುಂದೂಡಿದ ಪ್ರಸಂಗ ನಡೆಯಿತು.

ರೈತರ ಹೋರಾಟದಲ್ಲಿ ಭಾಗಿಯಾಗಿದ್ದ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಮತ್ತು ವಿಪಕ್ಷ ಸಚೇತಕ ರವಿಕುಮಾರ್ ಹಳದಿ ಪೇಟ ಮತ್ತು ಹಸಿರು ಟವಲ್ ಧರಿಸಿ ಕಲಾಪಕ್ಕೆ ಹಾಜರಾಗಿದ್ದರು. ಪ್ರಶ್ನೋತ್ತರ ಕಲಾಪ ಮುಗಿದ ಬಳಿಕ ರೈತರ

ಪುಟ 2ಕ್ಕೆ

## ಐಟಿ ಕಾರಿಡಾರ್‌ಗೆ 400 ಕೋಟಿ: ಡಿಕೆಶಿ

**ಬೆಂಗಳೂರು:** ಐಟಿ ಕಾರಿಡಾರ್ ಅಭಿವೃದ್ಧಿಗೆ ರಾಜ್ಯ ಸರ್ಕಾರ 400 ಕೋಟಿ ರೂ. ಮೀಸಲಿಟ್ಟಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಕೆಆರ್ ಪುರಂ ವರೆಗೆ ಐಟಿ ಕಾರಿಡಾರ್ ಹೊರವರ್ತುಲ ರಸ್ತೆ ಅಭಿವೃದ್ಧಿ, 20.50 ಕಿ.ಮೀ ಉದ್ದದ ರಸ್ತೆಯನ್ನ 400 ಕೋಟಿ ಮೊತ್ತದಲ್ಲಿ ವಿಶ್ವ ದರ್ಜೆ ಮಟ್ಟದಲ್ಲಿ ಅಭಿವೃದ್ಧಿ, ಐಟಿ ಕಾರಿಡಾರ್ ಟ್ರಾಫಿಕ್ ಸಮಸ್ಯೆ ನಿವಾರಣೆ ಆಗಲಿದೆ. ಐಟಿ ಕಾರಿಡಾರ್ ಅಭಿವೃದ್ಧಿಗೆ ನಮ್ಮ ಸರ್ಕಾರ 400 ಕೋಟಿ ರೂ. ಮೀಸಲಿಟ್ಟಿದೆ. ಬೆಂಗಳೂರಿನ ಸಮಗ್ರ ಅಭಿವೃದ್ಧಿಯೇ ನಮ್ಮ ಆದ್ಯತೆ ಎಂದು ಡಿ.ಕೆ.ಶಿವಕುಮಾರ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.



# ಮುಂದಿನ ಮುಖ್ಯಮಂತ್ರಿ ಯಾರು?

**ವಿಧಾನಸಭೆ ಅಧಿವೇಶನದಲ್ಲೂ ಪ್ರತಿಧ್ವನಿ । ಪ್ರತಿಪಕ್ಷ ನಾಯಕರ ಲೇವಡಿ**

**ಬೆಳಗಾವಿ:** ಮುಂದಿನ ಮುಖ್ಯಮಂತ್ರಿ ಯಾರು ಎಂಬ ಕೂಗು ವಿಧಾನಸಭೆಯಲ್ಲೂ ಪ್ರತಿಧ್ವನಿಸಿತು. ಪ್ರಶ್ನೋತ್ತರ ಕಲಾಪದ ವೇಳೆ ಮಂಗಳವಾರ ಬಿಜೆಪಿ ಶಾಸಕ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸಿ ಸಚಿವ ಪರಮೇಶ್ವರ್‌ಗೆ ಟಕ್ಕರ್ ಕೊಟ್ಟರು.

ಬಿಜೆಪಿ ಶಾಸಕ ಸಿಮೆಂಟ್ ಮಂಜು ಆನ್‌ಲೈನ್ ಗೇಮ್ ಬೆಟ್ಟಿಂಗ್ ಬಗ್ಗೆ ಕೇಳಿದ ಪ್ರಶ್ನೆಗೆ ಪರಮೇಶ್ವರ್ ಉತ್ತರ ನೀಡಿದರು. ಆಗ ಮಧ್ಯಪ್ರವೇಶ ಮಾಡಿದ ಸುನೀಲ್ ಕುಮಾರ್, ನೀವು ಇಲ್ಲಿ ಬೆಟ್ಟಿಂಗ್ ಪ್ರಸ್ತಾಪ ಮಾಡ್ತಾ ಇದ್ದೀರಾ? ಮುಂದಿನ ಮುಖ್ಯಮಂತ್ರಿ ಯಾರು ಎಂಬ ಬಗ್ಗೆ ಬೆಟ್ಟಿಂಗ್ ನಡೆಯುತ್ತಿದೆ. ಶಾಸಕರಲ್ಲೇ ಮುಂದಿನ ಮುಖ್ಯಮಂತ್ರಿ ಯಾರು ಅಂತ ಬೆಟ್ಟಿಂಗ್ ನಡೆಯುತ್ತಿದೆ ಎಂದು ಸುನೀಲ್ ಕುಮಾರ್ ಲೇವಡಿ ಮಾಡಿದರು. ಈಗ ಅದೆಲ್ಲ ಚರ್ಚೆ ಬೇಡ ಕೂರಿ ಎಂದು ಸ್ಪೀಕರ್ ಸೂಚಿಸಿದರು. ಆಡಳಿತ ಪಕ್ಷದವರು ಮಾತ್ರ ನಕ್ಕು ಸುಮ್ಮನಾದರು.

ಇನ್ನು ವಿಧಾನಸಭೆ ಕಲಾಪ ಆರಂಭದಲ್ಲಿ ಮುಖ್ಯಮಂತ್ರಿ ಯಾರು ಎಂದು ಶಾಸಕ ಅರವಿಂದ್ ಬೆಲ್ಲದ್ ಪ್ರಸ್ತಾಪಿಸಿದರು. ಪರಿಷತ್ ಸದಸ್ಯ ಚನ್ನರಾಜ್ ಹಟ್ಟಿಹೊಳಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಂದು ಟ್ವೀಟ್ ಮಾಡಿದ್ದಾರೆ. ಯಾರು ಮುಖ್ಯಮಂತ್ರಿ ಎಂದು ಬೆಲ್ಲದ್ ಕೇಳಿದರು. ಆಗ ಸ್ಪೀಕರ್ ಮಧ್ಯಪ್ರವೇಶ ಮಾಡಿ, ಉತ್ತರ ಕರ್ನಾಟಕ ಚರ್ಚೆ ಮಾಡಬೇಕಾದರೆ ಇದು ಏಕೆ ಎಂದು ಗರಂ ಆಗಿ ಹೇಳಿದರು. ಅಲ್ಲದೆ ಕಾಂಗ್ರೆಸ್ ಶಾಸಕರಿಂದಲೂ ಆಕ್ಷೇಪ ವ್ಯಕ್ತವಾಯಿತು. ಅದು ನಮ್ಮ ಪಕ್ಷದ ವಿಚಾರ ನಿಮಗ್ಯಾಕೆ ಎಂದು ವಾಗ್ದಾಳಿ ನಡೆಸಿದರು.

ಪುಟ 2ಕ್ಕೆ



## ಸಂತೋಷ, ಒಳ್ಳೆಯದಾಗಲಿ: ಯತೀಂದ್ರಗೆ ಡಿಕೆಶಿ ಟಾಂಗ್





**ಬೆಂಗಳೂರು:** ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡಿ ಶಾಂತಿ ಮಂತ್ರ ಜಪಿಸಿದರೂ ಇಬ್ಬರೂ ಬೆಂಬಲಿಗರ ಸಿಎಂ ಕುರ್ಚಿ ಕದನ ಕಾಂಗ್ರೆಸ್ ನಲ್ಲಿ ನಿಲ್ಲುವಂತೆ ಕಾಣುತ್ತಿಲ್ಲ. ಬೆಳಗಾವಿ ಅಧಿವೇಶನ ಮಧ್ಯೆ ಸಿಎಂ ಕುರ್ಚಿ ಗುದ್ದಾಟ ಮತ್ತೆ ಸದ್ದು ಮಾಡುತ್ತಿದೆ.

ಪುಟ 2ಕ್ಕೆ

## ಪುತ್ರನಿಗೆ ಬುದ್ಧಿ ಹೇಳಿದ ಸಿದ್ದು

**ಬೆಳಗಾವಿ:** ಮುಖ್ಯಮಂತ್ರಿ ಬದಲಾವಣೆ ಕುರಿತು ಯಾವುದೇ ಹೇಳಿಕೆ ನೀಡದಂತೆ ಪುತ್ರ ಯತೀಂದ್ರ ಅವರಿಗೆ ಸಿದ್ದರಾಮಯ್ಯ ಕರೆದು ಬುದ್ಧಿ ಹೇಳಿದ್ದಾರೆ ಎನ್ನಲಾಗಿದೆ. ಬೆಳಗಾವಿಯ ಸರ್ಕಿಟ್ ಹೌಸ್‌ಗೆ ಪುತ್ರನನ್ನು ಕರೆಸಿಕೊಂಡ ಸಿಎಂ ಸಿದ್ದರಾಮಯ್ಯ ಸುಮಾರು 1 ಗಂಟೆ ಕಾಲ ಮಾತುಕತೆ ನಡೆಸಿದ್ದಾರೆ. ಬಳಿಕ ಪದೇ ಪದೇ ಈ ರೀತಿ ಮಾತನಾಡದಂತೆ ಕಿವಿಮಾತು ಹೇಳಿದ್ದಾರೆ ಎಂದು ತಿಳಿದುಬಂದಿದೆ.

ಏನಿದ್ದರೂ ಹೈಕಮಾಂಡ್ ತೀರ್ಮಾನ ಮಾಡಲಿದೆ. ನೀನು ಮಾತನಾಡುವುದು ಬೇಡ. ಯಾರೂ ಮಾತನಾಡಬಾರದು ಎಂದು ಹೈಕಮಾಂಡ್ ಸೂಚನೆ ಇದೆ. ಯಾರೂ ಮಾತನಾಡುತ್ತಿಲ್ಲ ನೀನೊಬ್ಬನೇ

ಪುಟ 2ಕ್ಕೆ

# ಅನಧಿಕೃತ ಸ್ವತ್ತುಗಳಿಗೆ ಎ ಖಾತೆ

**ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ: ಸಚಿವ ಬೈರತಿ ಸುರೇಶ್**

**ಬೆಳಗಾವಿ:** ಆಯಾ ಪ್ರಾಧಿಕಾರದಿಂದ ಅನುಮೋದನೆ ಪಡೆಯದೆ ಅಭಿವೃದ್ಧಿಪಡಿಸಲಾಗಿರುವ ಅನಧಿಕೃತ ಬಡಾವಣೆಗಳ ಸ್ವತ್ತುಗಳಿಗೆ ಎ ಖಾತಾ ನೀಡುವ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸಿ, ನಿರ್ಧಾರ ಕೈಗೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಭರವಸೆ ನೀಡಿದರು.



ವಿಧಾನಪರಿಷತ್‌ನಲ್ಲಿ ಕಾಂಗ್ರೆಸ್‌ನ ರಾಮೋಜಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ ವಿನ್ಯಾಸಗಳು, ವಿವಿಧ ಯೋಜನೆಗಳಲ್ಲಿ ಮಂಜೂರಾದ ನಿವೇಶನಗಳಿಗೆ ಈಗಾಗಲೇ ಬಿ ಖಾತಾ ನೀಡಲಾಗುತ್ತಿದೆ. ಮೊದಲು ನಿವೇಶನಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲಾಗುತ್ತಿದೆ. ಎ ಖಾತಾ ನೀಡಲು ಬೇಡಿಕೆ ಇದೆ ಎಂದು ತಿಳಿಸಿದರು.

ಪೌರಾಡಳಿತ ಸಚಿವ ರಹೀಂ ಖಾನ್ ಮಾತನಾಡಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದ ವಿನ್ಯಾಸಗಳ, ಗ್ರಾಮಠಾಣಾ, ವಿವಿಧ ಯೋಜನೆಯಡಿ ಮಂಜೂರಾದ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಗಿ ನೀಡಲಾಗುತ್ತಿದೆ. ಇದರಿಂದಾಗಿ ಭೂಪರಿವರ್ತನೆ ಹಾಗೂ ಕಟ್ಟಡ ನಿರ್ಮಾಣಕ್ಕೆ ಯಾವುದೇ ರೀತಿಯ ತೊಂದರೆ ಇಲ್ಲ. ಅಧಿಕೃತ ನಿವೇಶನ ಕಟ್ಟಡಗಳಿಗೆ ನಮೂನೆ-3 ಮತ್ತು ಅನುಮೋದನೆ ಪಡೆಯದ ಸ್ವತ್ತುಗಳಿಗೆ ನಮೂನೆ 3ಎ

ಪುಟ 2ಕ್ಕೆ

## ಸ್ಥಳೀಯ ಸಂಸ್ಥೆಗಳ ಗೌರವಧನ ಹೆಚ್ಚಳ: ರಹೀಂಖಾನ್ ಭರವಸೆ

**ಬೆಳಗಾವಿ:** ರಾಜ್ಯದ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರ ಗೌರವ ಧನ ಹೆಚ್ಚಳಕ್ಕೆ ಶೀಘ್ರ ನಿರ್ಧಾರ ಮಾಡುವುದಾಗಿ ಸಚಿವ ರಹೀಂಖಾನ್ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಸುನೀಲ್ ಗೌಡ ಪಾಟೀಲ್ ಪ್ರಶ್ನೆ ಕೇಳಿದರು. ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರಿಗೆ ಗೌರವ ಧನ ಹೆಚ್ಚಿಸಬೇಕು. ತಮಿಳುನಾಡು, ಮಹಾರಾಷ್ಟ್ರ, ಕೇರಳಾ ಸೇರಿ ಹಲವು ರಾಜ್ಯಗಳಲ್ಲಿ ಗೌರವ ಧನ ಜಾಸ್ತಿ ಇದೆ. ರಾಜ್ಯದಲ್ಲಿ ಕಳೆದ 9 ವರ್ಷಗಳಿಂದ ಗೌರವ ಧನ ಜಾಸ್ತಿ ಮಾಡಿಲ್ಲ. 800, 1,200 ರೂ. ಗೌರವ ಧನ ಸಾಕಾಗುತ್ತದೆಯಾ? ಎರಡು ಬಾರಿ ನಾನು ಪ್ರಶ್ನೆ ಕೇಳಿದರೂ ಸಮಸ್ಯೆ ಬಗೆಹರಿದಿಲ್ಲ. ಕೂಡಲೇ ಗೌರವ ಧನ ಜಾಸ್ತಿ ಮಾಡಿ ಎಂದು ಆಗ್ರಹಿಸಿದ್ದಾರೆ.

ಇದಕ್ಕೆ ಸಚಿವ ರಹೀಂಖಾನ್ ಉತ್ತರ ನೀಡಿ, ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರ ಗೌರವ ಧನ ಕಡಿಮೆ ಇದೆ. ಆರ್ಥಿಕ ಇಲಾಖೆ

ಪುಟ 2ಕ್ಕೆ

# ಮುಟ್ಟಿನ ರಜೆ ಅಧಿಸೂಚನೆಗೆ ತಡೆ ನೀಡಿ, ಕೆಲವೇ ಗಂಟೆಗಳಲ್ಲಿ ಆದೇಶ ಹಿಂಪಡೆದ ಹೈಕೋರ್ಟ್





**ಬೆಂಗಳೂರು:** ರಾಜ್ಯದ ಮಹಿಳಾ ನೌಕರರಿಗೆ ವೇತನ ಸಹಿತ ಮಾಸಿಕ ಒಂದು ದಿನ ಋತುಚಕ್ರ ರಜೆ ಸೌಲಭ್ಯ ಒದಗಿಸುವ ರಾಜ್ಯ ಸರ್ಕಾರದ ಅಧಿಸೂಚನೆಗೆ ತಡೆ ನೀಡಿದ್ದ ಹೈಕೋರ್ಟ್ ಕೆಲವೇ ಗಂಟೆಗಳಲ್ಲಿ ತನ್ನ ಮಧ್ಯಂತರ ಆದೇಶವನ್ನು ಹಿಂಪಡೆದಿದೆ.

ರಾಜ್ಯ ಸರ್ಕಾರದ ತೀವ್ರ ಆಕ್ಷೇಪದ ಹಿನ್ನೆಲೆಯಲ್ಲಿ ಕರ್ನಾಟಕ ಹೈಕೋರ್ಟ್ ಮಂಗಳವಾರ ತನ್ನ ಮಧ್ಯಂತರ ಆದೇಶವನ್ನು ಹಿಂಪಡೆಯಿತು. ಪ್ರಕರಣವನ್ನು ವಿಸ್ತೃತವಾಗಿ ಆಲಿಸಿ ಮಧ್ಯಂತರ ಆದೇಶದ ಕುರಿತು ನ್ಯಾಯಾಲಯವು ನಾಳೆ ಆದೇಶ ಮಾಡಲಿದೆ.

ಬೆಂಗಳೂರು ಹೋಟೆಲುಗಳ ಸಂಘ ಮತ್ತು ದಿ ಮ್ಯಾನೇಜ್‌ಮೆಂಟ್ ಆಫ್ ಅವಿರತ ಎಎಫ್‌ಎಲ್ ಕನೆಕ್ಟಿವಿಟಿ ಸಿಸ್ಟಮ್ಸ್ ಲಿಮಿಟೆಡ್ ಕೋರಿಕೆಯಂತೆ ರಾಜ್ಯ ಸರ್ಕಾರದ ಕಾರ್ಮಿಕ ಇಲಾಖೆ 2025ರ ನವೆಂಬರ್ 20ರಂದು ಹೊರಡಿಸಿರುವ ಅಧಿಸೂಚನೆಗೆ ತಡೆ ನೀಡಲಾಗಿದೆ.

ರಾಜ್ಯ ಸರ್ಕಾರವು ತಡೆಯಾಜ್ಞೆ ತೆರವಿಗೆ ಅರ್ಜಿ ಸಲ್ಲಿಸುವ ಸ್ವಾತಂತ್ರ್ಯ ಹೊಂದಿದೆ" ಎಂದು ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರ ಏಕಸದಸ್ಯ ಪೀಠ ಬೆಳಿಗ್ಗೆ ಆದೇಶಿಸಿತ್ತು. ಈ ಬೆಳವಣಿಗೆಯ ಬೆನ್ನಲೇ ಪೀಠವು ಭೋಜನಕ್ಕೆ ತೆರಳುವುದಕ್ಕೂ ಮುನ್ನ ಹಾಜರಾದ ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು "ಋತುಚಕ್ರದ ರಜೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೀತಿ ರೂಪಿಸಬೇಕು ಎಂದು ಸುಪ್ರೀಂ ಕೋರ್ಟ್ ಪ್ರಕರಣವೊಂದರಲ್ಲಿ ಆದೇಶ ಮಾಡಿದೆ. ಅದೇ ರೀತಿ ಕಾನೂನು ಆಯೋಗವು

ಪುಟ 2ಕ್ಕೆ

# ಮತ್ತೆ ಟಿಪ್ಪು ಜಯಂತಿ ದಂಗಲ್

**ವಿವಾದ ಹುಟ್ಟುಹಾಕಿದ ಶಾಸಕ ಕಾಶಪ್ಪನವರ್ ಹೇಳಿಕೆ**

**ಬೆಂಗಳೂರು:** ರಾಜ್ಯದಲ್ಲಿ ಮತ್ತೊಮ್ಮೆ ಟಿಪ್ಪು ಜಯಂತಿ ವಿವಾದ ಭುಗಿಲೆದ್ದಿದೆ. ಶಾಸಕ ವಿಜಯಾನಂದ ಕಾಶಪ್ಪನವರ್ ಸದನದಲ್ಲಿ ಮಂಗಳವಾರ ವಿಚಾರ ಪ್ರಸ್ತಾಪ ಮಾಡಿದರು. ಆದರೆ, ಟಿಪ್ಪು ಜಯಂತಿಗೆ ವಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿವೆ.



ಟಿಪ್ಪು ಜಯಂತಿ ಪ್ರಸ್ತಾಪ ವಿಚಾರವನ್ನು ಕಾಶಪ್ಪನವರ್ ಸಮರ್ಥಿಸಿಕೊಂಡಿದ್ದಾರೆ. ಎಲ್ಲಾ ಜಾತಿ, ಜನಾಂಗ ಇರುವ ಜಾತ್ಯತೀತ ರಾಷ್ಟ್ರದಲ್ಲಿ ವಿರೋಧ ಯಾಕೆ? ಅಲ್ಪಸಂಖ್ಯಾತರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿಲ್ವಾ? ಯಡಿಯೂರಪ್ಪ, ಶೆಟ್ಟರ್ ಟಿಪ್ಪು ವೇಷ ಹಾಕಿರಲಿಲ್ಲವೇ ಎಂದು ಪ್ರಶ್ನಿಸಿದರು.

ವಿವಾದದ ಕುರಿತು ಸಚಿವ ಜಮೀರ್ ಅಹ್ಮದ್ ಪ್ರತಿಕ್ರಿಯಿಸಿ, ಪ್ರತಿ ವರ್ಷ ಕರ್ನಾಟಕ ಸೇರಿ ದೇಶಾದ್ಯಂತ ಟಿಪ್ಪು ಜಯಂತಿಯನ್ನು ಅಭಿಮಾನಿಗಳು ಆಚರಿಸಿಕೊಂಡು ಬರುತ್ತಿದ್ದಾರೆ. ಅದೇನು

ಪುಟ 2ಕ್ಕೆ

## ಕಾಲಹರಣಕ್ಕೆ ಟಿಪ್ಪು ಟ್ರಂಪ್ ಕಾರ್ಡ್: ಛಲವಾದಿ ಆಕ್ರೋಶ

**ಬೆಳಗಾವಿ:** ಕಾಂಗ್ರೆಸ್ ನಾಯಕರ ಹೇಳಿಕೆಗೆ ವಿಪಕ್ಷ ನಾಯಕರು ಕಿಡಿಕಾರಿದ್ದಾರೆ. ಕಾಂಗ್ರೆಸ್ ಎಂದರೆ ಟಿಪ್ಪು ಪಾರ್ಟಿ. ಪ್ರಚಾರ ಗಿಟ್ಟಿಸಲು ವಿವಾದ ಹುಟ್ಟು ಹಾಕಲಾಗುತ್ತಿದೆ. ಇಸ್ಲಾಂನಲ್ಲಿ ವ್ಯಕ್ತಿಗಳ ಜಯಂತಿ ಆಚರಣೆ ಮಾಡುವುದಕ್ಕೆ ನಿಷೇಧವಿದೆ. ಅಧಿವೇಶನದ ಹಾದಿ ತಪ್ಪಿಸಲು ಹಾಗೂ ಕಾಲಹರಣ ಮಾಡಲು ಟಿಪ್ಪು ಕಾರ್ಡ್

ಪುಟ 2ಕ್ಕೆ



# ನಿಜವಾದ ವಿಪಕ್ಷ ನಾಯಕ ನಾನೇ!

**ಉಪ ಸಭಾಪತಿ ಪಕ್ಕದ ಕುರ್ಚಿ ನೀಡಲು ಯತ್ನಾಳ್ ಆಗ್ರಹ**

**ಬೆಳಗಾವಿ:** ನಿಜವಾದ ವಿರೋಧ ಪಕ್ಷದ ನಾಯಕ ನಾನೇ. ನನಗೆ ವಿಧಾನಸಭೆಯಲ್ಲಿ ಉಪ ಸಭಾಪತಿ ಪಕ್ಕದ ಕುರ್ಚಿ ನೀಡಿ ಎಂದು ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಗ್ರಹಿಸಿದರು.

ಅಧಿವೇಶನದಲ್ಲಿ ಮಂಗಳವಾರ ಮಾತನಾಡಿದ ಅವರು, ಬಿಜೆಪಿಯಿಂದ ಉಚ್ಚಾಟಿಸಲ್ಪಟ್ಟಿರುವ ಇತರ ಇಬ್ಬರು ಶಾಸಕರಿಗೆ ಹಿರಿತನವನ್ನು ಪರಿಗಣಿಸಿ ಮುಂದಿನ ಸಾಲಿನಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಮಾಡುವಂತೆ ಯತ್ನಾಳ್ ಸಭಾಪತಿಗೆ ಮನವಿ ಮಾಡಿದರು.

ಬಿಜೆಪಿಯಿಂದ ಉಚ್ಚಾಟಿಸಲ್ಪಟ್ಟ ನಂತರ ಯತ್ನಾಳ್, ಎಸ್.ಟಿ ಸೋಮಶೇಖರ್ ಮತ್ತು ಎ.ಶಿವರಾಮ್ ಹೆಬ್ಬಾರ್ ಅವರನ್ನು ಹಿಂದಿನ ಬೆಂಚ್‌ಗಳಿಗೆ ವರ್ಗಾಯಿಸಲಾಗಿದೆ. ಹಿರಿಯ ಶಾಸಕರನ್ನು ಹಿಂದಿನ ಬೆಂಚುಗಳಲ್ಲಿ ಕೂರಿಸುವ ಮೂಲಕ ಅವಮಾನಿಸಲಾಗಿದೆ. ಹಿಂದಿನ ಅಧಿವೇಶನದಲ್ಲೂ ಹೀಗೆ ಮಾಡಲಾಗಿತ್ತು. ನಾವು ಐದರಿಂದ ಆರು ಬಾರಿ ಆಯ್ಕೆಯಾಗಿದ್ದೇವೆ. ನಮ್ಮನ್ನು ಮುಂದಿನ ಸಾಲಿನಲ್ಲಿ ಕೂರಿಸಲು ವ್ಯವಸ್ಥೆ ಮಾಡಬೇಕು ಎಂದು ಯತ್ನಾಳ್




## ನಾನು ಹೊಂದಾಣಿಕೆ ವ್ಯಕ್ತಿಯಲ್ಲ: ಅಶೋಕ್‌ಗೆ ಯತ್ನಾಳ್ ಲೇವಡಿ

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸದನದಲ್ಲಿ ಹಾಜರಿದ್ದರೂ, ತಾವು ವಿಧಾನಸಭೆಯಲ್ಲಿ ನಿಜವಾದ ವಿರೋಧ ಪಕ್ಷದ ನಾಯಕ ಎಂದು ಹೇಳಿಕೊಂಡರು. ನಾನು ಯಾವುದೇ ಹೊಂದಾಣಿಕೆಯಲ್ಲಿ ತೊಡಗಿಸಿಕೊಳ್ಳುವ ವ್ಯಕ್ತಿಯಲ್ಲ. ನಾನು ಯಾರೊಂದಿಗೂ ಯಾವುದೇ ಅಡ್ಜಸ್ಟ್‌ಮೆಂಟ್ ಮಾಡಿಕೊಂಡಿಲ್ಲ ಎಂದರು. ನಾನು ಮುಖ್ಯಮಂತ್ರಿ ಕಚೇರಿಗೆ ಹೋಗಿಲ್ಲ. ಯಾವುದೇ ಸಚಿವರಿಗೆ ಯಾವುದೇ

ಪುಟ 2ಕ್ಕೆ

# ಇಂಡಿಗೋ ವಿಮಾನ ಹಾರಾಟ ಸಮಸ್ಯೆ ಕೊನೆಗೂ ನಿವಾರಣೆ



**ನವದೆಹಲಿ:** ಕಳೆದ ಒಂದು ವಾರದಿಂದ ತೀವ್ರ ಅಡಚಣೆಗೊಳಗಾಗಿದ್ದ ಇಂಡಿಗೋ ವಿಮಾನ ಸೇವೆಗಳಲ್ಲಿನ ಗೊಂದಲ ಕೊನೆಗೂ ನಿವಾರಣೆಯಾಗಿದೆ. ಇಂದಿನಿಂದ ಎಂದಿನಂತೆ ವಿಮಾನ ಸೇವೆಗಳು ಸಾಮಾನ್ಯ ಸ್ಥಿತಿಗೆ ಬಂದಿವೆ ಎನ್ನಲಾಗಿದೆ.

ಇಂಡಿಗೋ ವಿಮಾನಯಾನ ಸಂಸ್ಥೆ ಸಿಇಒ ಪೀಟರ್ ಆಲ್ಬರ್ಸ್, ಇಂಡಿಗೋ ಮತ್ತೆ ತನ್ನ ಕಾರ್ಯತಂತ್ರ ಆರಂಭಿಸಿದೆ. ಎಂದಿನಂತೆ ಸ್ಥಿರ ಕಾರ್ಯಾಚರಣೆ ಸಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪೀಟರ್ ಆಲ್ಬರ್ಸ್, ನಿಮ್ಮ ವಿಮಾನಯಾನ ಸಂಸ್ಥೆ, ಇಂಡಿಗೋ ಮತ್ತೆ ತನ್ನ ಕಾರ್ಯತಂತ್ರ ಆರಂಭಿಸಿದೆ ಮತ್ತು ನಮ್ಮ ಕಾರ್ಯಾಚರಣೆಗಳು ಸ್ಥಿರವಾಗಿವೆ. ಪ್ರಮುಖ ಕಾರ್ಯಾಚರಣೆಯ ಅಡಚಣೆ ಸಂಭವಿಸಿದಾಗ ನಾವು ನಿಮ್ಮನ್ನು ನಿರಾಸೆಗೊಳಿಸಿದ್ದೇವೆ ಮತ್ತು ಅದಕ್ಕಾಗಿ ನಾವು

# ಸುವರ್ಣಸೌಧ ಮುತ್ತಿಗೆಗೆ ಬಿಜೆಪಿ ಯತ್ನ

**ವಿಪಕ್ಷ ನಾಯಕರ ಬಂಧಿಸಿದ ಪೊಲೀಸರು । ಸರ್ಕಾರದ ವಿರುದ್ಧ ಆಕ್ರೋಶ**

**ಬೆಳಗಾವಿ:** ರಾಜ್ಯ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನೀತಿಗಳನ್ನು ಖಂಡಿಸಿ ಬಿಜೆಪಿ ಮಂಗಳವಾರ ಬೆಳಗಾವಿಯಲ್ಲಿ ರೈತರೊಂದಿಗೆ ಪ್ರತಿಭಟನೆ ನಡೆಸಿತು. ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು. ರೈತರೊಂದಿಗೆ ಸುವರ್ಣ ಸೌಧ ಮುತ್ತಿಗೆಗೆ ಯತ್ನಿಸಿದ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ ಮತ್ತು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಹಲವಾರು ಶಾಸಕರು, ಎಂಎಲ್‌ಸಿಗಳು ಮತ್ತು ಪಕ್ಷದ ಇತರ ಹಿರಿಯ ನಾಯಕರ ನೇತೃತ್ವದಲ್ಲಿ ಮಾಲಿನಿ ಸಿಟಿ ಮೈದಾನದಲ್ಲಿ ಪ್ರತಿಭಟನಾಕಾರರ ಬೃಹತ್ ಗುಂಪು ಜಮಾಯಿಸಿತು.

ರಾಜ್ಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳು ಮತ್ತು ಕಾಂಗ್ರೆಸ್ ಸರ್ಕಾರದ 'ವೈಫಲ್ಯಗಳನ್ನು' ಎತ್ತಿ ತೋರಿಸಲು ಪ್ರತಿಭಟನೆ ನಡೆಸಲಾಯಿತು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ರಾಜ್ಯದ ರೈತರ



ಸಂಕಷ್ಟವನ್ನು ನಿರ್ಲಕ್ಷಿಸಿದೆ ಎಂದು ಪಕ್ಷದ ನಾಯಕರು ಕಿಡಿಕಾರಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಸಿಟಿ ರವಿ ಸೇರಿ ಹಲವು ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಹಲಗಾ ಗ್ರಾಮದ ಬಳಿ ಬ್ಯಾರಿಕೇಡ್ ಹಾಕಿ ಪ್ರತಿಭಟನಾಕಾರರನ್ನು ಪೊಲೀಸರು ತಡೆದಿದ್ದು, ಈ ವೇಳೆ ತಳ್ಳಾಟ, ನೂಕಾಟ ನಡೆಯಿತು.

ಮೆಕ್ಕೆಜೋಳ ಮತ್ತು ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಪರಿಹರಿಸಲು ರಾಜ್ಯ ಸರ್ಕಾರ ವಿಫಲವಾಗಿದೆ. ಮೆಕ್ಕೆಜೋಳ ರೈತರು

ಪುಟ 2ಕ್ಕೆ

# ಚಾಮುಂಡಿ ಬೆಟ್ಟದ ಸೇವೆಗಳ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ



ಮೈಸೂರು: ಚಾಮುಂಡೇಶ್ವರಿ ಬೆಟ್ಟದ ದರ್ಶನ ಹಾಗೂ ಸೇವೆಗಳ ಶುಲ್ಕಗಳನ್ನು ಏರಿಸಿರುವ ರಾಜ್ಯ ಸರ್ಕಾರದ ಅವೈಜ್ಞಾನಿಕ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆವತಿಯಿಂದ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟಿಸಲಾಯಿತು.

ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಪ್ರತಿನಿತ್ಯ ಒಂದಲ್ಲ ಒಂದು ದಿನನಿತ್ಯ ಪದಾರ್ಥಗಳು ಹಾಗೂ ಎಲ್ಲದರ ಬೆಲೆಗಳನ್ನು ಏರಿಕೆ ಮಾಡಿ ರಾಜ್ಯದ ಜನರು ಜೀವನ ನಡೆಸುವುದೇ ದುಸ್ತರವಾಗಿದೆ. ಈಗಾಗಲೇ ಕೋಟ್ಯಂತರ ಆದಾಯವಿರುವ ಚಾಮುಂಡಿ ಬೆಟ್ಟಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನುಕೂಲ ಮಾಡಿಕೊಡದೆ ಲೂಟಿ ಮಾಡಲು ಹೊರಟಿರುವುದು ಅತ್ಯಂತ ಖಂಡನೀಯ. ಚಾಮುಂಡಿ ಬೆಟ್ಟದಲ್ಲಿ ದೇವಸ್ಥಾನದಿಂದ ಪ್ರಸಾದದ ರೂಪದಲ್ಲಿ ನೀಡಲಾಗುವ ಲಡ್ಡು ದರವನ್ನು 15 ರೂಪಾಯಿಯಿಂದ 25 ರೂಪಾಯಿಗೆ ಏಕಾಏಕಿ ಹೆಚ್ಚಿಸಿರುವುದು ದೇವಿ ಭಕ್ತರಿಗೆ ಆಕ್ರೋಶವನ್ನುಂಟುಮಾಡಿದೆ. ಜೊತೆಗೆ ಈ ಲಡ್ಡುವಿನ ಗುಣಮಟ್ಟವಂತೂ ತೀರಾ ಕಳಪೆಯಾಗಿದೆ ಎಂದು ಹೇಳಲಾಗುತ್ತಿದೆ. ಜೊತೆಗೆ ದೇವಿ ದರ್ಶನಕ್ಕೆ ಪ್ರವೇಶ ದರ 30ರೂ. ನಿಂದ 50ರೂ. ಗೆ ಹಾಗೂ 100ರೂ. ನಿಂದ 200ರೂ. ಗೆ ಅವೈಜ್ಞಾನಿಕವಾಗಿ ಹೆಚ್ಚಿಸಿದೆ ಎಂದು ಆರೋಪಿಸಿದರು.

ಚಾಮುಂಡಿ ಬೆಟ್ಟದಲ್ಲಿ ನಾಮಪಲಕದಲ್ಲಿ 20ರೂ ನಿಂದ 15 ಸಾವಿರದ ತನಕ ವಿಶೇಷ ಸೇವೆಗಳಿವೆ. ಅದರಲ್ಲಿ 220 ಹಾಗೂ 300 ರೂ.ಗಳ ಅಭಿಷೇಕ ಸೇವೆಯನ್ನು ಬಹಳ ಭಕ್ತಾದಿಗಳು ಪ್ರತಿದಿನ ಮಾಡಿಸುತ್ತಿದ್ದು, ಅದನ್ನು ಪ್ರಾಧಿಕಾರ ಈಗ ಅನಧಿಕೃತವಾಗಿ ತೆಗೆದುಹಾಕಿ ಬರಿ 550ರೂ.ಗಳನ್ನು ಅಭಿಷೇಕಕ್ಕಾಗಿ ಜನರು, ಭಕ್ತಾದಿಗಳಿಂದ ವಸೂಲಿ ಮಾಡಲಾಗುತ್ತಿದೆ. ಭಕ್ತಾದಿಗಳ ಮೇಲೆ ಸರ್ಕಾರ ಹೊರೆಹಾಕಲು ಹೊರಟಿರುವುದು ಅತ್ಯಂತ ದುಃಖಕರ ಸಂಗತಿ. ರಾಜ್ಯ ಸರ್ಕಾರ ಜನತೆಗೆ ಬಿಟ್ಟಿ ಭಾಗ್ಯಗಳನ್ನು ನೀಡುತ್ತೇವೆಂದು ಅಧಿಕಾರಕ್ಕೆ ಬಂದು ಚಾಮುಂಡಿ ಬೆಟ್ಟದ ದರ್ಶನದ ದರಗಳನ್ನು ಇಳಿಸುವುದರ ಬದಲು, ಎರಡು ಪಟ್ಟು ಹೆಚ್ಚಿಸಿರುವುದು ಶೋಚನೀಯ ಸಂಗತಿಯಾಗಿದೆ ಎಂದರು.

ಸರ್ಕಾರ ಮೊದಲು 100 ರೂ.ಗೆ ವಿಶೇಷ ಪಡೆಯುತ್ತಿದ್ದ ಭಕ್ತರಿಗೆ ಈಗ 1,000ರೂ. ಟಿಕೆಟ್ ಪಡೆದರೆ 15 ನಿಮಿಷದಲ್ಲೇ ದರ್ಶನ ಮಾಡಿಸುತ್ತೇವೆ ಎಂದು ಹೇಳಿ ಭಕ್ತಾದಿಗಳ ಕಿವಿಗೆ ಹೂವು ಮುಡಿಸಲು ಹೊರಟಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿ. ಆಷಾಡಮಾಸದಲ್ಲಿ ಈ ವಿಶೇಷ ದರ್ಶನದ ರುಚಿಯನ್ನು ಕಂಡಿರುವ ಸರ್ಕಾರ ಹಾಗೂ ಬೆಟ್ಟದ ಕಾರ್ಯದರ್ಶಿರವರು ಭಕ್ತಾದಿಗಳಿಂದ ಹಗಲು ದರೋಡೆ ಮಾಡಲು ಹೊರಟಿದ್ದಾರೆ. ಈ ಕೂಡಲೇ ಮುಖ್ಯಮಂತ್ರಿಗಳು ಶೀಘ್ರ ಸಭೆ ನಡೆಸಿ ಇದಕ್ಕೆಲ್ಲಾ ಕಡಿವಾಣ ಹಾಕಿ ಎಲ್ಲಾ ದರ್ಶನ ಸೇವೆಗಳನ್ನು ಯಥಾಸ್ಥಿತಿಗೆ ತರಬೇಕು ಎಂದು ಆಗ್ರಹಿಸಿದರು.

ಸೇನಾಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಸುರೇಶ್ ಗೋಲ್ಡ್, ಪ್ರಭುಶಂಕರ, ಕೃಷ್ಣಪ್ಪ, ಹನುಮಂತೇಗೌಡ, ಗಿರೀಶ್, ಸಿಂದುವಳ್ಳಿ ಶಿವಕುಮಾರ್, ಬೋಗಾದಿ ಸಿದ್ದೇಗೌಡ, ಶಿವಲಿಂಗಯ್ಯ, ನೇಹಾ, ಮಂಜುಳಾ, ಮಧುವನ ಚಂದ್ರು, ಹೊನ್ನೇಗೌಡ, ತಾಯೂರು ಗಣೇಶ್, ಡಾ. ನರಸಿಂಹೇಗೌಡ, ಬಸವರಾಜು, ಭಾಗ್ಯಮ್ಮ, ಸುಜಾತಾ, ಪ್ರಭಾಕರ್, ಡಾ.ಶಾಂತರಾಜೇಅರಸ್, ರಾಧಾಕೃಷ್ಣ, ನಂದಕುಮಾರ್, ದರ್ಶನ್ ಗೌಡ, ಪ್ರದೀಪ್, ರಘು ಅರಸ್, ಶಿವರಾಂ, ಗಣೇಶ್ ಪ್ರಸಾದ್, ಚಂದ್ರಶೇಖರ್, ರವೀಶ್, ರವಿ ನಾಯಕ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ರೈತನ ಮೇಲೆ ಚಿರತೆ ದಾಳಿ

ಕೆ.ಆರ.ಪೇಟೆ: ತಾಲ್ಲೂಕಿನ ಕಸಬಾ ಹೋಬಳಿಯ ಕತ್ತರಘಟ್ಟ ಗ್ರಾಮದಲ್ಲಿ ರೈತನ ಮೇಲೆ ಚಿರತೆ ದಾಳಿಮಾಡಿ ಗಂಭೀರವಾಗಿ ಗಾಯಗೊಳಿಸಿರುವ ಘಟನೆ ಸೋಮವಾರ ರಾತ್ರಿ ನಡೆದಿದೆ.

ಕತ್ತರಘಟ್ಟ ಗ್ರಾಮದ ಸತೀಶ್ ರವರ ಮಗ ಕಿರಣ್ ಅವರೇ ಚಿರತೆ ದಾಳಿಗೆ ಒಳಗಾಗಿ ಗಾಯಗೊಂಡಿರುವ ರೈತ. ಸೋಮವಾರ ರಾತ್ರಿ ಸುಮಾರು 9ಗಂಟೆಯ ಸಮಯದಲ್ಲಿ ಜಮೀನು ಕಡೆ ಹೋಗಿದ್ದು ವಾಪಸ್ ಗ್ರಾಮಕ್ಕೆ ಬರುವಾಗ ಚಿರತೆ ದಾಳಿ ಮಾಡಿದೆ. ಚಿರತೆಯು ಕಿರಣ್ ಅವರ ಮೇಲೆ ದಾಳಿ ಮಾಡಿದಾಗ ಹೆದರದೇ ಚಿರತೆಯೊಂದಿಗೆ



ಹೋರಾಡಿ ಪ್ರಾಣಾಪಾಯದಿಂದ ಪಾರಾಗಿ ಬಂದಿದ್ದಾರೆ.

ಇದೇ ರೀತಿ ಹಲವು ರೈತರ ಮೇಲೆ ದಾಳಿಗೆ ವಿಫಲ ಯತ್ನ ನಡೆಸಿದ್ದ ಚಿರತೆಯು ಕೊನೆಗೂ ರೈತ ಕಿರಣ್ ಮೇಲೆ ಮಾರಣಾಂತಿಕ ದಾಳಿ ನಡೆಸಿ ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದೆ.

ರೈತರ ಸಾಕುಪ್ರಾಣಿಗಳಾದ ಕುರಿ ಮೇಕೆ, ಹಸು ಎಮ್ಮೆಗಳನ್ನು ಕನಿಷ್ಠ ವಾರಕ್ಕೊಮ್ಮೆಯಾದರೂ ಹೊತ್ತೊಯ್ದು ತಿಂದು ಹಾಕುತ್ತಿರುವ ಚಿರತೆಯನ್ನು ಹಿಡಿಯುವಲ್ಲಿ ಅರಣ್ಯ ಇಲಾಖೆಯು ವಿಫಲವಾಗಿದೆ ಎಂದು ಕತ್ತರಘಟ್ಟ ಗ್ರಾಮಸ್ಥರು ಅಸಮಧಾನ ವ್ಯಕ್ತಪಡಿಸಿದ್ದಾರೆ.

ಈಗ ರೈತನ ಮೇಲೆ ಚಿರತೆ ದಾಳಿ ಮಾಡಿದ್ದು, ಗಾಯಗೊಂಡ ರೈತ ಕಿರಣ್ ಅವರಿಗೆ ಅಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿದೆ. ಚಿರತೆ ದಾಳಿಯ ಮಾಡಿ ರೈತ ಗಾಯಗೊಂಡಿರುವ ಬಗ್ಗೆ ಸಂಬಂಧಪಟ್ಟ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಮಾಹಿತಿ ನೀಡಿದರೂ ಸಹ ಅರಣ್ಯ ಇಲಾಖೆಯ ಅಧಿಕಾರಿಗಳು ರೈತನನ್ನು ಬೇಟಿ ಮಾಡಿ ಇಲಾಖೆಯ ವತಿಯಿಂದ ಸಿಗುವ ಸೌಲಭ್ಯವನ್ನು ಒದಗಿಸಿಕೊಡುವಲ್ಲಿ ವಿಫಲವಾಗಿದೆ. ಹಾಗಾಗಿ ತಾಲ್ಲೂಕು ಆಡಳಿತವು ರೈತನ ನೆರವಿಗೆಸಹಕರಿಸಬೇಕೆಂದು ಕಾಡು ಪ್ರಾಣಿಗಳಿಂದ ಪ್ರಾಣಾಪಾಯದಿಂದ ಪಾರಾಗುವ ಚಿಕಿತ್ಸೆ ಕೊಡಿಸುವ ಮೂಲಕ ರೈತನ ನೆರವಿಗೆ ತಾಲೂಕು ಆಡಳಿತ ಸಹಕರಿಸಬೇಕೆಂದು ಕತ್ತರಘಟ್ಟ ಗ್ರಾಮಸ್ಥರು ಅಗ್ರಹಿಸಿದ್ದಾರೆ.

## ಗಾಯಾಳು ರೈತನಿಗೆ ಚಿಕಿತ್ಸೆಗೆ ನೆರವಾದ ತಹಸೀಲ್ದಾರ್

ಅರಣ್ಯ ಇಲಾಖೆಯ ಅಧಿಕಾರಿಗಳು ರೈತನ ಮೊಬೈಲ್ ಕರೆ ಸ್ವೀಕರಿಸದೇ ಇರುವ ಕಾರಣ ತಾಲ್ಲೂಕು ಆಡಳಿತದ ಮುಖ್ಯಸ್ಥರಾದ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಅವರಿಗೆ ಅಗತ್ಯ ಚಿಕಿತ್ಸೆ ಕೊಡಿಸಲು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಆದೇಶ ನೀಡುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ. ಗ್ರಾಮಸ್ಥರ ಮನವಿಗೆ ಸ್ಪಂಧಿಸಿದ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಕೂಡಲೇ ಅರಣ್ಯ ಇಲಾಖೆಯ ಆರ್.ಎಫ್.ಓ ಅನಿತಾ ಅವರಿಗೆ ದೂರವಾಣಿ ಕರೆ ಮಾಡಿ ಚಿರತೆ ದಾಳಿಯಿಂದ ಗಾಯಗೊಂಡಿರುವ ಕತ್ತರಘಟ್ಟ ರೈತನ ಚಿಕಿತ್ಸೆಗೆ ಅರಣ್ಯ ಇಲಾಖೆಯ ವತಿಯಿಂದ ಅಗತ್ಯ ಸಹಕಾರ ನೀಡುವಂತೆ ಸೂಚನೆ ನೀಡಿದ್ದಾರೆ. ಈ ಸೂಚನೆಯ ಮೇರೆಗೆ ಅರಣ್ಯ ಇಲಾಖೆಯ ಅಧಿಕಾರಿಗಳು ಗಾಯಾಳು ಕತ್ತರಘಟ್ಟ ಕಿರಣ್ ಅವರಿಗೆ ಕೆ.ಆರ್.ಪೇಟೆ ತಾಲ್ಲೂಕು ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ವನ್ಯಜೀವಿ ಸಂರಕ್ಷಣಾ ಇಲಾಖೆಯ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

# ಹೆಗ್ಡೆಯವರಿಗೆ ಸೇವೆಯೇ ಆಶಯ

## ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಬಣ್ಣನೆ । ನುಡಿ–ನಮನ



ರಾಮನಗರ: ಇತ್ತೀಚಿನ ವರ್ಷಗಳಲ್ಲಿ ವೈದ್ಯವೃತ್ತಿಯಲ್ಲಿ ಸೇವಾ ಮನೋಭಾವನೆ ಕಡಿಮೆಯಾಗುತ್ತಿದೆ. ಆದರೆ ಡಾ.ಕೆ.ಪಿ.ಹೆಗ್ಡೆಯವರು ವೈದ್ಯ ವೃತ್ತಿಯನ್ನು ಎಂದೂ ಹಣಗಳಿಕೆಗೆ ಬಳಸಿಕೊಂಡವರಲ್ಲ. ಸೇವೆಯನ್ನೇ ಪ್ರಮುಖ ಆಶಯವನ್ನಾಗಿ ಇಟ್ಟು ಕೊಂಡಿದ್ದರು ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿದರು.

ಈಚೆಗೆ ನಿಧನರಾದ ಡಾ.ಕೆ.ಪಿ. ಹೆಗ್ಡೆ ಅವರಿಗೆ ಡಾ.ಕೆ.ಪಿ.ಹೆಗ್ಡೆ ಅಭಿಮಾನಿ ಬಳಗದವತಿಯಿಂದ ಇಲ್ಲಿನ ರಾಯಲ್ ಕನ್ವೆಷನ್ ಹಾಲನಲ್ಲಿ ಆಯೋಜನೆಯಾಗಿದ್ದ ನುಡಿ–ನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಡಾ.ಹೆಗ್ಡೆ ಅವರು ಅಪರೂಪದ ಸಮಾಜ ಸೇವಕರಾಗಿದ್ದು, ಸಮಾಜ ಸೇವಾ ಕ್ಷೇತ್ರದಲ್ಲಿ ಇತರರಿಗೆ ಮಾದರಿಯಾಗಿದ್ದಾರೆ ಎಂದರು.

ಹೆಗ್ಡೆ ಅವರು ಪ್ರಮುಖವಾಗಿ ವೈದ್ಯಕೀಯ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಸೇವೆಯನ್ನು ಸಲ್ಲಿಸಿದ್ದಾರೆ. ತಮಗೆ ಸರ್ಕಾರಿ ವೈದ್ಯಕೀಯ ಕೆಲಸ ದೊರೆತರು ಬಡರವ ಮೇಲಿನ ಕಾಳಜಿಯಿಂದ ಸರ್ಕಾರಿ ವೃತ್ತಿಯನ್ನು ತೊರೆದು ರಾಮನಗರದಲ್ಲಿ ಪ್ರಗತಿ ಚಿಕಿತ್ಸಾಲಯವನ್ನು ತೆರೆದು ಬಡವರಿಗೆ ಚಿಕಿತ್ಸೆ ನೀಡುವ ಮೂಲಕ ಬಡವರ ವೈದ್ಯ ಎಂದೇ ಖ್ಯಾತರಾಗಿದ್ದರು ಎಂದು ಶ್ಲಾಘಿಸಿದರು.

ರಾಮನಗರದಲ್ಲಿ ಕಳೆದ ಐವತ್ತು ವರ್ಷಗಳಿಂದ ವಿವಿಧ ಕ್ಷೇತ್ರಗಳಲ್ಲಿ ಅವರು ಸಾಮಾಜಿಕವಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ತಾವು ವಾಸಿಸುತ್ತಿದ್ದ ಸುತ್ತಮುತ್ತಲಿನ ಪ್ರದೇಶಗಳನ್ನು ದತ್ತು ತೆಗೆದುಕೊಂಡು ಅಭಿವೃದ್ಧಿಪಡಿಸಲು ಶ್ರಮಿಸಿದ್ದಾರೆ ಎಂದು ತಿಳಿಸಿದರು.

ವೃತ್ತಿಯ ಜೊತೆಗೆ ಸಾಮಾಜಿಕ ಕಳಕಳಿಯನ್ನು ಹೊಂದಿದ್ದ ಅವರು, ಕನ್ನಡ ಸಾಹಿತ್ಯ ಪರಿಷತ್, ರೋಟರಿ ಕ್ಲಬ್, ಸೆಂಟ್ ಜಾನ್ ಆಂಬ್ಯುಲೆನ್ಸ್, ಕನ್ನಡ ಸಂಘರ್ಷ ಸಮಿತಿ, ಚುಟುಕು ಸಾಹಿತ್ಯ ಪರಿಷತ್, ಭಾರತ್ ಸೇವಾದಳ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ ನಲ್ಲಿ ಸೇವೆ ಸಲ್ಲಿಸಿದ್ದರು ಎಂದರು.

### ಶೈಕ್ಷಣಿಕ ಕ್ಷೇತ್ರದಲ್ಲೂ ಸೇವೆ

ಶಿಕ್ಷಣ ಎನ್ನುವುದು ಇಂದು ಉದ್ಯಮವಾಗಿದೆ. ಹೆಗ್ಡೆ ಅವರು ಕನ್ನಡ ಮಾಧ್ಯಮದಲ್ಲಿ ಪ್ರಗತಿ ಶಾಲೆ ಪ್ರಾರಂಭಿಸಿ ಬಡ, ಮಧ್ಯಮ ವರ್ಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದರು. ತಮ್ಮ ಇಳಿ ವಯಸ್ಸಿನಲ್ಲಿಯೂ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು ಎಂದರು. ಹಲವು ಮಂದಿ ತಮ್ಮ ಭಾಷಣದಲ್ಲಿ ರಾಮನಗರದ ಒಂದು ವೃತ್ತಕ್ಕೆ ಅಥವಾ ಪ್ರಮುಖ ರಸ್ತೆಗೆ ಡಾ.ಕೆ.ಪಿ. ಹೆಗ್ಡೆ ಅವರ ಹೆಸರಿಡಬೇಕು ಎಂದು ಮನವಿ ಮಾಡಿದ್ದೀರಿ. ನೀವು ಹೇಳಿರುವುದನ್ನು ನಗರಸಭೆಗೆ ಪತ್ರದ ರೂಪದಲ್ಲಿ ಕೊಡಿ. ನಗರಸಭೆಯಲ್ಲಿ ನಡೆಯುವ ಸಭೆಯಲ್ಲಿ ಹೆಗ್ಡೆ ಅವರ ಹೆಸರನ್ನು ವೃತ್ತಕ್ಕೆ ಅಥವಾ ಪ್ರಮುಖ ರಸ್ತೆಗೆ ಇಡುವುದರ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಬಂಟ್ಸ್ ಸಂಘದ ಮಾಜಿ ಅಧ್ಯಕ್ಷ ಚಂದ್ರಹಾಸ ರೈ, ಹಿರಿಯ ಪತ್ರಕರ್ತರಾದ ತ್ಯಾಗರಾಜ, ಚಲುವರಾಜು, ಸು.ತ. ರಾಮೇಗೌಡ, ನೇಗಿಲ ಯೋಗಿ ಟ್ರಸ್ಟಿನ ಪಟೇಲ್ ಸಿ ರಾಜು, ಸಂಸ್ಕೃತಿ ಸೌರಭ ಟ್ರಸ್ಟಿನ ಡಾ.ರಾ.ಬಿ. ನಾಗರಾಜು, ಸ್ನೇಹಕೂಟ ಸಂಸ್ಥೆಯ ಅಧ್ಯಕ್ಷ ಎಚ್.ಪಿ. ನಂಜೇಗೌಡ, ಭಾರತ್ ವಿಕಾಸ ಪರಿಷದ್ ನ ರಾ.ಶಿ. ಬಸವರಾಜು, ಬಿಜೆಪಿ ಮುಖಂಡ ಎಸ್.ಆರ್. ನಾಗರಾಜು, ಶಾಂತಾಲ ಚಾರಿಟಬಲ್ ಟ್ರಸ್ಟಿನ ಸಂಸ್ಥಾಪಕ ಕಾರ್ಯದರ್ಶಿ ಕವಿತಾರಾವ್, ಕಮಲಮ್ಮ, ಶಿಕ್ಷಕ ರಾಜಶೇಖರ್, ಡಾ.ಕೆ.ಪಿ. ಹೆಗ್ಡೆ ಅವರ ಮೊಮ್ಮಗಳು ಶಿವಾಲಿ ಶೆಟ್ಟಿ ಮಾತನಾಡಿದರು.

ಗಾಯಕರಾದ ಚೌ.ಪು. ಸ್ವಾಮಿ, ಕೆಂಗಲ್ ವಿನಯ್ ಕುಮಾರ್, ಎಚ್.ವಿ. ಮೂರ್ತಿ, ಗೋಪಾಲ್, ಚಿತ್ರಾರಾವ್ ಗೀತಗಾಯನ ನಡೆಸಿಕೊಟ್ಟರು. ನಗರಸಭಾ ಸದಸ್ಯ ಸೋಮಶೇಖರ್, ಡಾ.ಕೆ.ಪಿ. ಹೆಗ್ಡೆ ಅಭಿಮಾನಿ ಬಳಗದ ಎಸ್. ರುದ್ರೇಶ್ವರ, ಧನಪಾಲ್, ಸಿ.ಕೆ. ನಾಗರಾಜು, ರಾಮಚಂದ್ರು ಹಾಗೂ ಕೆ.ಪಿ. ಹೆಗ್ಡೆ ಅವರ ಪತ್ನಿ ಚಂದ್ರಲೇಖ ಹೆಗ್ಡೆ, ಮಕ್ಕಳಾದ ಪ್ರಗತಿ ಹೆಗ್ಡೆ, ಪ್ರಸನ್ನ ಕುಮಾರ್ ಹೆಗ್ಡೆ, ಪ್ರತಿಮಾ ಹೆಗ್ಡೆ, ವಿನೋದ್ ಶೆಟ್ಟಿ ಹಾಗೂ ಇತರರು ಇದ್ದರು.

## ನಾಳೆಯಿಂದ ಅಂತರ ವಿವಿಗಳ ಕ್ರೀಡಾಕೂಟ

ಮೈಸೂರು: ತೋಟಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾನಿಲಯದ ವತಿಯಿಂದ ಡಿ.11 ರಿಂದ 14 ರವರೆಗೆ ಮೈಸೂರು ವಿವಿಯ ಓವಲ್ ಮೈದಾನದಲ್ಲಿ 16ನೇ ಅಂತರ ಮಹಾವಿದ್ಯಾಲಯಗಳ ಕ್ರೀಡಾ ಕೂಟ ಕ್ರೀಡೋತ್ಕರ್ಷ ಆಯೋಜಿಸಲಾಗಿದೆ ಎಂದು ಡೀನ್ ಡಾ.ಚಂದ್ರಶೇಖರ ಹಂಚಿನಮನಿ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.11 ರಂದು 11 ಗಂಟೆಗೆ ಖೋ ಖೋ ಪಟು ಚೈತ್ರ ಕ್ರೀಡಾಕೂಟಕ್ಕೆ ಚಾಲನೆ ನೀಡಲಿದ್ದಾರೆ. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಬಾಗಲಕೋಟೆ ಮಹಾ ವಿದ್ಯಾಲಯದ ಕುಲಪತಿ ಡಾ. ವಿಷ್ಣುವರ್ಧನ್, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಪ್ರಾಧ್ಯಾಪಕರಾದ ಡಾ.ಸಿ.ವೆಂಕಟೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲಾ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು.

ಡಿ.14ರಂದು ಮಧ್ಯಾಹ್ನ 2ಗಂಟೆಗೆ ಕ್ರೀಡಾ ಕೂಟ ಸಮಾರೋಪ ಸಮಾರಂಭ ನಡೆಯಲಿದ್ದು, ಶಾಸಕ ಜಿ.ಟಿ. ದೇವೇಗೌಡ, ವಿಶ್ರಾಂತ ಕುಲಪತಿ ಡಾ.ಎಸ್.ಬಿ. ದಂಡಿನ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ಅಂಗಡಿ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಸಿಇಓ ಕೆ.ರುದ್ರೇಶ್, ಆಗಮಿಸಲಿದ್ದಾರೆ ಎಂದರು. ಕ್ರೀಡಾ ಕೂಟದಲ್ಲಿ ತೋಟಗಾರಿಕ ವಿಜ್ಞಾನಗಳ ವಿಶ್ವ ವಿದ್ಯಾನಿಲಯದ ಹತ್ತು ಮಹಾವಿದ್ಯಾಲ ಯಗಳಿಂದ 630 ವಿಧ್ಯಾರ್ಥಿಗಳು ಭಾಗವಹಿಸಲಿ ದ್ದಾರೆ. ಖೋ ಖೋ, ಕಬ್ಬಡಿ, ವಾಲಿಬಾಲ್, ಬಾಸ್ಕೆಟ್ ಬಾಲ್ ನಂತಹ ಗುಂಪು ಸ್ಪರ್ಧೆ ಮತ್ತು ಎಲ್ಲಾ ರೀತಿ ಅಥ್ಲೇಟಿಕ್ ಸ್ಪರ್ಧೆಗಳು ನಡೆಯಲಿವೆ. ಉತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿಗಳನ್ನು ರಾಷ್ಟ್ರಮಟ್ಟದ ಅಂತರ ವಿವಿ ಕ್ರೀಡಾಕೂಟಕ್ಕೆ ನಾಮ ನಿರ್ದೇಶನ ಮಾಡಲಾಗುತ್ತದೆ ಎಂದರು. ಗೋಷ್ಠಿಯಲ್ಲಿ ಡಾ. ರಾಮೇಗೌಡ, ಶಿವಕುಮಾರ್, ಗಿರೀಶ್ ಇದ್ದರು.

# 12ರಿಂದ ಕಾಲಭೈರವ ಜನ್ಮಾಷ್ಟಮಿ



ಮೈಸೂರು: ಮೈಸೂರಿನ ಆರ್.ಟಿ. ನಗರ ಒಂದನೇ ಅಡ್ಡ ರಸ್ತೆಯಲ್ಲಿರುವ ಕಾಲಭೈರವ ಬಳಗ ಟ್ರಸ್ಟ್‌ನಲ್ಲಿ ಡಿ.12 ರಿಂದ 14 ರವರೆಗೆ ಕಾಲಭೈರವ ಜನ್ಮಾಷ್ಟಮಿ ಮತ್ತು ಗಿರಿಜಾ ಕಲ್ಯಾಣ ಮಹೋತ್ಸವ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಸಂಸ್ಥಾಪಕ ಕಿಶೋರ್ ಗುರೂಜಿ ಈ ವಿಷಯ ತಿಳಿಸಿ, ಟ್ರಸ್ಟ್ ವತಿಯಿಂದ ಈಗಾಗಲೇ ಪ್ರತಿ ಸೋಮವಾರ ಸಂಜೆ ಪ್ರಾರ್ಥನೆ ಕಡೆಗೆ ಎಂಬ ವಿಶಿಷ್ಟ ಕಾರ್ಯಕ್ರಮ ಹಮ್ಮಿಕೊಂಡಿದೆ. ಈಗ ಸರ್ವ ಜನರ ಕಲ್ಯಾಣಕ್ಕಾಗಿ ಈ ಮಹೋತ್ಸವ ಆಯೋಜಿಸಲಾಗಿದೆ. ಜೊತೆಗೆ ಭಕ್ತಾದಿಗಳಿಗೆ ಅನ್ನ ದಾಸೋಹ ಸಹಾ ಇರಲಿದೆ ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಬಿ.ಮನು, ಸಾಗರ್ ಗುರೂಜಿ, ನಳಿನಿ ಮಹೇಶ್, ನೇತ್ರ ರಾಜೇಶ್, ಗಿರೀಶ್, ರಮೇಶ್ ಉಪಸ್ಥಿತರಿದ್ದರು.

# ಸ್ವಾವಲಂಬನೆಯ ಜೀವನಕ್ಕೆ ಎನ್‌ಎಸ್‌ಎಸ್ ಸಹಕಾರಿ

ಮೈಸೂರು: ಸ್ವಾವಲಂಬನೆಯ ಜೀವನಕ್ಕೆ ದಿಟ್ಟ ಹೆಜ್ಜೆ ಇಡಲು ಎನ್‌ಎಸ್‌ಎಸ್ ಸಹಕಾರಿ ಎಂದು ಸಾಹಿತಿ ಡಿ. ಎನ್. ಕೃಷ್ಣಮೂರ್ತಿ ಹೇಳಿದರು.

ಶ್ರೀ ನಟರಾಜ ಬಾಲಕಿಯರ ಪದವಿಪೂರ್ವ ಕಾಲೇಜು ವತಿಯಿಂದ ಗೆಜ್ಜಗಳ್ಳಿ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ಸಮಾರೋಪ ಸಮಾರಂಭದಲ್ಲಿ ವಿಶೇಷ ಆಹ್ವಾನಿತರಾಗಿ ಮಾತನಾಡಿದ ಅವರು, ವ್ಯಾಸಂಗಕ್ಕಿಂತ ವಿಭಿನ್ನವಾದ ಅನೇಕ ವಿಚಾರಗಳನ್ನು ಶಿಬಿರದಲ್ಲಿ ಕಲಿಯಬಹುದು. ಸಹಬಾಳ್ವೆಯ ಜೀವನಕ್ಕೂ ಅತ್ಯಗತ್ಯವಾದ ಕಾರ್ಯಕ್ರಮ ಇದಾಗಿದೆ ಎಂದರು.



ವಿದ್ಯಾರ್ಥಿನಿಯರು ಸ್ಪಷ್ಟ ಗುರಿಯೊಂದಿಗೆ ವಿದ್ಯಾಭ್ಯಾಸ ಮಾಡಬೇಕು. ವಿದ್ಯೆ ಕಲಿತು ಸತ್ಪ್ರಜೆ ಆಗುವುದರ ಜೊತೆಗೆ ಸಮಾಜವನ್ನು ಗುರಿಯಾಗಿಟ್ಟುಕೊಂಡು ಕೆಲಸ ಮಾಡಬೇಕು. ಜೀವನದಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ವಿದ್ಯಾಭ್ಯಾಸ ಜೀವನ ರೂಪಿಸಿದರೆ, ಜೀವನ ಪಾಠ ಕಲಿಸಿಕೊಡುತ್ತದೆ. ಮಕ್ಕಳ ಭವಿಷ್ಯವನ್ನು ರೂಪಿಸಲು ಹೆಣಗುವ ಪೋಷಕರನ್ನು ಆತಂಕಕ್ಕೆ ದೂಡಬಾರದು. ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕು. ಪ್ರತಿಭಾ ಪಲಾಯನದಿಂದಾಗಿ ನಮ್ಮ ದೇಶದಲ್ಲಿ ವೃದ್ಧಾಶ್ರಮಗಳು ಹೆಚ್ಚುತ್ತಿವೆ. ಪ್ರತಿಭೆ ಇದ್ದವರಿಗೆ ಇಲ್ಲಿಯೇ ಅವಕಾಶ ಕಲ್ಪಿಸಿಕೊಟ್ಟರೆ ಇದನ್ನು ತಪ್ಪಿಸಬಹುದು ಎಂದ ಅವರು, ಎನ್‌ಎಸ್‌ಎಸ್ ಶಿಬಿರಗಳಲ್ಲಿ ಶಿಕ್ಷಣ, ಪರಿಸರ ಮಾಲಿನ್ಯ, ಸ್ವಚ್ಛತೆ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ. ಎಸ್.ಶಿವರಾಜಪ್ಪ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಸಮಾರೋಪ ಭಾಷಣ ಮಾಡಿದರು. ಶಿಬಿರಾರ್ಥಿಗಳಾದ ಶಾಲಿನಿ, ಗಗನಾ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಗ್ರಾಮಸ್ಥರ ಪರವಾಗಿ ನಟರಾಜು ಮಾತನಾಡಿದರು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಎ.ಆರ್. ಕಾವ್ಯಶ್ರೀ, ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ನಾಗೇಂದ್ರ, ಮಾಜಿ ಅಧ್ಯಕ್ಷ ಗುರುಸ್ವಾಮಿ, ಗುತ್ತಿಗೆದಾರ ನಾಗೇಂದ್ರ, ಗುಡ್ಡಪ್ಪನವರಾದ ಮಾದಪ್ಪ, ಶರತ್, ಆಕಾಶ್, ಸಂಜಯ್, ವಾಟರಮನ್‌ಕೆಂಚಪ್ಪ, ಶೇಖರ್, ಮಲ್ಲೇಶ್, ಪ್ರಕಾಶ್, ಪ್ರಾಂಶುಪಾಲೆ ವಿ.ಡಿ. ಸುನೀತಾ ರಾಣಿ, ಉಪನ್ಯಾಸಕರಾದ ಪ್ರದೀಪ್‌ಕುಮಾರ್, ಸಚಿನ್, ಸಹ ಕಾರ್ಯಕ್ರಮಾಧಿಕಾರಿ ಬಿ.ಎಲ್. ವಿದ್ಯಾ ಇದ್ದರು.

# ನಿರಾಶ್ರಿತರಿಗೆ ಬೆಡ್‌ಶೀಟ್ ವಿತರಣೆ




ಚಾಮರಾಜನಗರ: ಬೀದಿಗಳಲ್ಲಿ ಮಲಗುವ ನಿರಾಶ್ರಿತರಿಗೆ ಶಿವು ಜನ್ನಸ್ನೇಹಿ ಟ್ರಸ್ಟ್ ವತಿಯಿಂದ ಬೆಡ್‌ಶೀಟ್‌ಗಳನ್ನು ವಿತರಣೆ ಮಾಡಲಾಯಿತು.

ಟ್ರಸ್ಟ್ ಅಧ್ಯಕ್ಷ ಶಿವು ನಗರದ ಚಾಮರಾಜೇಶ್ವರ ದೇವಸ್ಥಾನ, ಬಸ್ ನಿಲ್ಧಾಣ ಮತ್ತು ಅಂಗಡಿಗಳ ಬಾಗಿಲುಗಳಲ್ಲಿ ರಾತ್ರಿ ವೇಳೆಯಲ್ಲಿ ಮಲಗುವ ನಿರಾ ಶ್ರಿತರಿಗೆ ಬೆಡ್‌ಶೀಟ್ ಗಳನ್ನು ವಿತರಣೆ ಮಾಡಿದರು. ಬಳಿಕ ಮಾತನಾಡಿದ ಅವರು ಇತ್ತೀಚೆಗೆ ಚಳಿ ಹೆಚ್ಚಾಗಿರುವುದರಿಂದ ಆರೋಗ್ಯ ಸಮಸ್ಯೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಬೀದಿಗಳಲ್ಲಿ ಮಲಗುವ ನಿರಾಶ್ರಿತರಿಗೆ ಹೆಚ್ಚು ಪರಿಣಾಮ ಭೀರಲಿದೆ. ಇದನ್ನು ಮನಗಂಡು ಹೊದಿಕೆ ವಿತರಣೆ ಮಾಡಲಾಗುತ್ತಿದೆ. ಈ ರೀತಿಯ ಸೇವೆಗಳಿಂದ ಸಂತಸ ತರಿಸಿದೆ ಎಂದರು. ಈ ಸಂದರ್ಭದಲ್ಲಿ ಪೋಲೀಸ್ ಇಲಾಖೆಯ ಸಿಬ್ಬಂದಿವರ್ಗದವರು, ಬಳಗದವರು ಹಾಜರಿದ್ದರು.

# ಮಹಿಳೆಯರ ಅಸ್ಮಿತಾ ಕಿಕ್ ಬಾಕ್ಸಿಂಗ್ ಲೀಗ್

## 3 ಚಿನ್ನ, 3 ಬೆಳ್ಳಿ, 5ಕಂಚಿನ ಪದಕ ಗೆದ್ದ ನಾಗಮಾರ್ಷಲ್ ಆರ್ಟ್ಸ್ ಅಕಾಡೆಮಿ ಕರಾಟೆಪಟುಗಳು.

ಚಾಮರಾಜನಗರ: ಯಳಂದೂರಿನ ಶ್ರೀಮಹರ್ಷಿ ವಾಲ್ಮೀಕಿ ಭವನದಲ್ಲಿ ಕೇಂದ್ರ ಸರ್ಕಾರದ ಸ್ಪೋರ್ಟ್ ಅಥಾರಿಟಿ ಆಫ್ ಇಂಡಿಯಾದ ಮಾನ್ಯತೆ ಪಡೆದ ಖೇಲೋ ಇಂಡಿಯಾ ವತಿಯಿಂದ ಇತ್ತೀಚೆಗೆ ನಡೆದ ಮಹಿಳೆಯರ 104ನೇ ಅಸ್ಮಿತಾ ಕಿಕ್ ಬಾಕ್ಸಿಂಗ್ ಲೀಗ್ ನಲ್ಲಿ ಚಾಮರಾಜನಗರದ ನಾಗಮಾರ್ಷಲ್ ಆರ್ಟ್ಸ್ ಅಕಾಡೆಮಿ ಕರಾಟೆಪಟುಗಳು

ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿ ವಿಜೇತರಾಗಿ ಮೂರು ಚಿನ್ನದ ಪದಕ, ಮೂರು ಬೆಳ್ಳಿ ಪದಕ, 5 ಕಂಚಿನ ಪದಕ ಪಡೆದು ತಾಲೂಕಿಗೆ, ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಕರಾಟೆಪಟುಗಳಾದ ಸಂಸ್ಕೃತಿ, ಭೂಮಿಕ, ಉಮ್ಮೆ ಅಮ್ಮರ ಪ್ರಥಮ ಸ್ಥಾನ, ಧೃವಿಕ, ಉದಾಜ್ಯೆನ್, ಬಿಬಿ ಅರ್ಬಿಯಾ ದ್ವಿತೀಯ ಸ್ಥಾನ ಹಾಗೂ ದೀಕ್ಷಾ, ಹಿಜಾಫಾತಿಮಾ, ತಬ್ರೀನ್ ಬಾನು, ಹಬೀಬಾಬಾನು, ಜೈಬಾಬಾನು ತೃತೀಯ ಸ್ಥಾನ ಪಡೆದು ಚಿನ್ನದಪದಕ, ಬೆಳ್ಳಿ ಪದಕ, ಕಂಚಿನ ಪದಕವನ್ನು ತಮ್ಮ ಮುಡಿಗೇರಿಸಿಕೊಂಡು ಬೀಗಿದ್ದಾರೆ.



### ಅಭಿನಂದನೆ

ವಿಜೇತ ಕರಾಟೆ ಪಟುಗಳನ್ನು ಮುಖ್ಯ ಕರಾಟೆ ತರಬೇತುದಾರರು ಹಾಗೂ ವಕೀಲರಾದ ಸೆನ್ಸಾಯ್ ರಾಜೇಂದ್ರ, ತರಬೇತುದಾರರಾದ ಸೆನ್ಸಾಯ್ ಗಳಾದ ಯೋಗೀಶ್ , ಅಬ್ದುಲ್ ಫೈಸಲ್ ಅಭಿನಂದಿಸಿದ್ದಾರೆ.

## ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಪ್ರತಿಭಟನೆ

# ಕಾಡಂಚಿನ ಗ್ರಾಮಗಳಿಗೆ ಮೂಲಸೌಕರ್ಯ ಕಲ್ಪಿಸಿ

ಚಾಮರಾಜನಗರ, ಹನೂರು ತಾಲೂಕಿನ ಕಾಡಂಚಿನ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ಜಮಾಯಿಸಿದ್ದ ಪ್ರತಿಭಟನಾನಿಕರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತ ಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ರಾಜ್ಯ ಸರ್ಕಾರ ವಿದ್ಯಾರ್ಥಿಗಳನ್ನು ಬೀದಿಯಲ್ಲಿ ನಿಲ್ಲಿಸಿದೆ ಇದಕ್ಕೆ ನಿದರ್ಶನ ಎಂದರೆ ಮಲೈಮಹದೇಶ್ವರ ಬೆಟ್ಟ ಕಾಡಂಚಿನ ಗ್ರಾಮಗಳಿಗೆ ಬಸ್ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳು ನಿತ್ಯ 5, 6 ಕಿ.ಮೀ. ನಡೆದುಕೊಂಡು ಹೋಗಿ ಬಸ್ ಹತ್ತಬೇಕಿದ್ದು, ವಿದ್ಯಾರ್ಥಿಗಳಿಗೆ ಬಸ್ ಸೌಕರ್ಯ ಕಲ್ಪಿಸಿಲ್ಲ ಅವರು ನರಯಾತನೆ ಅನುಭವಿಸುತ್ತಿದ್ದಾರೆ. ರಸ್ತೆ ಸೇರಿದಂತೆ ಮೂಲಸೌಕರ್ಯಗಳು ಮರೀಚಿಗೆಯಾಗಿದೆ ಎಂದು ಆರೋಪಿಸಿದರು.



ರಾಜ್ಯ ಸರ್ಕಾರ ಮಲೈಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ಮಾಡಿದ್ದರು ಯಾವುದೇ ಪ್ರಯೋಜನವಾಗಿಲ್ಲ. ಜಿಲ್ಲೆಯ ಜನತೆಗೆ ಅನುಕೂಲವಾಗಲಿಲ್ಲ. ಅದೊಂದು ಕಾಟಾಚಾರದ ಸಚಿವ ಸಂಪುಟಸಭೆ ಅಂದರೆ ತಪ್ಪಾಗಲ್ಲ. ಸಚಿವ ಸಂಪುಟ ಸಭೆ ಪ್ರಾಮಾಣಿಕವಾಗಿ ನಡೆದಿದ್ದಾರೆ. ಕಾಡಂಚಿಚನ ಗ್ರಾಮಗಳ ಜನತೆ, ವಿದ್ಯಾರ್ಥಿಗಳಿಗೆ ಅನುಕೂಲವಾಗಬೇಕಿತ್ತು. ರಸ್ತೆ, ಚರಂಡಿ, ವಿದ್ಯುತ್ ದೀಪ ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಬೇಕಿತು. ಆದರೆ ಇದ್ಯಾವುದು ಆಗಿಲ್ಲ ಅದನ್ನು ಖಂಡಿಸಿ ನಮ್ಮ ಸಂಘಟನೆ ಪ್ರತಿಭಟನೆ ಮಾಡಿದ್ದೇವೆ. ರಾಜ್ಯ ಸರ್ಕಾರ ತಕ್ಷಣವೇ ಮಲೈಮಹದೇಶ್ವರಬೆಟ್ಟದ ಕಾಡಂಚಿನ ಗ್ರಾಮಗಳಿಗೆ ರಸ್ತೆ, ಬಸ್ ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಪಣ್ಯದಹುಂಡಿರಾಜು, ನಿಜಧ್ವನಿಗೋವಿಂದರಾಜು, ಸಿ.ಎಂ.ಕೃಷ್ಣಮೂರ್ತಿ, ಮುತ್ತಿಗೆ ಗೋವಿಂದರಾಜು, ಮಹೇಶ್‌ಗೌಡ, ಹೊಮ್ಮ ಲೋಕೇಶ್, ರವಿಚಂದ್ರಪ್ರಸಾದ್ ಕಹಳೆ, ಶಿವು, ಮುತ್ತು ರಾಜು, ವೀರಭದ್ರ, ರಾಚಪ್ಪ, ಲಿಂಗರಾಜು, ನಂಜುಂಡ, ನಾಗಪ್ಪ ಹೊಸಹಳ್ಳಿ ಇತರರು ಭಾಗವಹಿಸಿದ್ದರು.

# ಬಸ್ ನಿಲುಗಡೆಗೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ



ಗುಂಡ್ಲುಪೇಟೆ: ದೇಶಿಪುರ ಗ್ರಾಮದಲ್ಲಿ ಬಸ್ ನಿಲುಗಡೆಗೆ ಆಗ್ರಹಿಸಿ ವಿದ್ಯಾರ್ಥಿಗಳು ಮತ್ತು ಸ್ಥಳೀಯರು ಕೆ.ಎಸ್.ಆರ್.ಟಿ ಸಿ ಬಸ್ ತಡೆದು ದಿಢೀರ್ ಪ್ರತಿಭಟನೆ ನಡೆಸಿದರು.

ದೇಶಿಪುರ,ದೇಶಿಪುರ ಕಾಲೋನಿ ಹಾಗೂ ಬರಗಿ ಗ್ರಾಮದಿಂದ ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ಪಟ್ಟಣಕ್ಕೆ ಹೋಗುತ್ತಿದ್ದು ನಿಗದಿತ ಸಮಯಕ್ಕೆ ಬಸ್ ಬಾರದ ಹಿನ್ನೆಲೆ ತರಗತಿಗಳಿಗೆ ಹೋಗಲು ತೊಂದರೆಯಾಗಿದೆ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು. ಈ ಹಿಂದೆ ಬರಗಿ,ದೇಶಿಪುರ ಮಾರ್ಗವಾಗಿ ಪ್ರತಿ ದಿನ ನಾಲ್ಕು ಬಸ್ ಗಳ ಸಂಚರಿಸುತ್ತಿದ್ದವು ಆದರೆ ಈಗ ಎರಡು ಬಸ್ ಮಾತ್ರ ಸಂಚರಿಸುತ್ತಿದ್ದು ಬೆಳಿಗ್ಗಿನ ಸಮಯ ಶಾಲೆ ಕಾಲೇಜುಗಳಿಗೆ ತೆರಳಲು ವಿದ್ಯಾರ್ಥಿಗಳಿಗೆ ತೊಂದರೆಯಾಗಿದ್ದು ನಿಗದಿತ ಸಮಯಕ್ಕೆ ಬಸ್ ಸೌಕರ್ಯ ಕಲ್ಪಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# ಅಹಿಂದ ಯುವ ಘಟಕ ರಾಜ್ಯಾಧ್ಯಕ್ಷರಾಗಿ ಎಂ.ಮಹೇಶ್ ಹಳೇಪುರ ನೇಮಕ

ಚಾಮರಾಜನಗರ, ಅಹಿಂದ ಯುವ ಘಟಕದ ರಾಜ್ಯಾಧ್ಯಕ್ಷರಾಗಿ ಎಂ ಮಹೇಶ್ ಹಳೇಪುರ ಅವರನ್ನು ಅಹಿಂದ ಘಟಕದ ರಾಜ್ಯಾಧ್ಯಕ್ಷರಾದ



ಪ್ರಭುಲಿಂಗ ದೊಡ್ಡಿಣಿ ಅವರು ನೇಮಕ ಮಾಡಿ ಆದೇಶ ಪತ್ರ ವಿತರಣೆ ಮಾಡಿದ್ದಾರೆ.

ಎಂ.ಮಹೇಶ್ ಹಳೇಪುರ ಅವರು ಕುರುಬರ ಸಂಘದ ತಾಲೂಕು ಅಧ್ಯಕ್ಷರಾದ ಎಸ್.ಪಿ.ಕೆ ಉಮೇಶ್ ಅವರ ಆಪ್ತರಾಗಿದ್ದಾರೆ. ಇದೆ ವೇಳೆ ರಾಜ್ಯ ಘಟಕದ ಯುವ ಅಧ್ಯಕ್ಷರಾಗಿ ಆಯ್ಕೆಯಾಗಲು ಸಹಕರಿಸಿದ ಎಲ್ಲಾ ಜಿಲ್ಲಾ ಅಹಿಂದ ಘಟಕದ ಪದಾಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

# 12ರಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣೆ ಸಭೆ

ಗುಂಡ್ಲುಪೇಟೆ.ಪಟ್ಟಣ ತಾಲೂಕು ಕಛೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣೆ ಸಭೆಯನ್ನು ತಹಸೀಲ್ದಾರ್ ರವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ದಿನಾಂಕ 12-12-2025 ಗುರುವಾರ ರಂದು ಮೂರು ತಿಂಗಳಿಗೊಮ್ಮೆ ನಡೆಯುವ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಗಳ ಹಿತರಕ್ಷಣ ಸಭೆಯನ್ನು ಏರ್ಪಡಿಸಲಾಗಿದ್ದು ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ಸಮುದಾಯದವರು ಜನಾಂಗದ ಕುಂದು ಕೊರತೆಯನ್ನು ಲಿಖಿತವಾಗಿ ದಿನಾಂಕ 11-12-25 ರೊಳಗೆ ಸಲ್ಲಿಸಿ ಸಭೆಯ ದಿನ ತಾವು ಕೂಡ ಸಬೆಗೆ ಭಾಗವಹಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ್ ಕುಮಾರ್ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ

# ಪೊಲೀಸ್ ಚೌಕಿಗೆ ಗುದ್ದಿದ ಟಿಪ್ಪರ್

ಗುಂಡ್ಲುಪೇಟೆ: ಪಟ್ಟಣದ ಊಟಿ ವೃತ್ತದ ಬಳಿಯ ಪೊಲೀಸ್ ಚೌಕಿಗೆ




ಟಿಪ್ಪರ್ ಲಾರಿ ಗುದ್ದಿದ ಪರಿಣಾಮ ಸಂಪೂರ್ಣವಾಗಿ ಚೌಕಿ ನುಜ್ಜುಗುಜ್ಜಾಗಿರುವ ಘಟನೆ ನಡೆದಿದೆ. ಪಟ್ಟಣದ ಆರ್.ಟಿ.ಓ ಕಚೇರಿ ಬಳಿ ಇಂದು ಮುಂಜಾನೆ ಈ ಘಟನೆ ನಡೆದಿದ್ದು ವಾಹನ ಸಂಚಾರ ಕಡಿಮೆ ಇದ್ದ ಕಾರಣ ಬಾರಿ ಅನಾಹುತ ತಪ್ಪಿದೆ. ಕೇರಳ ರಸ್ತೆ ಮಾರ್ಗವಾಗಿ ಬಿಳಿ ಕಲ್ಲು ಹೊತ್ತು ಸಾಗುತ್ತಿದ್ದ ಕೆಎ 10, ಎ 9760 ನೋಂದಣಿಯ ಟಿಪ್ಪರ್ ಚಾಲಕನ ನಿಯಂತ್ರಣ ತಪ್ಪಿ ಊಟ ವೃತದಲ್ಲಿನ ಡಿವೈಡರ್ ದಾಟಿ ಪೊಲೀಸ್ ಚೌಕಿಗೆ ಗುದ್ದಿದೆ. ಸದ್ಯ ಮುಂಜಾನೆ ವೇಳೆ ವಾಹನ ಸಂಚಾರ ಹಾಗೂ ಜನದಟ್ಟನೆ ಕಡಿಮೆಯಿದ್ದ ಕಾರಣ ಯಾವುದೇ ಪ್ರಾಣಹಾನಿಯಾಗಿಲ್ಲ. ಈ ಸಂಬಂಧ ಗುಂಡ್ಲುಪೇಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು ಲಾರಿಯನ್ನು ವಶಕ್ಕೆ ಪಡೆದಿದ್ದಾರೆ.

# ಗ್ಯಾರಂಟಿ ಯೋಜನೆ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ: ಗುರುಸ್ವಾಮಿ

ಮೈಸೂರು: ರಾಜ್ಯ ಸರ್ಕಾರದ ಮಹತ್ವದ ಪಂಚ ಗ್ಯಾರಂಟಿ ಯೋಜನೆಗಳ ಫಲನುಭವಿಗಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ತ್ವರಿತವಾಗಿ ಸ್ಪಂದಿಸುವ ಮೂಲಕ ಪರಿಹರಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲ್ಲೂಕು ಅಧ್ಯಕ್ಷರಾದ ಗುರುಸ್ವಾಮಿ ಅವರು ತಿಳಿಸಿದರು.





ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸರ್ಕಾರವು ಯೋಜನೆಯನ್ನು ಯಶಸ್ವಿಯಾಗಿ ಮುನ್ನಡೆಸುತ್ತಿದ್ದು, ಅದರಂತೆ ನಾವೆಲ್ಲರೂ ಪೂರಕವಾಗಿರಬೇಕು ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯ ಫಲಾನುಭವಿಗಳ ಬಿಪಿಎಲ್ ಪಡಿತರ ಚೀಟಿಯನ್ನು ತೆರಿಗೆ ಪಾವತಿ ಮಾಡಿದ ಆಧಾರದ ಮೇಲೆ ಎಪಿಎಲ್‌ಗೆ ಪರಿವರ್ತಿಸುವಾಗ ಕೂಲಕಂಷವಾಗಿ ಪರಿಶೀಲಿಸಬೇಕು. ಬಡ ಜನರು ಕೂಡ ವಿವಿಧ ಸಾಲ ಮಾಡುವಾಗ ತೆರಿಗೆ ಪಾವತಿಸಿರುತ್ತಾರೆ. ವಾಸ್ತವಾಂಶವನ್ನು ಗಮನದಲ್ಲಿರಿಸಬೇಕು. ನೈಜ ಫಲಾನುವಭವಿಗಳು ಅನ್ನಭಾಗ್ಯ ಯೋಜನೆಯಿಂದ ವಂಚಿತರಾಗಬಾರದು ಎಂದರು.

ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ನೋಂದಣಿ ಮಾಡಿಕೊಳ್ಳುವರಿಗೆ ಅಗತ್ಯ ದಾಖಲೆ ಪರಿಶೀಲಿಸಿ ನೋಂದಣಿ ಮಾಡಿಕೊಡಿ ಎಂದು ಸಂಬಂಧಿಸಿದ ಅಧಿಕಾರಿಗೆ ಸೂಚಿಸಿದರು. ತಾಲ್ಲೂಕಿನಲ್ಲಿ ಯುವನಿಧಿ ಯೋಜನೆಗೆ ಒಟ್ಟು 5,646 ಅಭ್ಯರ್ಥಿಗಳು ನೋಂದಣಿಯಾಗಿದ್ದಾರೆ. ಸೆಪ್ಟೆಂಬರ್ ಅಂತ್ಯದವರೆಗೆ 12.87 ಕೋಟಿ ರೂ. ಯೋಜನೆಯ ಫಲಾನುಭವಿಗಳಿಗೆ ತಲುಪಿದೆ. ಶಕ್ತಿ ಯೋಜನೆಯಡಿ ತಾಲ್ಲೂಕಿನ ವ್ಯಾಪ್ತಿಗೆ ಬರುವ ಸಾತಗಳ್ಳಿ ಘಟಕದಿಂದ ಒಟ್ಟು 2.6 ಕೋಟಿ ಮಹಿಳಾ ಮತ್ತು ಮಕ್ಕಳು ಸೌಲಭ್ಯ ಪಡೆದಿದ್ದು, 44.27 ಕೋಟಿ ಪ್ರಯಾಣದ ಮೊತ್ತವಾಗಿದೆ. ಶಾಲಾ, ಕಾಲೇಜು ಮಕ್ಕಳಿಗೆ ತೊಂದರೆ ಉಂಟಾಗದಂತೆ ನಿಗದಿತ ಸಮಯಕ್ಕೆ ಬಸ್‌ಗಳು ಸಂಚರಿಸಬೇಕು ಎಂದು ಸೂಚನೆ ನೀಡಿದರು.

ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಿ.ಕೃಷ್ಣ ಮಾತನಾಡಿ, ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಅನಾನುಕೂಲ ಉಂಟಾಗದಂತೆ ಸಮರ್ಪಕವಾಗಿ ಅನುಷ್ಠಾನ ಮಾಡೋಣ. ಗೃಹಲಕ್ಷ್ಮೀ ಫಲಾನುಭವಿಗಳ ಖಾತೆಗೆ ತಾಂತ್ರಿಕ ದೋಷದಿಂದ ಹಣ ಸಂದಾಯವಾಗದಿದ್ದರೆ ಕೂಡಲೇ ಅವರ ಪಡಿತರ ಚೀಟಿ ಸಂಖ್ಯೆ ಪಡೆದು ಸಂಬಂಧಿಸಿದ ಅಧಿಕಾರಿಗಳು ಮುತುವರ್ಜಿವಹಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಸಮಿತಿಯ ಸದಸ್ಯರಾದ ಬಿ.ರವಿ, ರಾಣಿ, ಎಂ.ಸೋಮಣ್ಣ, ಕರೀಗೌಡ, ಎಚ್.ಡಿ.ಚನ್ನಯ್ಯ, ತಾಲ್ಲೂಕು ಪಂಚಾಯಿತಿ ಪ್ರಗತಿ ಸಹಾಯಕ ಕಿಶೋರ್, ವಿಷಯ ನಿರ್ವಾಹಕ ಸೋಮಶೇಖರ್ ಸೇರಿ ಇತರರು ಹಾಜರಿದ್ದರು.

# ರೈತರಿಗೆ ಪರಿಹಾರ ಕಲ್ಪಿಸಿ

## ಭಾರತೀಯ ಜನತಾ ಪಕ್ಷದಿಂದ ಬೃಹತ್ ಪ್ರತಿಭಟನೆ

ಮೈಸೂರು: ರಾಜ್ಯದಲ್ಲಿ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಪರಿಹಾರ ನಿಧಿಯನ್ನು ಬಿಡುಗಡೆಗೊಳಿಸಬೇಕೆಂದು ಆಗ್ರಹಿಸಿ ನಗರ ಮತ್ತು ಗ್ರಾಮಾಂತರ ಭಾರತೀಯ ಜನತಾ ಪಕ್ಷದಿಂದ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಿದರು.



ನಗರದ ಕಾವೇರಿ ನೀರಾವರಿ ನಿಗಮದ ಎದುರು ಜಮಾವಣೆಗೊಂಡ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ರಾಜ್ಯ ಸರಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದೆ ಆರೋಪಿಸಿ ನಾನಾ ಘೋಷಣೆಗಳನ್ನು ಕೂಗಿದರು. ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಅನ್ನದಾತ ರೈತರು ಬೆಳೆಯುವ ಮೆಕ್ಕೆ ಜೋಳ, ಕಬ್ಬು ಸೇರಿ ವಿವಿಧ ಬೆಳೆಗಳಿಗೆ ಬೆಂಬಲ ಬೆಲೆ ನೀಡದೆ ರಾಜ್ಯಸರ್ಕಾರ ಸಂಕಷ್ಟಕ್ಕೆ ದೂಡಿದ್ದಾರೆ. ಆಡಳಿತದಲ್ಲಿರುವ ಕಾಂಗ್ರೆಸ್ ಮುಖ್ಯಮಂತ್ರಿಗಳ ಸ್ಥಾನಕ್ಕಾಗಿ ಕಚ್ಚಾಡುತ್ತಿದ್ದಾರೆ. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಹದಗೆಟ್ಟಿದ್ದು, ಭ್ರಷ್ಟಾಚಾರ ಹಾಗೂ ಅತ್ಯಾಚಾರಗಳು ಹೆಚ್ಚಾಗುತ್ತಿದೆ. ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ಸೇರಿ ಸ್ಥಳೀಯ ಸಂಸ್ಥೆ ಚುನಾವಣೆ ನಡೆಸದೆ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳ ಹಕ್ಕು ಕಸಿದಿದೆ. ಈ ತಕ್ಷಣ ಚುನಾವಣೆಗೆ ಹೋದರು ಬಿಜೆಪಿ ಪಕ್ಷ 150 ಕ್ಕೂ ಹೆಚ್ಚು ಸ್ಥಾನ ಗೆಲ್ಲಲಿದೆ. ಕೇಂದ್ರ ಸರ್ಕಾರ ಈಗಾಗಲೇ ಮೆಕ್ಕೆ ಜೋಳಕ್ಕೆ ನೀಡಿರುವ 2800ರೂ ಬೆಂಬಲ ಬೆಲೆಯನ್ನು ನೀಡಬೇಕು ಎಂದರು.

ಜಿಲ್ಲಾ ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಕೆ. ಎನ್.ಸುಬ್ಬಣ್ಣ ಮಾತನಾಡಿ, ಈಗಾಗಲೇ ರಾಜ್ಯದಲ್ಲಿ ಹುಲಿ ಹಾಗೂ ಚಿರತೆ ದಾಳಿಗೊಳಗಾದ ರೈತರಿಗೆ ಪರಿಹಾರ ವಿತರಿಸಿಲ್ಲ, ಈ ಕೂಡಲೇ ರಾಜ್ಯ ಸರ್ಕಾರ ಪರಿಹಾರ ನೀಡಬೇಕು. ಮೆಕ್ಕೆಜೋಳ, ಕಬ್ಬು ಸೇರಿ ಅನೇಕ ವಿಚಾರವಾಗಿ ರೈತರು ನಡೆಸುತ್ತಿರುವ ಹೋರಾಟವನ್ನು ಬೆಂಬಲಿಸಿ ರಾಜ್ಯಾದ್ಯಂತ ಬಿಜೆಪಿ ನಡೆಸುತ್ತಿರುವ ಪ್ರತಿಭಟನೆ ಬೆಂಬಲಿಸಿ ಮೈಸೂರಿನಲ್ಲೂ ಪ್ರತಿಭಟಿಸುತ್ತಿರುವುದಾಗಿ ಹೇಳಿದರು.

ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ಹೈದರಾಬಾದ್ ಕರ್ನಾಟಕದ ಭಾಗದ ಜನರಿಗೆ ಯಾವುದೇ ಗ್ಯಾರಂಟಿಗಳು ತಲುಪುತ್ತಿಲ್ಲ. ರಾಜ್ಯ ಸರ್ಕಾರ ಅವರಿಗೆ 10 ಗ್ಯಾರಂಟಿಗಳನ್ನು ಘೋಷಣೆ ಮಾಡಿದರು ಯಾವುದೇ ರೀತಿಯಲ್ಲೂ ಅನುಷ್ಠಾಗೊಳಿಸಿಲ್ಲ. ಗ್ರಾಮಾಂತರ ಹಾಗೂ ನಗರ ರೈತರಿಗೂ ವ್ಯತ್ಯಾಸವಿದೆ. ಗ್ರಾಮಾಂತರ ರೈತರಿಗೆ ಯಾವುದೇ ರೀತಿಯ ಸೌಲತ್ತುಗಳು ತಲುಪುತ್ತಿಲ್ಲ. ಸಂವಿಧಾನ ಮೀಸಲಾತಿ ಇದೆ ಒಳಮೀಸಲಾತಿ ಸಂವಿಧಾನದ ವಿರೋಧವಾಗಿದೆ. ಇದು ಸುಪ್ರೀಂ ಕೋರ್ಟ್‌ನಲ್ಲಿ ಒಳಮೀಸಲಾತಿ ನಿಲುವು ನಿಲ್ಲುವುದಿಲ್ಲ. ಹೀಗಾಗಿ ಸರ್ಕಾರ ಕೇವಲ ಒಳ ಮೀಸಲಾತಿ ಘೋಷಣೆಯನ್ನು ಘೋಷಣೆಗೆ ಸೀಮಿತವಾಗಿಸಿದ್ದು, ವೈಜ್ಞಾನಿಕವಾಗಿ ಅನುಷ್ಠಾನ ಮಾಡಿಲ್ಲ ಎಂದು ಕಿಡಿಕಾರಿದರು. ರೈತರಿಗೆ ಪ್ರತಿ ಲೀಟರ್ ಹಾಲಿಗೆ 5 ರೂ.ಗಳ ಪ್ರೋತ್ಸಾಹಧನ ಸುಮಾರು 620 ಕೋಟಿ ರೂ.ಗಳನ್ನು ಸರಕಾರ ಬಿಡುಗಡೆ ಮಾಡಿಲ್ಲ. ಪ್ರತಿ ಟನ್ ಕಬ್ಬಿಗೆ 3300ರೂ.ಗಳನ್ನು ನಿಗದಿ ಪಡಿಸಿರುವುದು ಸರಿಯಷ್ಟೇ ಎಲ್ಲ ಸಕ್ಕರೆ ಕಾರ್ಖಾನೆಗಳಿಗೆ ಸಮಾನವಾಗಿ ಜಾರಿ ಮಾಡಿಲ್ಲ. ಕಳೆದ 2 ವರ್ಷಗಳಿಂದ ಪ್ರಾಣಿ ಮತ್ತು ಮಾನವ ಸಂಘರ್ಷದಿಂದಾಗಿ ಅನೇಕ ಸಾವು ನೋವು ಮತ್ತು ಬೆಳೆ ಹಾನಿ ಸಂಭವಿಸಿದೆ. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಮಳೆ ಪ್ರವಾಹದ ಸಮೀಕ್ಷೆಗಳನ್ನು ನಡೆಸಿಲ್ಲ. ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆಯಲ್ಲಿ ವಿಫಲರಾಗಿದ್ದಾರೆ. ಶುಂಠಿಗೆ ತಗುಲಿರುವ ಬೆಂಕಿ ರೋಗ. ದ್ವಿದಳ ಧಾನ್ಯಗಳಾದ ಹೆಸರು, ಉದ್ದು, ಬೇಳೆ, ಕಡಲೆ ಧಾನ್ಯಗಳಿಗೆ ತಗುಲಿರುವ ಸೊರಗು ರೋಗಗಳ ನಿಯಂತ್ರಣಕ್ಕೆ ಸರಕಾರ ಸಮರ್ಪಕ ಕ್ರಮಗಳನ್ನು ಕೈಗೊಳ್ಳದೆ ಇರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದ ಮನವಿ ಪತ್ರವನ್ನು ಸಹ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಬಿಜೆಪಿ ವಕ್ತಾರ ಎಂ.ಕೆ.ಮಹೇಶ್, ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕ ಎನ್.ಸದಾನಂದ, ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಜಿಲ್ಲಾ ಗ್ರಾಮಾಂತರ ರೈತ ಮೋರ್ಚಾ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೈ.ಪು.ರಾಜೇಶ್, ಪ್ರಶಾಂತ್‌ಗೌಡ ಗ್ರಾಮಾಂತರ ಪ್ರಧಾನ ಕಾರ್ಯದರ್ಶಿ ವಿನಯಕುಮಾರ್ ಬಿ.ಎಂ.ರಘು, ಪರಿಕ್ಷೀತ್ ರಾಜೇ ಅರಸ್, ರುದ್ರಮೂರ್ತಿ, ರಾಮಚಂದ್ರ, ದೇವರಾಜ್, ಪುನೀತ್, ಬೋಗಾದಿ ಅರುಣಕುಮಾರ್ ಗೌಡ, ಸೋಮಶೇಖರ್ ಇನ್ನಿತರರು ಉಪಸ್ಥಿತರಿದ್ದರು.

# ವಿಜಯಪುರದಲ್ಲಿ ತರಗತಿ ಕೊಠಡಿಗಳ ನಿರ್ಮಾಣ

ರಾಮನಗರ: ಟೊಯೋಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ), ತನ್ನ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಉಪಕ್ರಮದ ಭಾಗವಾಗಿ ಕರ್ನಾಟಕದ ವಿಜಯಪುರ ಜಿಲ್ಲೆಯ ಎರಡು ಸರ್ಕಾರಿ ಸಂಸ್ಥೆಗಳಲ್ಲಿ ತರಗತಿ ಕೊಠಡಿಗಳ ನಿರ್ಮಾಣ ಕೆಲಸಗಳು ಪೂರ್ಣಗೊಂಡಿವೆ ಎಂದು ಪ್ರಕಟಿಸಿದೆ.

ವಿಜಯಪುರ ಜಿಲ್ಲೆಯ ಒಬಲೇಶ್ವರ ತಾಲ್ಲೂಕಿನ ಮಮದಾಪುರದ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜು ಮತ್ತು ಕಣ್ಮುಚನಾಳದ ಸರ್ಕಾರಿ ಪ್ರೌಢಶಾಲೆಯಲ್ಲಿ ಹೊಸದಾಗಿ ನಿರ್ಮಿಸಲಾದ ಈ ಕೊಠಡಿಗಳು ಗ್ರಾಮೀಣ ಶಿಕ್ಷಣಕ್ಕೆ ಬಲ ತುಂಬುವ ಮತ್ತು ವಿದ್ಯಾರ್ಥಿಗಳಿಗೆ ಉತ್ತಮ ಕಲಿಕೆಯ ವಾತಾವರಣವನ್ನು ಒದಗಿಸಲು ನೆರವಾಗಿದೆ.

ಕರ್ನಾಟಕ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರಾದ ಡಾ. ಎಂ. ಬಿ. ಪಾಟೀಲ್ ಈ ಹೊಸ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿ ಟಿಕೆಎಂನ ಪ್ರಯತ್ನವನ್ನು ಶ್ಲಾಘಿಸಿದರು. ಗ್ರಾಮೀಣ ಯುವಕರಿಗೆ ಗುಣಮಟ್ಟದ ಶಿಕ್ಷಣ ಮತ್ತು ಕಲಿಯುವ ಅವಕಾಶಗಳು ದೊರೆಯಬೇಕು. ಈ ನಿಟ್ಟಿನಲ್ಲಿ ಶೈಕ್ಷಣಿಕ ಮೂಲಸೌಕರ್ಯಗಳನ್ನು ಸುಧಾರಿಸುವುದು ಅತ್ಯಗತ್ಯ. ಈ ಪ್ರದೇಶದಲ್ಲಿ ಶೈಕ್ಷಣಿಕ ಸೌಲಭ್ಯಗಳನ್ನು ಬಲಪಡಿಸಲು ಟಿಕೆಎಂ ಬದ್ಧತೆಯಿಂದ ನಿರಂತರವಾಗಿ ಕೆಲಸ ಮಾಡುತ್ತಿದೆ; ಸಮುದಾಯದ ಅಭಿವೃದ್ಧಿ ಕೆಲಸಗಳಲ್ಲಿ ಪ್ರಾಮಾಣಿಕವಾಗಿ ತೊಡಗಿಕೊಂಡಿದೆ. ಎಂದು ಹೇಳಿದರು.

ಟಿಕೆಎಂನ ಹಿರಿಯ ಉಪಾಧ್ಯಕ್ಷ ಸುದೀಪ್ ದಳವಿ ಮಾತನಾಡಿದರು. ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನ ಲೀಡರ್ ಶಿಪ್ ಟೀಂನ ರಮೇಶ್ ರಾವ್, ವೈಸ್-ಪ್ರೆಸಿಡೆಂಟ್ ಎಕ್ಸ್ಟರ್ನಸ್ ಅಫೇರ್ಸ್, ಕರ್ನಾಟಕ, ಕಾರ್ಪೊರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ ಮತ್ತು ಇತರ ಹಿರಿಯ ಎಕ್ಸಿಕ್ಯುಟಿವ್‌ಗಳು ಉಪಸ್ಥಿತರಿದ್ದರು.



# ಕೌಶಲ್ಯ ಮತ್ತು ಉದ್ಯೋಗ ತರಬೇತಿ ಕೇಂದ್ರ- ಜಿ.ಎನ್.ನಟರಾಜು

ರಾಮನಗರ: ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೌಶಲ್ಯ ಮತ್ತು ಉದ್ಯೋಗ ಕೇಂದ್ರವನ್ನು ಬಿಡದಿ ಬಳಿಯ ಜೋಗರದೊಡ್ಡಿಯಲ್ಲಿರುವ ನಿರ್ಮಿತಿ ಕೇಂದ್ರದಲ್ಲಿ ಸ್ಥಾಪಿಸುವ ಉದ್ದೇಶದಿಂದ ಪ್ರಾಧಿಕಾರದ ಅಧ್ಯಕ್ಷ ಜಿ.ಎನ್.ನಟರಾಜ್ ಗಾಣಕಲ್ ಮತ್ತು ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.




ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿನ ಉದ್ಯೋಗಾಸಕ್ತರಿಗೆ ಪುನರ್ ನಿರ್ಮಾಣ ಮತ್ತು ಪುನರ್ ವಸತಿ ನೀತಿಯ ಭಾಗವಾಗಿ ಜೀವನೋಪಾಯಕ್ಕಾಗಿ ಕೌಶಲ್ಯಾಧಾರಿತ ಮತ್ತು ಕೌಶಲ್ಯಾಧಾರಿತವಲ್ಲದ ಉದ್ಯೋಗಗಳಿಗೆ ವಿದ್ಯಾಭ್ಯಾಸ ಹಾಗೂ ಆಸಕ್ತಿಗನುಗುಣವಾಗಿ ಕೌಶಲ್ಯ ತರಬೇತಿ ನೀಡಲು ಹಾಗೂ ಕಂಪನಿಗಳಲ್ಲಿ ಉದ್ಯೋಗ ಕೊಡಿಸುವ ಸಲುವಾಗಿ ಈ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ. ಡಿ.3ರಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಈ ವಿಷಯ ಪ್ರಸ್ತಾಪವಾಗಿತ್ತು. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕೌಶಲ್ಯ ಮತ್ತು ಉದ್ಯೋಗ ಕೇಂದ್ರ ಸ್ಥಾಪಿಸಲು ಅನುಮೋದಿಸಲಾಗಿದೆ ಎಂದು ಜಿ.ಎನ್.ನಟರಾಜು ತಿಳಿಸಿದ್ದಾರೆ.

ಕೌಶಲ್ಯ ಮತ್ತು ಉದ್ಯೋಗ ಕೇಂದ್ರವನ್ನು ತಕ್ಷಣದಿಂದ ಜಾರಿಗೆ ತರಲು ನಿರ್ಧರಿಸಲಾಗಿದೆ. ಹೀಗಾಗಿ ಸೂಕ್ತ ಸ್ಥಳ ನಿಗಧಿಪಡಿಸಲು ಕ್ರಮವಹಿಸಲಾಗಿತ್ತು. ಬಿಡದಿ ಬಳಿಯ ಜೋಗರದೊಡ್ಡಿಯಲ್ಲಿನ ನಿರ್ಮಿತಿ ಕೇಂದ್ರಕ್ಕೆ ಭೇಟಿ ನೀಡಿ ಜಾಗದ ಲಭ್ಯತೆ ಹಾಗೂ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಲಾಯಿತು ಎಂದು ಅವರು ಹೇಳಿದ್ದಾರೆ.

ಯೋಜನಾ ಪ್ರದೇಶದ ವ್ಯಾಪ್ತಿಯ 26 ಗ್ರಾಮಗಳ ಉದ್ಯೋಗಾಸಕ್ತರಿಗೆ ಯುವಕ-ಯುವತಿಯರಿಗೆ, ಕಂಪ್ಯೂಟರ್ ತರಬೇತಿ, ಸ್ಪೋಕನ್ ಇಂಗ್ಲೀಷ್, ತಂತ್ರಾಂಶ, ಟ್ಯಾಲಿ ಮತ್ತು ನಿರ್ಮಿತಿ ಕೇಂದ್ರದ ಸಹಯೋಗದಲ್ಲಿ ನಿರ್ಮಾಣ ವಲಯದಲ್ಲಿ ಸ್ವಯಂ ಉದ್ಯೋಗ ಒಳಗೊಂಡತೆ, ವಿದ್ಯಾಭ್ಯಾಸಕ್ಕೆ ಅನುಗುಣವಾಗಿ ತರಬೇತಿ ನೀಡಿ, ಉದ್ಯೋಗಸ್ಥರನ್ನಾಗಿ ಮಾಡಲಾಗುತ್ತದೆ ಎಂದು ಅವರು ಮಾಹಿತಿ ಕೊಟ್ಟರು.

ಅಂತೆಯೇ, ಕರ್ನಾಟಕ ಕೌಶಲ್ಯಾಭಿವೃದ್ಧಿ ಕೇಂದ್ರ, ಸೀಡಾಕ್, ಆರ್-ಎಸ್‌ಇಟಿಐ ಸೇರಿದಂತೆ ಉನ್ನತ ಕೌಶಲ್ಯ ಕೇಂದ್ರಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಕೌಶಲ್ಯ ಮತ್ತು ಉದ್ಯೋಗ ನೀಡುವ ಬಗ್ಗೆ ಕ್ರಮವಹಿಸಲಾಗುವುದೆಂದು ಹಾಗೂ ಈ ಸಂಬಂಧ ನೊಂದಾಯಿಸಿಕೊಳ್ಳಲು ಮೊಬೈಲ್ ಆಪ್ ಅನ್ನು ಪ್ರಾಧಿಕಾರದ ವತಿಯಿಂದ ಅಭಿವೃದ್ಧಿಪಡಿಸುತ್ತಿದ್ದು ಶೀಘ್ರವಾಗಿ ಬಳಕೆಗೆ ಬಿಡುಗಡೆ ಮಾಡಲಾಗುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಮತ್ತು ನಿರ್ಮಿತಿ ಕೇಂದ್ರದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿಭಾ ಕಾರಂಜಿ, ಕಲೋತ್ಸವ



ಗುಂಡ್ಲುಪೇಟೆ: ತಾಲ್ಲೂಕಿನ ಗರಗನಹಳ್ಳಿ ಪ್ರೌಢಶಾಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ಕ್ಲಸ್ಟರ್ ಮಟ್ಟದಿಂದ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಸ್ವಾಮಿ ಸರಕಾರ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು 2002 ರಿಂದ ಪ್ರಾರಂಭ ಮಾಡಿ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ತೆಗೆಯುವಂತ ಕಾರ್ಯಕ್ರಮ, ಪ್ರತಿಯೊಂದು ಮಗು ಸಹ ಕೌಶಲ್ಯ ಹೊಂದಿರುತ್ತದೆ ಅದನ್ನು ಇಂತಹ ಕಾರ್ಯಕ್ರಗಳ ಮೂಲಕ ಹೊರತಂದು ಪ್ರೋತ್ಸಾಹ ನೀಡುವ ಕೆಲಸ ಮಾಡುವುದೇ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವದ ಕಾರ್ಯಕ್ರವಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸ್ವಾಮಿ, ಅಕ್ಷರ ದಾಸೋಹ ಸಹಾಯಕ ನಿರ್ದೇ ಶಕ ಸತೀಶ್ ಕೆಸಿ, ಎಸ್‌ಡಿಎಂಸಿ ಅಧ್ಯಕ್ಷ ಮಹದೇವಪ್ಪ, ಜಿಪಿಟಿ ಸಂಘದ ಅಧ್ಯಕ್ಷ ಶಿವ ಸ್ವಾಮಿ, ಬಿಆರ್ ಸಿ ಚಂದ್ರಶೇಖರ್, ಸಿಆರ್‌ಪಿ ಯಾಗಿದ್ದ ರವೀಂದ್ರ ಕುಮಾರ್, ಟೆಲಿಸ್ಕೋಟ್ ತಯಾರಿಸಿದ ಶಿಕ್ಷಕ ನಂದೀಶ್, ಮುಖ್ಯ ಶಿಕ್ಷಕ ಕಿರಣ್, ಶಿಕ್ಷಕರು ಮಲ್ಲು, ಸ್ವರೂಪ್, ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

# ಉದ್ಯಾನವನದಲ್ಲಿ ಕುಡುಕರ ಹಾವಳಿ ತಪ್ಪಿಸಿ




ಚಾಮರಾಜನಗರ, ಇತಿಹಾಸ ಪ್ರಸಿದ್ಧವಾದ ಶ್ರೀ ಚಾಮರಾಜೇಶ್ವರ ದೇವಸ್ಥಾನ ಮುಂಭಾಗದಲ್ಲಿರುವ ಶ್ರೀ ಚಾಮರಾಜೇಶ್ವರ ಉದ್ಯಾನದಲ್ಲಿ ಇತ್ತೀಚೆಗೆ ಕುಡುಕರ ಹಾವಳಿ ಹೆಚ್ಚಾಗಿದ್ದು, ವಾಯು ವಿಹಾರಿಗಳಿಗೆ ಕಿರಿ ಕಿರಿಯಾಗುತ್ತಿದೆ ಎಂದು ಕನ್ನಡ ಚಳವಳಿಗಾರರು ದೂರಿದ್ದಾರೆ.

ಉದ್ಯಾನದಲ್ಲಿನ ಒಳ ಭಾಗದಲ್ಲಿನ ಭುವನೇಶ್ವರಿ ಪ್ರತಿಮೆ ಆವರಣದಲ್ಲಿ ಹುಟ್ಟು ಹಬ್ಬ ಆಚರಣೆ ನೆಪದಲ್ಲಿ ಮದ್ಯಪಾನ ಮತ್ತು ಧೂಮಪಾನ ಮಾಡಿ ಇಡೀ ವಾತಾವರಣವನ್ನು ಕಲುಷಿತಗೊಳಿಸಲಾಗುತಗತ್ತಿದೆ. ಇದರಿಂದಾಗಿ ಪಾರ್ಕಿನಲ್ಲಿ ವಾಯು ವಿಹಾರಕ್ಕೆ ಬರುವ ಸಾರ್ವಜನಿಕರು ಕಿರಿ ಕಿರಿ ಅನುಭವಿಸುವಂತ್ತಾಗಿದೆ


ಎಂದು ಕನ್ನಡ ಚಳುವಳಿಗಾರ ಚಾ.ರಂ. ಶ್ರೀನಿವಾಸಗೌಡ ಆರೋಪಿಸಿದ್ದಾರೆ. ನಗರಸಭೆ ಹಾಗೂ ಜಿಲ್ಲಾಡಳಿತ ಈ ಸಂಬಂಧ ಗಮನಹರಿಸಬೇಕು. ಉದ್ಯಾ ನವನ ನಿರ್ವಹಣೆ ಮಾಡುವುದಕ್ಕೆ ಕಾವಲುಗಾರರನ್ನು ನೇಮಿಸಬೇಕು ಅದೇ ರೀತಿ ಪೊಲೀಸ್ ಇಲಾಖೆ ನಿಗಾ ಇಡಬೇಕು ಪಾರ್ಕಿನಲ್ಲಿ ಮದ್ಯಪಶನ ಮತ್ತು ಧೂಮಪಾನ ಮಶಡುವ ಕಿಡಿಗೇಡಿಗಳನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಕನ್ನಡ ಚಳುವಳಿಗಾರರಾದ. ಪನ್ಯದ ಹುಂಡಿ ರಾಜು. ಹೊಸೂರು ಶಿವಣ್ಣ. ಜಿ ಬಂಗಾರು. ಮಹೇಶ್ ಗೌಡ. ಅರುಣ್ ಕುಮಾರ್ ಗೌಡ. ಗೋವಿಂದರಾಜು. ರಾಜಣ್ಣ ಇನ್ನಿತರುಹಾಜರಿದ್ದರು.

## ಎಸ್.ಸಿ.ಪಿ. ಅನುದಾನ ದುರ್ಬಳಕೆ ಆರೋಪ

# ಶಾಸಕ ಗಣೇಶ್ ಪ್ರಸಾದ್ ವಿರುದ್ಧ ಎಡಿಸಿಗೆ ದೂರು

ಚಾಮರಾಜನಗರ, ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್ ಅವರು ಎಸ್ ಸಿಪಿ ಅನುದಾನ ದುರ್ಬಳಕೆ ಮಾಡಿದ್ದಾರೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಎಸ್ ಸಿ ಮೋರ್ಚಾದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ ಅವರಿಗೆ ದೂರು ಸಲ್ಲಿಸಲಾಯಿತು.



ಗುಂಡ್ಲುಪೇಟೆ ತಾಲೂಕಿನ ಕಬ್ಬಳ್ಳಿ ಗ್ರಾಮದಲ್ಲಿ ಎಸ್.ಸಿ.ಪಿ. ಅನುದಾನವನ್ನು ಸಾಮಾನ್ಯ ವರ್ಗದ ಬೀದಿಗೆ ದುರ್ಬಳಕೆ ಮಾಡಿಕೊಂಡಿದ್ದು, ಕಾಮಗಾರಿಯ ಜವಾಬ್ದಾರಿಯನ್ನು ನಿರ್ಮಿತಿ ಕೇಂದ್ರ ನಿರ್ವಹಿಸಿರುತ್ತದೆ. ಗುಂಡ್ಲುಪೇಟೆ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಗಣೇಶ್ ಪ್ರಸಾದ್ ರವರ ಒತ್ತಡಕ್ಕೆ ಒಳಗಾಗಿ ದಲಿತರಿಗೆ ಅನುಕೂಲವಾಗಬೇಕಾಗಿದ್ದ ಅನುದಾನವನ್ನು ಸಾಮಾನ್ಯ ವರ್ಗದ ಬೀದಿಗೆ ಬಳಕೆ ಮಾಡಿಕೊಂಡು ಶ್ರೀಕಂಠಾಚಾರಿ ರವರ ಮನೆಯಿಂದ ದಾಸೇಗೌಡ ರವರ ಮನೆಯವರೆಗೆ ಕನಿಷ್ಠ 25 ಲಕ್ಷ ಅಂದಾಜು ಮೊತ್ತ ಎಸ್.ಸಿ.ಪಿ. ಅನುದಾನವನ್ನು ಬಳಕೆ ಮಾಡಿಕೊಂಡು ಕಾಮಗಾರಿ ನಡೆಸಿರುವುದು ಬೆಳಕಿಗೆ ಬಂದಿರುತ್ತದೆ.

ಹಾಗೆಯೇ ಗುಂಡ್ಲುಪೇಟೆ ಕ್ಷೇತ್ರದಲ್ಲಿ ಶಾಸಕರು ಎಸ್.ಸಿ.ಪಿ. ಅನುದಾನವನ್ನು ದುರ್ಬಳಕೆ ಮಾಡಿಕೊಂಡಿರುವುದರ ಬಗ್ಗೆ ಮಾಹಿತಿ ಇರುವುದರಿಂದ ಎಸ್.ಸಿ.ಪಿ. ಯೋಜನೆಯ ಎಲ್ಲಾ ಕಾಮಗಾರಿಗಳನ್ನು ಪರಿಶೀಲನೆಗೆ ಒಳಪಡಿಸಿ ಮತ್ತು ಪರಿಶಿಷ್ಟ ಜಾತಿ ವರ್ಗಕ್ಕೆ ಅನ್ಯಾಯವಾಗಿದ್ದು, ತಾವು ಅನುದಾನ ದುರ್ಬಳಕೆಗೆ ಕಾರಣರಾದ ಶಾಸಕ ಗಣೇಶ್ ಪ್ರಸಾದ್ ,ಕಾಮಗಾರಿಯ ಉಸ್ತುವಾರಿ ವಹಿಸಿದ ನಿರ್ಮಿತಿ ಕೇಂದ್ರದ ಅಧಿಕಾರಿಗಳ ಮತ್ತು ಗುತ್ತಿಗೆದಾರರ ಮೇಲೆ ಎಸ್.ಸಿ./ ಎಸ್.ಟಿ. ಅನುದಾನ ದುರ್ಬಳಕೆ ಸಂಬಂಧಿಸಿದ ಖಾಯ್ದೆಯಡಿ ದೂರು ದಾಖಲಿಸಿ ತನಿಖೆ ನಡೆಸಿ ದುರ್ಬಳಕೆ ಆದ ಅನುದಾನವನ್ನು ಮರು ಪಾವತಿಸಬೇಕು ಎಂದು ಜಿಲ್ಲಾಧಿಕಾರಿ ಗಳಿಗೆ ಸಲ್ಲಿಸಿರುವ ದೂರಿನಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್ ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಟಗರಪುರ ರೇವಣ್ಣ, ಕಾರ್ಯದರ್ಶಿ ಹೊಂಗನೂರು ಮಹದೇವಸ್ವಾಮಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸೂರ್ಯಕುಮಾರ್, ಎಸ್. ಸಿ. ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುತ್ತಿಗೆ ಮೂರ್ತಿ ಹಾಜರಿದ್ದರು.

# ಡಿ 21-24ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

## ಐದು ವರ್ಷದೊಳಗಿನ ಪ್ರತಿ ಮಗುವಿಗೆ ಪೋಲಿಯೋ ಲಸಿಕೆ ನೀಡಿ: ಡಾ ಕುಮಾರ



**ಮಂಡ್ಯ:** ಜಿಲ್ಲೆಯಲ್ಲಿ ಡಿಸೆಂಬರ್ 21ರಿಂದ ನಾಲ್ಕು ದಿನಗಳ ಕಾಲ ಪಲ್ಸ್ ಪೋಲಿಯೊ ಅಭಿಯಾನ ನಡೆಯಲಿದ್ದು, ಸಾರ್ವಜನಿಕರಿಗೆ ಇದರ ಬಗ್ಗೆ ಹೆಚ್ಚು ಜಾಗೃತಿ ಮೂಡಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಡಿಸೆಂಬರ್ 21 ರಿಂದ 24 ವರೆಗೆ ಹಮ್ಮಿಕೊಳ್ಳಲಾಗಿರುವ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕುಮಾರ ಅವರು ಇದೇ ಡಿ 21 ರಿಂದ 24 ವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಈ ಕಾರ್ಯಕ್ರಮದಲ್ಲಿ ಐದು ವರ್ಷ ಒಳಪಟ್ಟ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಎಂದು ತಿಳಿಸಿದರು.

ಪಲ್ಸ್ ಪೋಲಿಯೋ ಕುರಿತಾಗಿ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಹೆಚ್ಚಿನ ಜನರಿಗೆ ಪಲ್ಸ್ ಪೋಲಿಯೋ ಲಸಿಕ ಕಾರ್ಯಕ್ರಮದ ಕುರಿತು ಮಾಹಿತಿ ಹಾಗೂ ಇದರ ಪ್ರಯೋಜನವನ್ನು ತಿಳಿಸಬೇಕು. ತಾಲೂಕು ಮಟ್ಟದಲ್ಲಿ ಅಧಿಕಾರಿಗಳು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಹೇಳಿದರು.

ನಗರ ಸ್ಥಳೀಯ ಸಂಸ್ಥೆಗಳು ಗ್ರಾಮ ಪಂಚಾಯಿತಿ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಲಸಿಕಾ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ತಿಳಿಸಬೇಕು. ಅಂಗನವಾಡಿ ಹಾಗೂ ಖಾಸಗಿ ಎಲ್. ಕೆ.ಜಿ-ಯುಕೆಜಿ ಸಂಸ್ಥೆಗಳನ್ನು ಪಲ್ಸ್ ಪೋಲಿಯೋ ಲಸಿಕೆ ಕುರಿತು ಹೆಚ್ಚಿನ ಮಾಹಿತಿ ನೀಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಐದು ವರ್ಷ ಒಳಪಟ್ಟ ಸುಮಾರು ಒಂದು ಲಕ್ಷದ ಮೂರು ಸಾವಿರ ಮಕ್ಕಳು ಇದ್ದಾರೆ. ಐದು ವರ್ಷ ಒಳಪಟ್ಟ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಹಾಕಿಸಬೇಕು. ಚಲನಚಿತ್ರ ಮಂದಿರಗಳು ಹಾಗೂ ಎಲ್ ಇ ಡಿ ಜಾಹೀರಾತು ಪ್ರದರ್ಶನ ಮೂಲಕ ಜ್ಞಾಪಕ ಪ್ರಚಾರ ಕೈಗೊಳ್ಳಿ. ಬಸ್ ನಿಲ್ದಾಣ, ರೈಲ್ವ ನಿಲ್ದಾಣ ಹಾಗೂ

ಜನರು ಹೆಚ್ಚು ಸೇರುವ ಜಾಗಗಳಲ್ಲಿ ಲಸಿಕಾ ಬೂತ್ ಗಳನ್ನು ಆಯೋಜಿಸಿ ಎಂದರು.

ಸದರಿ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಸ್ತ್ರೀಶಕ್ತಿ ಗುಂಪುಗಳಿಂದ ನೆರವು ತೆಗೆದುಕೊಳ್ಳಿ. ವಲಸಿಗರು ಹಾಗೂ ಕಟ್ಟಡ ಕಾರ್ಮಿಕರ ಐದು ವರ್ಷ ಒಳಪಟ್ಟ ಮಕ್ಕಳನ್ನು ಗುರುತಿಸಿ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಹೇಳಿದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಎನ್ ಜಿ. ಓ ಗಳ ಸಹಕಾರ ಹಾಗೂ ಮೀಮ್ಸ್ ಕಾಲೇಜಿನ ವಿದ್ಯಾರ್ಥಿಗಳ ಸಹಕಾರದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಸಾಮಾಜಿಕ ಜಾಲತಾಣಗಳ ಮೂಲಕ ಕಾರ್ಯಕ್ರಮದ ಕುರಿತು ಪ್ರಚಾರ ನೀಡಿ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಕೆ ಮೋಹನ್. ಆರ್ ಸಿ ಎಚ್ ಅಧಿಕಾರಿ ಡಾ. ಕೆ.ಪಿ ಅಶ್ವಥ್, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ -1 ಶಿವಲಿಂಗಯ್ಯ, ನಗರಾಭಿವೃದ್ಧಿ ಕೋಶಾಧಿಕಾರಿ ನರಸಿಂಹಮೂರ್ತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಡಿ.28ಕ್ಕೆ ಫ್ಯೂಚರ್ ಮಾಡೆಲ್ ಸೀಸನ್




**ಮೈಸೂರು:** ಮೇ ತಿಬ್ಬಾಸ್ ಗ್ರೂಪ್ ಮಾಡೆಲಿಂಗ್ ಕಂಪನಿಯಯವತಿಯಿಂದ ಕರ್ನಾಟಕ ವಸ್ತುಪ್ರದರ್ಶನ ಪ್ರಾಕಾರದ ಸಹಯೋಗದೊಂದಿಗೆ ಪ್ರಾಧಿಕಾರದ ಆವರಣದ ಪಿ.ಕಾಳಿಂಗರಾವ್ ಗಾನ ಮಂಟಪದಲ್ಲಿ ಡಿ.28ರಂದು ಸಂಜೆ 5.30ಕ್ಕೆ ಫ್ಯೂಚರ್ ಮಾಡೆಲ್ ಆಲ್ ಇಂಡಿಯಾ ಸೀಜನ್ – 7 ಗ್ರಾಂಡ್ ಫಿನಾಲೆಯನ್ನು ಆಯೋಜಿಸಲಾಗಿದೆ ಎಂದು ವಸ್ತು ಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುದ್ರೇಶ್ ಎಂದು ಹೆಳಿದರು.

ನಗರದ ವಸ್ತು ಪ್ರದರ್ಶನ ಪ್ರಾಧಿ ಕಾರದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫ್ಯಾಷನ್ ಶೋ ಅಲ್ಲಿ ಯಾವುದೇ ರೀತಿಯ ಮಾಡ್ರನ್ ಉಡುಪುಗಳು ಇರುವುದಿಲ್ಲ. ಕೇವಲ ಟ್ರೆಡಿಷನ್ ಡ್ರೆಸ್‌ನಲ್ಲೇ – ಫ್ಯಾಷನ್ ಶೋ ನಡೆಯಲಿದೆ ಎಂದು ತಿಳಿಸಿದರು. ಸ್ಪಧೆರ್ಯಲ್ಲಿ ಚಿಕ್ಕಮಕ್ಕಳಿಂದ 70 ವರ್ಷದವರೆಲ್ಲರೂ ಭಾಗವಹಿಸಬಹುದು. ಮಾಡಲಿಂಗ್‌ನಲ್ಲಿ ಆಸಕ್ತಿ ಇರುವವರು ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಆಸಕ್ತರು ಪ್ರವೇಶ ಶುಲ್ಕ 500 ರೂ ಇರಲಿದೆ ಎಂದು ಮಾಹಿತಿ ನೀಡಿದರು. ತಿಬ್ಬಾಸ್ ಗ್ರೂಪ್ ಮಾಡೆಲಿಂಗ್ ಕಂಪನಿಯ ಸಂಸ್ಥಾಪಕರಾದ ನಾಗೇಶ್ ಡಿ.ಸಿ (ಶರ್ವಿನ್) ಮಾತನಾಡಿ, ಯಾವುದೇ ಕ್ಷೇತ್ರಕ್ಕೂ ಹೋಗುವುದಕ್ಕೂ ಅಡಿಪಾಯವಾದದ್ದು ಈ ಮಾಡೆಲಿಂಗ್. ಪ್ರತಿಯೊಬ್ಬರೂ ಜೀವನದಲ್ಲೂ ಫ್ಯಾಷನ್ ಎನ್ನುವುದು ಇದೆ ಎಂದು ಹೇಳಿದರು.

ಭಾರತೀಯರು ಧರಿಸುವ ಉಡುಪು ಸಹ ಫ್ಯಾಷನ್ನೆಬಲ್ಲಾಗಿದೆ. ನಮ್ಮಲ್ಲಿರುವ ಪ್ರತಿಯೊಂದು ಜಿಲ್ಲೆಯಲ್ಲಿಯೂ, ರಾಜ್ಯದಲ್ಲಿಯೂ ಸಹ ಬೇರೆ ಬೇರೆ ವಸ ಗಳನ್ನು ಧರಿಸುತ್ತಾರೆ. ಅದನ್ನು ಪ್ರಸ್ತುತ ಪಡಿಸಲೇಂದು ಈ – ಫ್ಯಾಷನ್ ಶೋ ಅನ್ನು ಶುರು ಮಾಡಿದ್ದೇವೆ ಎಂದು ತಿಳಿಸಿದರು. ಮೈಸೂರಿನಲ್ಲಿ ದಸರಾ ಹಬ್ಬ ಹೆಚ್ಚು –?ಮಸ್. ಮೂರು ತಿಂಗಳು ವಸ್ತುಪ್ರದರ್ಶನ ತೆರೆದಿರುವುದರಿಂದ ಭಾರತೀಯ ಉಡುಪುಗಳ ಬಗ್ಗೆ –ಫ್ಯಾಷನ್ ಶೋ ನಡೆದರೆ ಹೆಚ್ಚು ಜನರಿಗೆ ತಲುಪಲಿದೆ. ಎರಡು ವರ್ಷದ ಮಕ್ಕಳಿಂದ 70 ವರ್ಷದವರೆಲ್ಲರೂ ಭಾಗವಹಿಸಲು ಸೂಕ್ತ ವೇದಿಕೆಯಾಗಿದೆ ಎಂದರು. ಮಾಡಲ್ ಗಳಲ್ಲದೆ ಇರುವವರು ಸಹ ಭಾಗವಹಿಸಬಹುದು. ಭಾಗವಹಿಸುವವರಿಗೆ ನಾವೇ ತರಬೇತಿಯನ್ನು ಕೊಡುತ್ತೇವೆ. ಅಷ್ಟೇ ಅಲ್ಲದೇ ಈಗಾಗಲೇ ರಾಜ್ಯದ ವಿವಿಧೆಡೆ ಆಡಿಷನ್ ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಿದರು.

# ಭತ್ತ ಮತ್ತು ರಾಗಿ ಕಟಾವು ಯಂತ್ರಕ್ಕೆ ಬಾಡಿಗೆ ದರ

ಮಂಡ್ಯ: ಮಂಡ್ಯ ಜಿಲ್ಲೆಯಲ್ಲಿ 2025-26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 57,148 ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಬೆಳೆ ಹಾಗೂ 56,573 ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬೆಳೆಯು ಆವರಿಸಿದ್ದು, ಭತ್ತದ ಕಟಾವು ಕಾರ್ಯ ಪ್ರಾರಂಭವಾಗಿದ್ದು ಜಿಲ್ಲೆಯಲ್ಲಿ ಕೂಲಿ ಕಾರ್ಮಿಕರ ಅಭಾವದಿಂದ ಭತ್ತ ಹಾಗೂ ರಾಗಿ ಕಟಾವಿಗೆ ರೈತರು ಕಂಬೈನ್ಡ್ ಹಾರ್ವೆಸ್ಟರ್ ಯಂತ್ರಗಳನ್ನು (ಸಂಯುಕ್ತ ಕುಯ್ಲು ಒಕ್ಕಣೆ ಯಂತ್ರ) ಬಾಡಿಗೆಗೆ ಪಡೆದು ಕಟಾವು ಮತ್ತು ಒಕ್ಕಣೆ ಮಾಡುವುದು ವಾಡಿಕೆಯಾಗಿರುತ್ತದೆ.

ಆದ್ದರಿಂದ ಕಂಬೈನ್ಡ್ ಹಾರ್ವೆಸ್ಟರ್ ಯಂತ್ರಗಳ ಬಾಡಿಗೆ ದರವನ್ನು ನಿಗಧಿಪಡಿಸುವ ಸಲುವಾಗಿ ಜಿಲ್ಲಾ ಹಾಗೂ ತಾಲ್ಲೂಕುಮಟ್ಟದ ಕೃಷಿಕ ಸಮಾಜದ ಅಧ್ಯಕ್ಷರು, ಪ್ರಗತಿ ಪರ ರೈತರು, ಪೋಲಿಸ್ ಅಧಿಕಾರಿಗಳು, ಆರ್.ಟಿ.ಓ ಅಧಿಕಾರಿಗಳು ಹಾಗೂ ಸಂಬಂಧಿಸಿದ ಜಿಲ್ಲಾಮಟ್ಟದ ಹಾಗೂ ತಾಲ್ಲೂಕುಮಟ್ಟದ ಅಧಿಕಾರಿಗಳನ್ನೊಳಗೊಂಡಂತೆ ಭತ್ತ ಹಾಗೂ ರಾಗಿ ಕಟಾವು ಯಂತ್ರದಿಂದ ಕಟಾವು ಮಾಡಲು ಪ್ರತಿ ಗಂಟೆಗೆ ನಿಗಧಿಪಡಿಸಿದ ದರದ ವಿವರವು ಈ ಕೆಳಕಂಡಂತಿದೆ.

ಯಂತ್ರದ ವಿವರ ಪ್ರತಿ ಗಂಟೆಗೆ ನಿಗಧಿಪಡಿಸಿದ ದರ (ರೂ ಗಳಲ್ಲಿ)


1 ಚೈನ್ /ಟ್ರಾಕ್ ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 2500/-

2 ಟೈರ್ (ಗ್ರಿಪ್) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 2000/-

3 ಟೈರ್ (ಸಾಮಾನ್ಯ) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 1800/-

4 ರಾಗಿ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 2900/- ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಬ್ಬರು ಪುಂಡ ಯುವಕರ ಬಂಧನ



**ಕೆ.ಆರ್.ಪೇಟೆ:** ತಾಲ್ಲೂಕಿನ ಕಿಕ್ಕೇರಿಯ ಖಾಸಗಿ ಶಾಲೆಯ ಬಸ್ ತಡೆದು ಕಿರಿಕ್ ಮಾಡಿದ್ದ ವಡ್ಡರಹಳ್ಳಿ ಗ್ರಾಮದ ಗಿರೀಶ(21) ಮತ್ತು ಕಿರಣ್(20) ಬಂಧಿತರು.

ಕಿಕ್ಕೇರಿಯ ಖಾಸಗಿ ಶಾಲೆಯಿಂದ ಮಕ್ಕಳನ್ನು ಎಂದಿನಂತೆ ಅವರವರ ಗ್ರಾಮಗಳಿಗೆ ಸುರಕ್ಷಿತವಾಗಿ ಬಿಡಲು ಹೋಗುತ್ತಿದ್ದ ಖಾಸಗಿ ಶಾಲೆಯ ಬಸ್ ಅನ್ನು ಬಸವನಹಳ್ಳಿ ಮಾರ್ಗವಾಗಿ ವಡ್ಡರಹಳ್ಳಿಗೆ ಹೋಗುತ್ತಿರುವಾಗ ರಸ್ತೆ ಮಾರ್ಗ ಮಧ್ಯದಲ್ಲಿ ಗಾಂಜಾ ಮತ್ತು ಮಧ್ಯ ಸೇವಿಸಿದ್ದ ಕಿರಣ ಮತ್ತು ಗಿರೀಶ ನಶೆಯ ಅಮಲಿನಲ್ಲಿ ಶಾಲಾ ಬಸ್ ಅನ್ನು ತಡೆದು ನಿಲ್ಲಿಸಿ ಒಂಬತ್ತನೇ ತರಗತಿಯ ವಿದ್ಯಾರ್ಥಿನಿಯನ್ನು ಬಸ್ ಇಂದ ಕೆಳಗೆ ಇಳಿಸುವಂತೆ ನಮ್ಮ ಜೊತೆ ಕಳಿಸುವಂತೆ ದಮ್ಕಿ ಹಾಕಿದ ಪುಂಡರು.ಖಾಸಗಿ ಶಾಲಾ ಬಸ್ ಚಾಲಕನಿಗೆ ಅವಾಜ್ ಹಾಕಿ ಹಲ್ಲೆಗೆ ಯತ್ನಿಸಿ ಪರಾರಿಯಾಗಿದ್ದರು. ಈ ಸಂಬಂಧ ವಿಡಿಯೋ ಸಮೇತ ಪುಂಡರ ವಿರುದ್ಧ

ಕಿಕ್ಕೇರಿ ಪೋಲೀಸ್ ಠಾಣೆಗೆ ದೂರು ಸಲ್ಲಿಕೆ ಮಾಡಿರುವ ಖಾಸಗಿ ಆಡಳಿತ ಮಂಡಳಿಯ ದೂರನ್ನು ದಾಖಲಿಸಿಕೊಂಡು ಆರೋಪಿಗಳಾಗಿ ಹುಡುಕಾಟ ನಡೆಸುತ್ತಿದ್ದರು. ಸಾಮಾಜಿಕ ಜಾಲತಾಣಗಳಲ್ಲಿ

ಕೂಡಲೇ ಪುಂಡರನ್ನು ಅರೆಸ್ಟ್ ಮಾಡಿ ಪುಂಡರ ಅಟ್ಟಹಾಸವನ್ನು ಮಟ್ಟಹಾಕುವಂತೆ ಪೋಷಕರು ಹಾಗೂ ನೆಟ್ಟಿಗರು ಕಿಕ್ಕೇರಿ ಪೋಲಿಸರನ್ನು ಆಗ್ರಹಿಸಿದ್ದರು.

ಆರೋಪಿಗಳ ಬಂಧನ: ಶಾಲಾ ವಾಹನವನ್ನು ಅಡ್ಡ ಗಟ್ಟಿ ಅಪ್ರಾಪ್ತ ಬಾಲಕಿಯನ್ನು ತಮ್ಮ ವಶಕ್ಕೆ ನೀಡುವಂತೆ ಡ್ರೈವರ್ ಮೇಲೆ ಹಲ್ಲೆ ನಡೆಸಿದ್ದ ವಿಡಿಯೋ ವೈರಲ್ ಆಗುತ್ತಿದ್ದಂತೆಯೇ ಎಚ್ಚೆತ್ತುಕೊಂಡು ಪುಂಡರ ಚಹರೆ ಹಿಡಿದು ಬೆನ್ನಟ್ಟಿದ ಕಿಕ್ಕೇರಿ ಪೋಲೀಸರು ಆರೋಪಿಗಳಾದ ವಡ್ಡರಹಳ್ಳಿ ಗ್ರಾಮದ ಗಿರೀಶ್(21), ಕಿರಣ್( 20) ಎಂಬ ಗಾಂಜಾ ನಶೆಯಲ್ಲಿ ತೇಲುತ್ತಿದ್ದ ಇಬ್ಬರನ್ನೂ ಬಂಧಿಸಿ ಜೈಲಿಗಟ್ಟಿದ್ದಾರೆ.

# ಅರ್ಜಿ ಆಹ್ವಾನ

**ಮಂಡ್ಯ:** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಧನಶ್ರೀ ಯೋಜನೆ.(ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ) ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, (ಟ್ರ?ಯಾನ್ಸ್ ಜೆಂಡರ್ಸ್ ಗಳಿಗೆ) ಚೇತನಯೋಜನೆ (ದಮನಿತ ಮಹಿಳೆಯರಿಗೆ) ಹಾಗೂ ಉದ್ಯೋಗಿನಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಅನ್ಲೈನ್ ಹಾಗೂ ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳಲ್ಲಿ https://sevasindhu. karnataka.gov.in ವೆಬ್‌ಸೈಟ್ ಮೂಲಕ ಡಿಸೆಂಬರ್ 15 ರ ಸಂಜೆ 5:30 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಹಿಂದೆ ಅರ್ಜಿ ಸಲ್ಲಿಸಿರುವರಿಗೆ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು, ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಛೇರಿ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು ಅಥವಾ ದೂ.ಸಂ: 08232-221315 ಅನ್ನು ಸಂಪರ್ಕಿಸಬಹಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾಷಾ ಕೌಶಲ್ಯ ಕಲಿಸುವ ಹೊಣೆ ಶಿಕ್ಷಕರದ್ದು: ಬಿಇಓ ಕೆ.ಟಿ.ಸೌಭಾಗ್ಯ

## ಕನ್ನಡ ಹತ್ತನೇ ತರಗತಿ ಫಲಿತಾಂಶ ಸುಧಾರಣೆ ಕಾರ್ಯಾಗಾರ



**ಮಂಡ್ಯ:** ವಿದ್ಯಾರ್ಥಿಗಳಿಗೆ ಮಾತೃಭಾಷೆ ಕಲಿಕೆ ದೃಢೀಕರಿಸುವ ಹೊಣೆಗಾರಿಕೆ ಕನ್ನಡ ಭಾಷಾ ಶಿಕ್ಷಕರದ್ದಾಗಿದ್ದು ಗುಣಮಟ್ಟದ ಕಲಿಕೆಗೆ ಭಾಷಾ ಕೌಶಲಗಳನ್ನು ಅಳವಡಿಸಲು ಸನ್ನದ್ದರಾಗಬೇಕು ಎಂದು ಮಂಡ್ಯ ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಟಿ.ಸೌಭಾಗ್ಯ ಹೇಳಿದರು.

ಮಂಡ್ಯ ತಾಲ್ಲೂಕಿನ ಮರಿಲಿಂಗನದೊಡ್ಡಿ ಗ್ರಾಮದ ಮಾಧವ ವಿದ್ಯಾಸಂಸ್ಥೆಯಲ್ಲಿ ಆಯೋಜಿಸಿದ್ದ ಹತ್ತನೇ ತರಗತಿ ಕನ್ನಡ ವಿಷಯ ಫಲಿತಾಂಶ ಸುಧಾರಣಾ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಇತ್ತೀಚಿನ ಫಲಿತಾಂಶದಲ್ಲಿ ಕನ್ನಡ ವಿಷಯದಲ್ಲಿ ಅನುತ್ತೀರ್ಣರಾದವರ ಸಂಖ್ಯೆ ಹೆಚ್ಚಾಗಿದೆ. ಇದಕ್ಕೆ ಪರಿಹಾರವಾಗಿ ಶಿಕ್ಷಕರು ನಾವೀನ್ಯತೆ ಕಲಿಕಾ ವಿಧಾನಗಳ ಮೂಲಕ ವಿದ್ಯಾರ್ಥಿಗಳನ್ನು ಆಕರ್ಷಣೆ ಮಾಡಿ ಕಲಿಕೆ ದೃಢೀಕರಣ ಮೂಲಕ ತೇರ್ಗಡೆ ಮಾಡಿಸುವಲ್ಲಿ ಯಶಸ್ಸು ಕಾಣಬೇಕು.ಶಿಕ್ಷಣ ಇಲಾಖೆ ನೀಡಿರುವ ನೀಲನಕ್ಷೆ ಪ್ರಕಾರ ಪರೀಕ್ಷಾ ಕ್ರಮ ಅನುಸರಿಸಬೇಕು ಎಂದರು. ಬಳಿಕ ಕಾರ್ಯಾಗಾರದ ನೋಡಲ್ ಅಧಿಕಾರಿ ಚಂದಗಾಲು ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕಿ ಕೆ.ಸಿ.ಜಯಶೀಲ ಮಾತನಾಡಿ ವಿದ್ಯಾರ್ಥಿಗಳ ಕಲಿಕಾ ದೋಷವನ್ನು ಆರಂಭದಲ್ಲಿಯೇ ಪತ್ತೆ ಹಚ್ಚಿ ಚಟುವಟಿಕೆಗಳ ಮೂಲಕ ಬೋಧನ ಕಲಿಕಾ ವಿಧಾನಗಳನ್ನು ಅಳವಡಿಸಿ ಕಲಿಕೆ ದೃಢೀಕರಿಸಿದರೆ ಫಲಿತಾಂಶ ಹೆಚ್ಚು ಮಾಡಬಹುದು ಎಂದರು.

ಕಾರ್ಯಾಗಾರದಲ್ಲಿ ಸಹ ಶಿಕ್ಷಕರಾದ ಎಂ.ಯು.ಶ್ವೇತಾ ಹಾಗೂ ಕೆ.ಆರ್.ಮುತ್ಯಾಲಪ್ಪ ಸಂಪನ್ಮೂಲ ವ್ಯಕ್ತಿಗಳಾಗಿ ಫಲಿತಾಂಶ ಉತ್ತಮೀಕರಣದ ಕುರಿತು ಶಿಕ್ಷಕರಿಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮಾಧವ ಸಂಸ್ಥೆ ಕಾರ್ಯದರ್ಶಿ ಶ್ರೀಪತಿ,ಪ್ರೌಢಶಾಲೆ ಸಹ ಶಿಕ್ಷಕರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕೆ.ಆರ್.ಶಶಿಧರ ಈಚಗೆರೆ,ಪದಾಧಿಕಾರಿಗಳಾದ ಜಿ.ಕೆ.ಸತೀಶ್,ಚಂದ್ರಶೇಖರ್ ಶಿಕ್ಷಣ ಸಂಯೋಜಕರಾದ ಪರಶಿವಮೂರ್ತಿ,ಚಿದಾನಂದ,ಪದ್ಮಹಾಗೂ ಮುಖ್ಯ ಶಿಕ್ಷಕಿ ವೀಣಾ ಇದ್ದರು.

# ಡಿ 24 ರಂದು ಆಹಾರ ಸಂರಕ್ಷಣಾ-ರಾಷ್ಟ್ರೀಯ ಗ್ರಾಹಕರ ದಿನಾಚರಣೆ: ಹೆಚ್. ಕೃಷ್ಣ



**ಮಂಡ್ಯ:** ಜಿಲ್ಲೆಯಲ್ಲಿ ಡಿಸೆಂಬರ್ 24 ರಂದು ಮಧ್ಯಾಹ್ನ 3 ಗಂಟೆಗೆ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯನ್ನು ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಚರಿಸಲಾಗುತ್ತಿದ್ದೂ ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳಿ ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ ಅವರು ತಿಳಿಸಿದರು.

ಮಂಗಳವಾರ ಮಂಡ್ಯದ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು ಸದರಿ ಕಾರ್ಯಕ್ರಮದಲ್ಲಿ ಆಹಾರದ ಮೌಲ್ಯ ಮತ್ತು ಆಹಾರದ ಮಹತ್ವದ ಕುರಿತು ಅರಿವು ಮೂಡಿಸಬೇಕಾಗಿದೆ ಎಂದು ಹೇಳಿದರು.

ಪ್ರಮುಖವಾಗಿ ವಿದ್ಯಾರ್ಥಿನಿಲಯಗಳಲ್ಲಿ, ಮದುವೆ, ಸಮಾರಂಭಗಳಲ್ಲಿ ಮಕ್ಕಳು ಮತ್ತು ಸಾರ್ವಜನಿಕರು ಹೆಚ್ಚಾಗಿ ಆಹಾರ ವ್ಯರ್ಥ ಮಾಡುತ್ತಾರೆ. ಈ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದೆ ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳು ಭಾಗಿಯಾಗಬೇಕು. ಸರಿಸುಮಾರು ಒಂದು ವರೆ ಸಾವಿರಕ್ಕೂ ಹೆಚ್ಚು ಜನ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದರು.

ಇತರೆ ಜಿಲ್ಲೆಗಳಿಗೆ ಮಾದರಿಯಾಗುವಂತೆ ಮಂಡ್ಯ ಜಿಲ್ಲೆಯಲ್ಲಿ ಆಹಾರ ಜಾಗೃತಿಯನ್ನು ಮೂಡಿಸಬೇಕು. ಅಧಿಕಾರಿಗಳು ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ಆಹಾರ ಜಾಗೃತಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕಾರ್ಯದಕ್ಷತೆಯಿಂದ ಕೆಲಸ ನಿರ್ವಹಿಸಿ ಎಂದು ಹೇಳಿದರು. ವಿದ್ಯಾರ್ಥಿಗಳಿಗೆ ಆಹಾರದ ಮಹತ್ವ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದ್ದು, ಕಾರ್ಯಕ್ರಮದಲ್ಲಿ ಶಾಲಾ, ಕಾಲೇಜು ಹಾಗೂ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳನ್ನು ಆಹ್ವಾನಿಸಿ. ಸಂಬಂಧಪಟ್ಟ ಇಲಾಖೆಯ ವತಿಯಿಂದ ಮಳಿಗೆಗಳನ್ನು ಸ್ಥಾಪಿಸಿ ಎಂದು ಹೇಳಿದರು.

ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಆನಂದ್ ಎಂ ಅವರು ಮಾತನಾಡಿ ಜಿಲ್ಲೆಯ ನ್ಯಾಯ ಬೆಲೆ ಅಂಗಡಿ ಮಾಲೀಕರಿಗೆ ಜಾಗೃತಿ ಕಾರ್ಯಾಗಾರ ಮಾಡಿ. ಕಡ್ಡಾಯವಾಗಿ ಎಲ್ಲಾ ನ್ಯಾಯಬೆಲೆ ಅಂಗಡಿಯ ಮಾಲೀಕರು ಸಭೆಗೆ ಕಡ್ಡಾಯವಾಗಿ ಹಾಜರಿರಬೇಕು.ಅಧಿಕಾರಿಗಳು ಸಮನ್ವಯ ಸಾಧಿಸಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಪ್ರತೀಕ್ ಹೆಗ್ಡೆ, ಸಹಾಯಕ ನಿರ್ದೇಶಕ ಶ್ರೀನಿವಾಸ್, ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಲೋಕೇಶ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೋಮಲ್ ಕುಮಾರ್ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾಧಿಕಾರಿ ಮಂಜುಳಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಡಿ.10 ರಂದು ಕುಂದುಕೊರತೆ ಸಭೆ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಗಳು ನಾಗಮಂಗಲ ತಾಲ್ಲೂಕಿನಲ್ಲಿ ಡಿಸೆಂಬರ್ 10 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01:30 ಗಂಟೆಯವರೆಗೆ ನಾಗಮಂಗಲ ತಾಲ್ಲೂಕು ಕಛೇರಿ ಆವರಣದಲ್ಲಿ ಸಾರ್ವಜನಿಕರ ಕುಂದುಕೊರತೆ ಸಭೆ ನಡೆಸಲಿದ್ದಾರೆ.

ಸಾರ್ವಜನಿಕರ ಕುಂದುಕೊರತೆ ಸಭೆಯಲ್ಲಿ ಸಾರ್ವಜನಿಕರಿಂದ ದೂರು, ಅಹವಾಲು ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದೂರುಗಳನ್ನು ಸ್ವೀಕರಿಸಲಿದ್ದಾರೆ. ಸಭೆಯಲ್ಲಿ ಡಿವೈಎಸ್‌ಪಿ ಸುನೀಲ್‌ಕುಮಾರ್.ಹೆಚ್.ಟಿ, ಹಾಗೂ ಬ್ಯಾಟರಾಯಗೌಡ.ಬಿ.ಪಿ, ಕರ್ನಾಟಕ ಲೋಕಾಯುಕ್ತ ಪೊಲೀಸ್ ಇನ್ಸ್ಪೆಕ್ಟರ್ ಕುಮಾರ ಎಂ. ಲೇಪಾಕ್ಷ ಮೂರ್ತಿ ಪಾಲ್ಗೊಳ್ಳಲಿದ್ದಾರೆ.

# ಜನವರಿಯಿಂದ ಇಂದಿರಾ ಕಿಟ್ ವಿತರಣೆ



**ಕೆ.ಆರ್.ಪೇಟೆ:** ನಮ್ಮ ಕರ್ನಾಟಕ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಪೈಕಿ ಅನ್ನಭಾಗ್ಯ ಯೋಜನೆಯ ಮೂಲಕ ಇದೇ ಜನವರಿ ತಿಂಗಳಿನಿಂದ ಅಕ್ಕಿ, ಬೇಳೆ, ಅಡಿಗೆ ಎಣ್ಣೆ ಸೇರಿದಂತೆ ಅಗತ್ಯ ವಸ್ತುಗಳನ್ನೊಳಗೊಂಡ ಇಂದಿರಾ ಕಿಟ್ ಅನ್ನು ಆಹಾರ ಇಲಾಖೆಯ ಮೂಲಕ ಅರ್ಹ ಬಿ.ಪಿ.ಎಲ್ ಹಾಗೂ ಅಂತ್ಯೋದಯ ಕಾರ್ಡ್ ಹೊಂದಿದ ಎಲ್ಲಸ ಫಲಾನುಭವಿಗಳಿಗೆ ವಿತರಣೆ ಮಾಡಲಾಗುವುದು ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ.ಕುಮಾರ್ ಹೇಳಿದರು.

ಅವರು ಕೆ.ಆರ್.ಪೇಟೆ ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ನಡೆದ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಳು ಆರ್ಥಿಕ ಹಾಗೂ ಸಾಮಾಜಿಕ ಭದ್ರತೆಯನ್ನು ಒದಗಿಸುವುದರೊಂದಿಗೆ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಿವೆ. ಇವುಗಳ ಮಹತ್ವವನ್ನು ಹೆಚ್ಚಿಸುವಲ್ಲಿ ಆಹಾರ ಭದ್ರತೆ, ಆರೋಗ್ಯ ಸೇವೆಗಳಿಗೆ ಪ್ರವೇಶ, ಉದ್ಯೋಗಾವಕಾಶ, ಆರ್ಥಿಕ ಸುಧಾರಣೆ ಮತ್ತು ಸಮಾನತೆಯನ್ನು ಹೆಚ್ಚಿಸಿವೆ

ಅನ್ನಭಾಗ್ಯ ಯೋಜನೆಯು ಬಡ ಕುಟುಂಬಗಳಿಗೆ ಆಹಾರ ಧಾನ್ಯಗಳ ವೆಚ್ಚವನ್ನು ಕಡಿಮೆ ಮಾಡಿದೆ.

ಶಕ್ತಿ ಯೋಜನೆಯು ಮಹಿಳೆಯರ ಪ್ರಯಾಣ ವೆಚ್ಚವನ್ನು ಕಡಿಮೆ ಮಾಡಿದೆ. ಅವರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಯನ್ನು ಸುಧಾರಿಸಿದೆ. ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳು ಕುಟುಂಬಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡಿದೆ ಅದೇ ಹಣವನ್ನು ಜನರು ಉಳಿತಾಯ ಮಾಡಿ ಆರೋಗ್ಯ ಸೇವೆಗಳಂತಹ ಇತರ ಅಗತ್ಯತೆಗಳಿಗೆ ಹಣ ಬಳಸಲು ಸಾಧ್ಯವಾಗಿದೆ. ಯುವನಿಧಿ ಯೋಜನೆಯು ನಿರುದ್ಯೋಗಿ ಯುವಕರಿಗೆ ಭತ್ಯೆಯನ್ನು ನೀಡುತ್ತದೆ. ಇದು ಅವರ ನಿರುದ್ಯೋಗದ ಒತ್ತಡವನು, ಕಡಿಮೆ ಮಾಡಿದೆ.

ಯುವ ನಿಧಿಯ ಮೂಲಕ ಪಡೆಯುವ 3ಸಾವಿರ ಭತ್ಯೆಯು ಯುವಜನರಲ್ಲಿ ತಮ್ಮ ವಿದ್ಯಾಭ್ಯಾಸದ ಸಾಮರ್ಥ್ಯಕ್ಕೆ ತಕ್ಕಂತೆ ಉತ್ತಮ ಉತ್ತಮ ವೇತನ ನೀಡುವ ಒಳ್ಳೆಯ ಉದ್ಯೋಗವನ್ನು ಹುಡುಕಲು ಸಹಕಾರಿಯಾಗುತ್ತಿದೆ. ಹೀಗೆ ನಮ್ಮ ಐದೂ ಗ್ಯಾರಂಟಿ ಯೋಜನೆಗಳು ನಗರ ಮತ್ತು ಗ್ರಾಮೀಣ ಪ್ರದೇಶಗಳ ಜನರ ನಡುವಿನ ಆರ್ಥಿಕ ಅಂತರವನ್ನು ಕಡಿಮೆ ಮಾಡಲು ಸಹಾಯಕವಾಗಿವೆ. ಐದು ಗ್ಯಾರಂಟಿ ಯೋಜನೆಗಳ ಯಶಸ್ವಿಯಾಗಿ ಅನುಷ್ಠಾನ ಗೊಳಿಸಲು ತಾಲ್ಲೂಕು ಮಟ್ಟ, ಜಿಲ್ಲಾ ಮಟ್ಟ ಹಾಗೂ ರಾಜ್ಯ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯನ್ನು ರಚಿಸಲಾಗಿದೆ ಈ ಸಮಿತಿಯು ಪ್ರತಿ 15ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಿ ಯಶಸ್ವಿಯಾಗಿ ಯೋಜನೆಗಳನ್ನು ಅನುಷ್ಠಾನ ಗೊಳಿಸಲು ಕೆಕಸ ಮಾಡುತ್ತಿವೆ. ಇದೂವರೆವಿಗೂ ಐದೂ ಗ್ಯಾರಂಟಿ ಯೋಜನೆಗಳಿಗೂ ಒಟ್ಟು ಸುಮಾರು 1 ಲಕ್ಷ ಕೋಟಿಗೂ ಹೆಚ್ಚು ಅನುಧಾನವನ್ನು ರಾಜ್ಯ ಸರ್ಕಾರವು ನೀಡಿರುತ್ತದೆ. ಗ್ಯಾರಂಟಿ ಯೋಜನೆಗಳು ನಮ್ಮ ಬಡವರು ಮತ್ತು ಮಧ್ಯಮ ವರ್ಗದವರ ದಿನ ನಿತ್ಯ ಜೀವನಕ್ಕೆ ಆಸರೆಯಾಗಿವೆ ಎಂದು ಎ.ಬಿ.ಕುಮಾರ್ ತಿಳಿಸಿದರು.

ಸಭೆಯಲ್ಲಿ ತಾಲ್ಲೂಕು ಆಹಾರ ಇಲಾಖೆಯ ಶಿರಸ್ತೇದಾರ್ ನಟರಾಜ್, ಚೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪುಟ್ಟಸ್ವಾಮೀಗೌಡ, ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಿಡಿಪಿಓ ವಿದ್ಯಾವತಿ, ಜಿಲ್ಲಾ ಉದ್ಯೋಗಾಧಿಕಾರಿ ವಿ.ನವೀನ್‌ಕುಮಾರ್, ಡಿಪೋ ಟ್ರಾಫಿಕ್ ಇನ್ಸ್ ಪೆಕ್ಟರ್ ಗವಿಸಿದ್ದಪ್ಪ ಅವರು ತಮ್ಮ ತಮ್ಮ ಇಲಾಖೆಯ ಪ್ರಗತಿಯ ವರದಿಯನ್ನು ಮಂಡಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯ್ತಿ ಸಹಾಯಕ ಲೆಕ್ಕಾಧಿಕಾರಿ ಶಂಕರ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರಾದ ಬೊಮ್ಮೇನಹಳ್ಳಿ ಲತಾಹರೀಶ್, ಕನಕದಾಸನಗರ ಶಿವಮ್ಮ, ಕೆ.ಎಸ್.ಆರ್.ಟಿ.ಸಿ ಶಿವಣ್ಣ, ಸಿಂಗನಹಳ್ಳಿ ಗೋಪಾಲ್, ಸಿ.ಆರ್.ಪಿ.ಕುಮಾರ್, ಬೂಕನಕೆರೆ ರೂಪಾಚಂದ್ರಶೇಖರ್, ಬಂಡಿಹೊಳೆ ಯೋಗೇಶ್(ಉಮೇಶ್), ಹಾಫೀಜ್ ಉಲ್ಲಾ, ಗೋವಿಂದನಹಳ್ಳಿ ಶ್ಯಾಮಣ್ಣ, ಬೂಕನಕೆರೆ ಬಿ.ಸಿ.ಮಾಧು, ದೊಡ್ಡತಾರಹಳ್ಳಿ ಸೋಮಶೇಖರ್, ಶಿವಲಿಂಗಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ವಿಷಯ ನಿರ್ವಾಹಕಿ ನಂದಿನಿ ಇತರರು ಉಪಸ್ಥಿತರಿದ್ದರು

# ಪ್ರವಾಸಿ ತಾಣಗಳ ಉತ್ತೇಜನಕ್ಕೆ ಗೈಡ್, ಮ್ಯಾಪ್- ವೆಬ್ ಸೈಟ್ ಸಿದ್ಧ: ಡಾ ಕುಮಾರ



ಮಂಡ್ಯ: ರಾಜ್ಯದಲ್ಲೇ ಅತಿ ಹೆಚ್ಚು ಪ್ರವಾಸಿ ತಾಣಗಳನ್ನು ಗುರುತಿಸಿರುವ ಹೆಗ್ಗಳಿಕೆ ಮಂಡ್ಯ ಜಿಲ್ಲೆಗೆ ಬಂದಿದ್ದು ಪ್ರವಾಸಿ ತಾಣಗಳನ್ನು ಉತ್ತೇಜಿಸಲು ಪ್ರವಾಸಿ ಗೈಡ್, ಮ್ಯಾಪ್ ಹಾಗೂ ವೆಬ್ ಸೈಟ್ ಗಳನ್ನು ಸಿದ್ಧಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.

ಕಾವೇರಿ ನದಿ ತೀರದಲ್ಲಿ ಒತ್ತುವರಿಯಾಗಿರುವ ಜಾಗಗಳನ್ನು ತೆರವುಗೊಳಿಸುವ ಸಂಬಂಧ ಚರ್ಚಿಸಲು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದವರು ಪ್ರವಾಸೋದ್ಯಮ ನೀತಿ 2024-29 ರಡಿ ಮಂಡ್ಯ ಜಿಲ್ಲೆಯಲ್ಲಿ 106 ಪ್ರವಾಸಿ ತಾಣಗಳನ್ನು ಸರ್ಕಾರದಿಂದ ಅಧಿಕೃತವಾಗಿ ಗುರುತಿಸಲಾಗಿದೆ ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ಪ್ರವಾಸೋದ್ಯಮಕ್ಕೆ ಸಂಬಂಧಿಸಿದಂತೆ ಇದುವರೆಗೂ ಯಾವುದೇ ರೀತಿಯ ವೆಬ್‌ಸೈಟ್ ಇರದ ಕಾರಣ ಪ್ರವಾಸೋದ್ಯಮ ಉತ್ತೇಜನ ನೀಡುವ ನಿಟ್ಟಿನಲ್ಲಿ ಮಂಡ್ಯ ಜಿಲ್ಲಾ ಪ್ರವಾಸೋದ್ಯಮದ ಕುರಿತು ವೆಬ್‌ಸೈಟ್ ನ್ನು ಸಾರ್ವಜನಿಕರ ಹಾಗೂ ಪ್ರವಾಸಿಗರ ಉಪಯೋಗಕ್ಕಾಗಿ ಸಿದ್ಧಪಡಿಸಲಾಗಿದೆ ಅಧಿಕೃತವಾಗಿ ಚಾಲನೆಯನ್ನು ಶೀಘ್ರದಲ್ಲೇ ನೀಡಲಾಗುವುದು ಎಂದರು.

ಮೇಲುಕೋಟೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ನಿರ್ಮಿಸಿರುವ ಯಾತ್ರಿನಿವಾಸ ಕಟ್ಟಡವನ್ನು ನಿರ್ವಹಣೆಗಾಗಿ ವಹಿಸುವ ಸಂಬಂಧ ಪ್ರವಾಸೋದ್ಯಮ ಇಲಾಖೆಯಿಂದ ಕರೆಯಲಾಗಿದ್ದ ಇ-ಟೆಂಡರ್ ನಲ್ಲಿ ಬಿಡ್ಡುದಾರರು ಭಾಗವಹಿಸದ ಹಿನ್ನಲೆಯಲ್ಲಿ ಸದರಿ ಕಟ್ಟಡವನ್ನು ಮೇಲುಕೋಟೆಯ ಧಾರ್ಮಿಕ ದತ್ತಿ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಮರ್ಪಕವಾಗಿ ನಿರ್ವಹಿಸಲು ತಿಳಿಸಿದರು.

ಶ್ರೀರಂಗಪಟ್ಟಣದ ಕೋಟೆ ಪ್ರದೇಶದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಅನುಷ್ಠಾನಗೊಳಿಸಿರುವ ಧ್ವನಿ ಮತ್ತು ಬೆಳಕು ಕಾರ್ಯಕ್ರಮದ ನಿರ್ವಹಣೆಗಾಗಿ ಸೂಕ್ತ ಸಂಸ್ಥೆಯನ್ನು ಆಯ್ಕೆ ಮಾಡಲು ಆಹ್ವಾನಿಸಲಾಗಿದ್ದ ಇ-ಟೆಂಡರ್ ನಲ್ಲಿ ಯಾವುದೇ ಬಿಡ್ಡುದಾರರು ಭಾಗವಹಿಸದ ಹಿನ್ನಲೆಯಲ್ಲಿ ಸದರಿ ಸೌಲಭ್ಯವನ್ನು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ವತಿಯಿಂದ ನಿರ್ವಹಿಸಲು ಸರ್ಕಾರದಿಂದ ಅನುದಾನ ಪಡೆಯಲು ಪ್ರಸ್ತಾವನೆ ಸಲ್ಲಿಸುಂತೆ ಸೂಚಿಸಿದರು.

ಮದ್ದೂರು ತಾಲ್ಲೂಕಿನ ಕೊಕ್ಕರೆ ಬೆಳ್ಳೂರು ಪ್ರವಾಸಿ ತಾಣದಲ್ಲಿ ನಿರ್ಮಿಸಿರುವ ಇಂಟರ್‌ಪ್ರಿಟೇಷನ್ ಸೆಂಟರ್ ಸೌಲಭ್ಯದ ನಿರ್ವಹಣೆಗಾಗಿ ಸೂಕ್ತ ಸಂಸ್ಥೆಯನ್ನು ಆಯ್ಕೆ ಮಾಡಲು ಆಹ್ವಾನಿಸಲಾಗಿದ್ದ ಇ-ಟೆಂಡರ್ ನಲ್ಲಿ ಯಾವುದೇ ಬಿಡ್ಡುದಾರರು ಭಾಗವಹಿಸದ ಹಿನ್ನೆಲೆಯಲ್ಲಿ ಸದರಿ ಸೌಲಭ್ಯವನ್ನು "ಫಫಈ ಖಟಜುಚಿ" ಸಂಸ್ಥೆಯಿಂದ ನಿರ್ವಹಿಸಲು ಸರ್ಕಾರದಿಂದ ಸೂಕ್ತ ಸ್ಪಷ್ಟೀಕರಣ ಡೆಯಬೇಕು ಎಂದು ಹೇಳಿದರು.

ನಾಗಮಂಗಲ ತಾಲ್ಲೂಕಿನ ಮುಳುಕಟ್ಟಮ್ಮ ದೇವಾಲಯದ ಬಳಿ ನಿರ್ಮಿಸಿರುವ ಯಾತ್ರಿನಿವಾಸ ಕಟ್ಟಡವನ್ನು ನಿರ್ವಹಣೆಗಾಗಿ ವಹಿಸುವ ಸಂಬೌಧ ಪ್ರವಾಸೋದ್ಯಮ ಇಲಾಖೆಯಿಂದ ಕರೆಯಲಾಗಿದ್ದ ಇ-ಟೆಂಡರ್ ನಲ್ಲಿ ಇಬ್ಬರು ಬಿಡ್ಡುದಾರರು

ಭಾಗವಹಿಸಿದ್ದು, ಸದರಿಯವರ ಅಗತ್ಯ ದಾಖಲೆಗಳನ್ನು ಸಲ್ಲಿಸದೇ ಇರುವ ಹಿನ್ನೆಲೆಯಲ್ಲಿ, ತಾಂತ್ರಿಕವಾಗಿ ಬಿಡ್ ಗಳು ಅನರ್ಹವಾಗಿದ್ದು, ಸದರಿ ಟೆಂಡರ್ ನ್ನು ರದ್ದುಪಡಿಸಿ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ವತಿಯಿಂದ ನಿರ್ವಹಿಸಲು ಸೂಕ್ತ ಸಂಸ್ಥೆಯನ್ನು ಆಯ್ಕೆ ಮಾಡಲು ಹೊಸದಾಗಿ ಮರು ಟೆಂಡರ್ ಆಹ್ವಾನಿಸಿ ಎಂದು ಹೇಳಿದರು.

ಶ್ರೀರಂಗಪಟ್ಟಣದ ಪಶ್ಚಿಮ ವಾಹಿನಿಯ ನಿರ್ಮಿಸಲಾಗಿರುವ ಎರಡು ಹೋಂಸ್ಟೇಗಳು ರಂಗನತಿಟ್ಟು ಪಕ್ಷಿಧಾಮ ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿಗೆ ಬರಲಿದ್ದು. ಹಿಂದೆ ನೀಡಿದ್ದ ಎರಡು ಹೋಂಸ್ಟೇ ಗಳನ್ನು ರದ್ದು ಪಡಿಸಿ ನೊಂದಣಿಯನ್ನು ಹಿಂಪಡೆಯುವಂತೆ ಸಭೆಯಲ್ಲಿ ಸೂಚಿಸಿದರು.

ನಿರ್ಮಾಣ ಮಾಡಲು ಅನುಮತಿ ನೀಡಿದ ಅಧಿಕಾರಿಗಳು ಹಾಗೂ ಹೋಂಸ್ಟೇ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು.

ಮಂಡ್ಯ ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ಅನುದಾನದಲ್ಲಿ ಒಟ್ಟು ರೂ.3672.41 ಲಕ್ಷಗಳ 41 ಮುಂದುವರೆದ ಪ್ರವಾಸಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದೆ ಸದರಿ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ತಿಳಿಸಿದರು.

ಸಭೆಯಲ್ಲಿ ಅಪರ ಪೊಲೀಸ್ ಅಧೀಕ್ಷಕ ಗಂಗಾಧರ ಸ್ವಾಮಿ, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ -1 ಶಿವಲಿಂಗಯ್ಯ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ರಾಘವೇಂದ್ರ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಉಪ ನಿರ್ದೇಶಕಿ ಗೀತಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸವಾಲುಗಳೇ ಇಲ್ಲದ ಜೀವನ ಉಪ್ಪು-ಖಾರವಿಲ್ಲದ ಸಪ್ಪೆ ಊಟವಿದ್ದಂತೆ



ಜೀವನದಲ್ಲಿ ಸೋಲು–ಗೆಲುವು, ನೋವು–ನಲಿವು ಸಹಜ, ನಾವು ಎಲ್ಲಾವನ್ನೂ ಒಂದೇ ರೀತಿ ಸ್ವೀಕರಿಸುವ ಮನಸ್ಥಿತಿಯನ್ನು ಬೆಳೆಸಿಕೊಳ್ಳಬೇಕು. ಗೆದ್ದಾಗ ಅಹಂಕಾರಪಡದೆ, ಸೋತಾಗ ಆತ್ಮಗೌರವ ಕಡಿಮೆ ಆಗದಂತೆ ನೋಡಿಕೊಳ್ಳಬೇಕು. ಫಲದ ಬಗ್ಗೆ ಚಿಂತೆ ಮಾಡದೆ ನಮ್ಮ ಕಾರ್ಯವನ್ನು ನಿಷ್ಠೆಯಿಂದ ಮಾಡಬೇಕು. ಲಾಭ–ನಷ್ಟ, ಸನ್ಮಾನ–ಅವಮಾನ, ಸುಖ–ದುಃಖವನ್ನು ಸಮಾನವಾಗಿ ನೋಡಬೇಕು. ಸೋಲು–ಗೆಲುವು, ನೋವು–ನಲಿವು ಜೀವನದ ಅವಿಭಾಜ್ಯ ಅಂಗವಾಗಿರುವಾಗ ನಮಗೆ ಬರೇ ಗೆಲುವುಗಳೇ ಬೇಕು ಎಂದು ಸೋಲುಗಳಿಂದ, ನೋವುಗಳಿಂದ ದೂರ ಓಡಬಾರದು, ಸುಖವನ್ನಷ್ಟೇ ಅನುಭವಿಸಿ ದುಃಖ ಬಂದಾಗ ಅದನ್ನು ಬೇಡವೆನ್ನಬಾರದು. ಬೇಡವೆಂದರೂ ಅದು ನಮ್ಮನ್ನು ಬಿಡುವುದೂ ಇಲ್ಲ. ಜೀವನದ ಸತ್ಯವೇ ಇದಾಗಿರುವಾಗ ಒಳ್ಳೆಯದನ್ನು ನಿರೀಕ್ಷಿಸುತ್ತಾ ಕೆಟ್ಟದ್ದನ್ನು ಎದುರಿಸಲು ತಯಾರಾಗುವುದು ಬುದ್ಧಿವಂತಿಕೆಯ ಲಕ್ಷಣ. ನಮ್ಮ ಮನಃಶಾಂತಿಯನ್ನು ಕಾಯ್ದುಕೊಂಡು ಬದುಕುವ ಉಪಾಯ ಇದು. ಅದು ಮುಂದಿನ ದಾರಿಗೆ ಅಥವಾ ಗುರಿಗೆ ಒಂದು ಪಾಠ. ಪ್ರತಿಯೊಬ್ಬ ಯಶಸ್ವಿಯಾದ ವ್ಯಕ್ತಿಯ ಜೀವನದಲ್ಲಿಯೂ ಹಲವು ವೈಫಲ್ಯಗಳಿರುತ್ತವೆ. ಥಾಮಸ್ ಎಡಿಸನ್ ಕೂಡ ಅವರ ಕೆಲಸದಲ್ಲಿ ಸಾವಿರ ಸಲ ವಿಫಲಗೊಂಡಿದ್ದರು, ರೋಲಿಂಗ್, ವಾಲ್ ಡಿಸ್ನಿಅವರು ಸೋಲಾಗ್ರಹಿಸಿಕೊಳ್ಳದೇ, ಮುಂದುವರೆದಿದ್ದರು. ಸೋಲಿನಲ್ಲಿ ವೇದನೆಯನ್ನು ಪಾಠವಾಗಿ ಬೆಳೆಸಿಕೊಂಡರು.

ಜೀವನವನ್ನು ಕುರುಕ್ಷೇತ್ರ, ರಣರಂಗ, ಹೋರಾಟವೆನ್ನುತ್ತಾರೆ. ಇದು ಸವಾಲುಗಳ ಸರಮಾಲೆ. ಜೀವನವು ಸುಂದರ ಸ್ವಪ್ನ, ಭ್ರಮಾಲೋಕ. ಒಟ್ಟಿನಲ್ಲಿ ಜೀವನದ ವಾಸ್ತವ್ಯಗಳು ನಮ್ಮ ನಿರೀಕ್ಷೆಗಳಿಗಿಂತ ಭಿನ್ನವಾಗಿರುವುದಂತೂ ಸತ್ಯ. ಇಂತಹ ಸಮ್ಮಿಶ್ರ ಅನುಭವಗಳ ಆಗರವಾಗಿರುವ ಜೀವನವನ್ನು ಜೀವಿಸುವ ಅವಕಾಶ ಮನುಷ್ಯರಾದ ನಮಗೆ ದೊರಕಿದೆ. ಅದನ್ನು ಸಂಪೂರ್ಣವಾಗಿ, ಪರಿಪೂರ್ಣವಾಗಿ ಜೀವಿಸಿ ನಮ್ಮ ಅನುಭವ ಸಂಪತ್ತನ್ನು ವೃದ್ಧಿಸಿಕೊಂಡು ಜೀವಿಸಬೇಕೆ ಹೊರತು ಜೀವನದ ಸವಾಲುಗಳಿಗೆ ಹೆದರಿ ಓಡುವ ಹೇಡಿತನ ನಮ್ಮದಾಗಬಾರದು. ಬದುಕಿನ ಪ್ರತಿ ಹೆಜ್ಜೆಯಲ್ಲೂ ಸವಾಲಿದೆ, ಸೋಲು–ಗೆಲುವಿದೆ. ನಮ್ಮ ಹಿಂದಿನ ಹೆಜ್ಜೆಗಳನ್ನು ಮುಂದಿನ ಹೆಜ್ಜೆಗಳಿಗೆ ಒತ್ತುಕೊಟ್ಟು ಶಕ್ತಿಯುತ ಹೆಜ್ಜೆಗಳನ್ನಾಗಿ ಮಾರ್ಪಡಿಸಬೇಕು. ನಾವು ಸವಾಲುಗಳನ್ನು ಎದುರಿಸಲು ಸದಾ ಸಿದ್ಧರಾಗಿಯೇ ಇರಬೇಕು. ಜೀವನದಲ್ಲಿ ಯಾವ ಸವಾಲುಗಳೇ ಇಲ್ಲದಿದ್ದರೆ ಅದೊಂದು ಉಪ್ಪು–ಖಾರವಿಲ್ಲದ ಸಪ್ಪೆ ಊಟವಾದೀತು. ಜೀವನದಲ್ಲಿ ಯಾವ ಕಷ್ಟಗಳು ಬಂದರೂ ಹೆದರಿ ಗಾಬರಿ ಪಡುವ, ಸೋತು ಕುಸಿಯುವ ಅವಶ್ಯಕತೆಯೇ ಇಲ್ಲ. ಆಕಾಶಕ್ಕೆ ಏಣಿ ಕಟ್ಟುವಂಥಾ ಮಹತ್ತರ ಆಸೆ ಆಕಾಂಕ್ಷೆಗಳು, ನಿರೀಕ್ಷೆಗಳು ಮಾನವ ಸಹಜವಾದ ಭಾವನೆಗಳು. ಎಲ್ಲಾ ಪರೀಕ್ಷೆಗಳಲ್ಲೂ ಗೆಲುವು ಸಿಗಬೇಕೆನ್ನುವ ಆಸೆ ಎಲ್ಲರಿಗೂ ಇರುತ್ತದೆ. ಆ ಆಸೆ ದುರಾಸೆಯಾಗಬಾರದು. ಗೆಲ್ಲ ಬೇಕೆನ್ನುವ ಪ್ರಯತ್ನವನ್ನು ನಾವು ಬಿಡಬಾರದು. ಇವುಗಳನ್ನು ಸಮಾನವಾಗಿ ಸ್ವೀಕರಿಸುವ ಅಂತಃಶಕ್ತಿ ಬೆಳೆಸಿಕೊಳ್ಳುವ ಮನಸ್ಥಿತಿ ನಮ್ಮದಾಗಬೇಕು. ನೋವು ನಲಿವುಗಳು ನಮ್ಮ ಉಸಿರಾಟದಷ್ಟೇ ಸತ್ಯ. ನಡೆಯಲು ಕಲಿಯುವ ಮಗು ಒಮ್ಮೆ ಬಿದ್ದೆನೆಂದು ನಡೆಯುವುದನ್ನು ನಿಲ್ಲಿಸುವುದಿಲ್ಲ. ಹಾಗೇ ನೋವುಗಳನ್ನು ಮರೆತು ಮುನ್ನುಗ್ಗುವುದೇ ಒಂದು ಮಹತ್ತರ ಸಾಧನೆ. ಈ ರೀತಿಯಲ್ಲಿ ಮನಸ್ಸನ್ನು ರೂಪಿಸಿಕೊಂಡವನು ಯಾವ ಬಿರುಗಾಳಿಗೂ ಕೊಚ್ಚಿಕೊಂಡು ಹೋಗುವವನಲ್ಲ. ಕಲ್ಲುಬಂಡೆಯಂತೆ ಭದ್ರವಾಗಿ ನಿಲ್ಲಬಲ್ಲವನಾಗುತ್ತಾನೆ.

ಮುಳುಗದಿರು, ಜೀವನದ ತೆರೆಯ ಮೇಲೀಜುತಿರು,
ಒಳಿತನಾಗಿಸು, ಕೊಡುತ ಕೊಳುತ ಸಂತಸವ,
ಕಳವಳಂ ಪಡದೆ ನಡೆ ಕಡೆಯ ಕರೆ ಬಂದಂದು,
ಮಿಳಿತನಿರು ವಿಶ್ವದಲಿ ಮಂಕುತಿಮ್ಮ!!



ಜೀವನದಲ್ಲಿ ಒಳ್ಳೆಯದನ್ನು ನಿರೀಕ್ಷಿಸುತ್ತಾ ಕೆಟ್ಟದ್ದು ಬಂದರೆ ಅದನ್ನು ಎದುರಿಸಲು ನಾವು ತಯಾರಾಗಿದ್ದರೆ ಜೀವನ ರಣರಂಗವೂ ಆಗುವುದಿಲ್ಲ, ಕುರುಕ್ಷೇತ್ರವೂ ಆಗುವುದಿಲ್ಲ. ಸೋಲಿನ ಬಳಿಕ ಮತ್ತೆ ಆತ್ಮವಿಶ್ವಾಸದಿಂದ ಪುನಃ ಪ್ರಾರಂಭಿಸಿ, ಸೋಲು ಉಂಟಾದಾಗ ಗುರಿಯನ್ನು ಬದಲಾಯಿಸದೆ, ಮಾರ್ಗವನ್ನು ಬದಲಿಸಿಕೊಂಡು ಯಶಸ್ಸಿನ ದಾರಿ ಕಾಣಬೇಕು. ಚಾಣಕ್ಯ ನೀತಿಯಂತೆ ಶ್ರಮ ಮತ್ತು ಹೋರಾಟದಲ್ಲಿ ನಂಬಿಕೆ ಇದ್ದರೆ ಯಶಸ್ಸು ಕಟ್ಟಿಟ್ಟಬುತ್ತಿ. ಸೋಲು ಅಂತಿಮವಲ್ಲ, ಗೆಲುವು ಶಾಶ್ವತವಲ್ಲ, ಎರಡನ್ನೂ ಸಮಾನ ದೃಷ್ಟಿಯಿಂದ ಸ್ವೀಕರಿಸುವುದು ಜೀವನದ ಧರ್ಮ.



ಪುಷ್ಪ ಪ್ರಸಾದ್

# 'ಮುತುವರ್ಜಿ ವಹಿಸಿ ಹಾಸ್ಟೆಲ್ ಹಾಗೂ ಅಂಗನವಾಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿ'

**ಮಂಡ್ಯ:** ಅಧಿಕಾರಿಗಳು ಹಾಸ್ಟೆಲ್ ಹಾಗೂ ಅಂಗನವಾಡಿ ಕಾಮಗಾರಿಗಳನ್ನು ವಿಳಂಬ ಮಾಡದೆ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಮಂಗಳವಾರ ಸೂಚಿಸಿದರು.

ಮುಖ್ಯಮಂತ್ರಿಗಳ ಸಭೆಯಲ್ಲಿ ನೀಡಿದ ಸೂಚನೆಯಂತೆ ವಿವಿಧ ಇಲಾಖೆಗಳ ಕಾಮಗಾರಿ ಪ್ರಗತಿ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಲ್ಪಸಂಖ್ಯಾತರ ಇಲಾಖೆಯ 30 ವಿವಿಧ ಕಾಮಗಾರಿಗಳು ಬಾಕಿ ಇದ್ದು ಶೀಘ್ರವಾಗಿ ಪೂರ್ಣಗೊಳಿಸಿ ಎಂದು ಹೇಳಿದರು.

ಹಾಸ್ಟೆಲ್ ರಿಪೇರಿ ಕಾಮಗಾರಿಗಳು ನೂತನ ಹಾಸ್ಟೆಲ್ ನಿರ್ಮಾಣ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ತೆಗೆದುಕೊಂಡು ಕಾರ್ಯನಿರ್ವಹಿಸಿ. ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆ ಆಗಬಾರದು ಅಧಿಕಾರಿಗಳು ವಿಶೇಷ ಕಾಳಜಿ ವಹಿಸಿದಾಗ ಕಾಮಗಾರಿಗಳು ಶೀಘ್ರವಾಗಿ ಪೂರ್ಣಗೊಳ್ಳುತ್ತದೆ ಎಂದು ಹೇಳಿದರು.

ಗುತ್ತಿಗೆದಾರರು ನಿಗದಿತ ಅವಧಿ ಒಳಗೆ ಕಾಮಗಾರಿಗಳನ್ನು ಮುಗಿಸಬೇಕು. ನಿಗದಿತ ಅವಧಿಗಿಂತ ಹೆಚ್ಚು ಸಮಯ ತೆಗೆದುಕೊಂಡರೆ ಗುತ್ತಿಗೆದಾರರೇ ಹೆಚ್ಚುವರಿ ವೆಚ್ಚವನ್ನು ಭರಿಸಬೇಕಾಗುತ್ತದೆ. ಅಂಗನವಾಡಿ ಕೇಂದ್ರಗಳು ಅತಿ ಮುಖ್ಯ, ಅಂಗನವಾಡಿ ಕೇಂದ್ರಕ್ಕೆ ಸಂಬಂಧಪಟ್ಟ ಕಾಮಗಾರಿಗಳನ್ನು ವಿಳಂಬ ಮಾಡಲೇ ಶೀಘ್ರವಾಗಿ ಮುಗಿಸಿ ಎಂದು ಎಚ್ಚರಿಸಿದ್ದರು.

ಮಿಮ್ಸ್ ಕ್ಯಾನ್ಸರ್ ಕೇರ್ ಸೆಂಟರ್ ಈಗಾಗಲೇ



ನಿರ್ಮಾಣಗೊಂಡಿದ್ದು ಶೀಘ್ರವಾಗಿ ಉದ್ಘಾಟನೆ ಮಾಡಲಾಗುವುದು. ಸಂಬಂಧಪಟ್ಟ ವಿವಿಧ ಕಾಮಗಾರಿಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸಭೆ ಆಯೋಜಿಸಿ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸೂಚಿಸಬೇಕು ಎಂದು ಹೇಳಿದರು.

ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಂತೆ 166 ಕೊಠಡಿಗಳ ಕಾಮಗಾರಿಗಳು ಇದ್ದು ಈಗಾಗಲೇ 154 ಕೊಠಡಿಗಳ ಕಾಮಗಾರಿಗಳನ್ನು ಮುಗಿಸಲಾಗಿದೆ. ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಸುಸಜ್ಜಿತವಾದ ಕೊಠಡಿಗಳನ್ನು ನಿರ್ಮಾಣ ಮಾಡಿ ಎಂದು ಹೇಳಿದರು.

ಸರ್ಕಾರದ ವಿವಿಧ ಕಾಮಗಾರಿಗಳನ್ನು ಸಂಬಂಧಪಟ್ಟ ಇಲಾಖೆಯವರು ವಿಶೇಷ ಆಸಕ್ತಿ ವಹಿಸಿ ಗುತ್ತಿಗೆದಾರರೊಂದಿಗೆ ಸಮನ್ವಯ ಸಾಧಿಸಿ ನಿರ್ದಿಷ್ಟ ಅವಧಿಯೊಳಗೆ ಪೂರ್ಣಗೊಳಿಸುವಂತೆ ನೋಡಿಕೊಳ್ಳುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಹೇಳಿದರು. ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ನರಸಿಂಹಮೂರ್ತಿ, ಪಶು ಸಂಗೋಪನೆ ಇಲಾಖೆಯ ಉಪನಿರ್ದೇಶಕ ಶಿವಲಿಂಗಯ್ಯ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಶ್ರೀನಿವಾಸ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಆಶಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪ್ರಗತಿ ಶಾಲೆಯ ವಿದ್ಯಾರ್ಥಿಗಳಿಂದ ಸ್ವಚ್ಛತೆಗಾಗಿ ಜಾಥಾ






**ಕೆಆರ್ ಪೇಟೆ:** ಪಟ್ಟಣದ ಪ್ರಗತಿ ಶಾಲೆಯ ವಿದ್ಯಾರ್ಥಿಗಳು ಪುರಸಭೆಯವರು ಏರ್ಪಡಿಸಿದ್ದ ಪ್ರಮುಖ ಬೀದಿಗಳಲ್ಲಿ ಸ್ವಚ್ಛತೆಗಾಗಿ ಜಾಥಾ ಕಾರ್ಯಕ್ರಮ ನಡೆಸಿದರು.

ಪುರಸಭೆಯ ಮುಖ್ಯ ಅಧಿಕಾರಿ ಅಶೋಕ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಅವರು ಮಾತನಾಡಿ ಸ್ವಚ್ಛತೆ ಅತ್ಯಂತ ಅಗತ್ಯವಾದ ಜೀವನದ ಒಂದು ಭಾಗವಾಗಿದೆ ಎಂದು ಅವರು ಹೇಳಿದರು. ಸ್ವಚ್ಛತೆಯು ಉತ್ತಮ ಆರೋಗ್ಯದ ಅವಶ್ಯಕತೆಗೆ ಅಗತ್ಯ. ಸ್ವಚ್ಛತೆ ಒಂದು ಜೀವನದ ಭಾಗವಾಗಿದೆ. ಪ್ರತಿನಿತ್ಯ ಸ್ವಚ್ಛತೆಗೆ ಹೆಚ್ಚು ಗಮನ ನೀಡುವುದರಿಂದ ಆರೋಗ್ಯದ ಕಡೆ ಹೆಚ್ಚಿನ ಗಮನ ನೀಡಬಹುದು. ಸ್ವಚ್ಛತೆಯನ್ನು ಪ್ರತಿಯೊಬ್ಬರು ಕಾಪಾಡಬೇಕು ಸ್ವಚ್ಛತೆ ಇದ್ದಲ್ಲಿ ಎಲ್ಲವೂ ಉತ್ತಮವಾಗಿರುತ್ತದೆ. ಪ್ರತಿ ಮನೆ ಮನೆಯಲ್ಲಿ, ಬೀದಿ ಬೀದಿಯಲ್ಲಿ ಪಟ್ಟಣದಲ್ಲಿ ಸ್ವಚ್ಛತೆ ಅವಶ್ಯಕ . ಬದುಕಿಗೆ ಸ್ವಚ್ಛತೆ ಅನಿವಾರ್ಯ ಸ್ವಚ್ಛತೆಯಿಂದ ಹಲವಾರು ರೋಗಿಗಳು ಉಂಟಾಗದಂತೆ ನೋಡಿಕೊಳ್ಳಬಹುದು . ಒಂದು ಪಟ್ಟಣದ ಸ್ವಚ್ಛತೆ ಆ ಭಾಗದ ನಾಗರಿಕತೆಯನ್ನು ತಿಳಿಸುತ್ತದೆ, ಉತ್ತಮವಾದ ನಗರ ಎನಿಸಿಕೊಳ್ಳಬೇಕಾದರೆ ಅಲ್ಲಿ ಸ್ವಚ್ಛತೆಗೆ ಹಲವು ಸುಧಾರಣ, ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಿಕರು ಕಂಡ ಕಂಡಲ್ಲಿ ಕಸಗಳನ್ನು ಎಸೆಯುವುದರ ಬದಲು ನಿರ್ದಿಷ್ಟ ಸ್ಥಳದಲ್ಲಿ ಇರಿಸಿ ಪುರಸಭೆಯ ವಾಹನಗಳಿಗೆ ನೀಡಿದರೆ ಪಟ್ಟಣದ ಸ್ವಚ್ಛತೆ ಕಾಪಾಡಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರು

ಸ್ವಚ್ಛತೆಯ ಕಡೆ ಗಮನ ಕೊಡಬೇಕು ಪುರಸಭೆಯ ನೌಕರರಿಗೆ ಸಹಕಾರ ನೀಡಬೇಕು. ಇದರಿಂದ ಸ್ವಚ್ಛ ಪುರಸಭೆ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ಪರಿಸರ ಇಂಜಿನಿಯರ್ ಪ್ರಿಯಾಂಕಾ ಎಂ. ಎ, ಆರೋಗ್ಯ ನಿರೀಕ್ಷಕರಾದ ಅಶೋಕ್, ಪ್ರಗತಿ ಶಾಲೆಯ ಶಿಕ್ಷಕರು ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿಗಳು ಬ್ಯಾಂಡ್ ಸೆಟ್, ಬಾರಿಸುವ ಮೂಲಕ ಜನ ಜಾಗೃತಿ ಮೂಡಿಸಿದರು

# ಹುತಾತ್ಮ ವೀರ ಯೋಧರ ಕುಟುಂಬಕ್ಕೆ ಆಸರೆ ಕಲ್ಪಿಸುವ ಸುಭಾಷಿಣಿ ವಸಂತ್

ದೇಶಸೇವೆಗಾಗಿ ತನ್ನ ಬದುಕನ್ನು ಅರ್ಪಿಸಿದ ತನ್ನ ಪತಿಯ ತ್ಯಾಗವನ್ನು ಈ ಜಗತ್ತು ಮರೆತಿದೆ ಎಂದು ಆ ವಿಧವೆ ಹೆಣ್ಣುಮಗಳಿಗೆ ಅನ್ನಿಸಿದಾಗ ಆಕೆ ಮೌನವಾಗಿ ಹೇಗೆ ಕೂರಲು ಸಾಧ್ಯ ಎಂಬ ಪ್ರಶ್ನೆ ತನ್ನ ಪತಿಯನ್ನು ಕರೆದುಕೊಂಡು ದಿನ ಮುಂಜಾನೆ ಆಕೆಯ ಮನದಲ್ಲಿ ರಿಂಗಣಿಸಿತು. ಆ ತಣ್ಣಗಿನ ಮುಂಜಾನೆಯಲ್ಲಿ ಆಕೆ ನಿರ್ಧಾರವನ್ನು ಕೈಗೊಳ್ಳುವ ಮೂಲಕ ತನ್ನ ಹತಾಶೆಯನ್ನೇ ತನ್ನ ಬದುಕಿನ ಮೂಲ ಉದ್ದೇಶವಾಗಿ ಬದಲಾಯಿಸಿಕೊಂಡಳು. ಆ ನಿಟ್ಟಿನಲ್ಲಿ ತನ್ನ ನೋವನ್ನು ಬೇರೊಬ್ಬರ ಬದುಕನ್ನು ಸುಧಾರಿಸುವ ಸಂಕಲ್ಪವನ್ನಾಗಿಸಿ ನೂರಾರು ಜನರಿಗೆ ಭರವಸೆಯ ಕಿರಣವಾಗಿ ಪರಿಣಮಿಸಿದಳು. ಆಕೆಯೇ ಸುಭಾಷಿಣಿ ವಸಂತ್.

2007 ರ ಜುಲೈ 31 ರಂದು ಕರ್ನಲ್ ವಸಂತ್ ವೇಣುಗೋಪಾಲ್ ಜಮ್ಮು ಮತ್ತು ಕಾಶ್ಮೀರದ ಉಗ್ರಗಾಮಿಗಳೊಂದಿಗೆ ಹೋರಾಟದಲ್ಲಿ ಹುತಾತ್ಮರಾದರು. ತಮ್ಮ ಬದುಕಿನ ಆಧಾರ ಸ್ತಂಭವೇ ಆಗಿದ್ದ ವಸಂತ್ ವೇಣುಗೋಪಾಲ್ ಅವರ ಸಾವು ತಾಯಿ ಮತ್ತು ಮಕ್ಕಳ ಜೀವನವನ್ನು ಶಾಶ್ವತವಾಗಿ ಬದಲಿಸಿತು. ಭಾರತ ಸರ್ಕಾರವು ಅವರಿಗೆ ಶಾಂತಿ ಸಮಯದ ಅತ್ಯುನ್ನತ ಪುರಸ್ಕಾರವನ್ನು ನೀಡಿ ಗೌರವಿಸಿತು... ನಿಜ ಆದರೆ ಸುಭಾಷಿಣಿ ಮತ್ತು ಆಕೆಯ ಇಬ್ಬರು ಹೆಣ್ಣು ಮಕ್ಕಳಿಗೆ ಆದ ವೈಯಕ್ತಿಕ ನಷ್ಟವನ್ನು ಭರಿಸಲು ಯಾರಿಗೂ ಸಾಧ್ಯವಿರಲಿಲ್ಲ.

ವಿಧವೆಯಾದ ಹೆಣ್ಣುಮಕ್ಕಳು ಮನೆಯ ಕತ್ತಲ ಕೋಣೆಯಲ್ಲಿ ಕಳೆದುಹೋಗಲಿ ಎಂದು ಬಯಸುವ ಈ ಸಮಾಜದಲ್ಲಿ ಪುಟ್ಟ ಪುಟ್ಟ ಇಬ್ಬರು ಹೆಣ್ಣು ಮಕ್ಕಳನ್ನು ಕಟ್ಟಿಕೊಂಡು ಆಕೆ ನೋವು ದುಃಖ ಮತ್ತು ಅತಂತ್ರಗಳ ನಡುವೆ ಬದುಕನ್ನು ಸಾಗಿಸಬೇಕಾಗಿತ್ತು.

ಅಂತಹ ನೋವಿನ ಸಮಯದಲ್ಲಿ ತನ್ನ ಇಬ್ಬರು ಮಕ್ಕಳ ಮುಖವನ್ನು ನೋಡಿಯಾದರೂ ತನ್ನ ನೋವನ್ನು ಮರೆಯಬೇಕು ಎಂದು ಮೌನದಲ್ಲಿಯೇ ನಿರ್ಧರಿಸಿದ ಸುಭಾಷಿಣಿಯವರು ತನ್ನ ಪತಿಯ ಈ ಬಲಿದಾನ ಜನರ ಕಣ್ಣಿನಿಂದ ಮರೆಯಾಗಬಾರದು. ಅದೆಷ್ಟೋ ಜನ ಯುದ್ಧದಲ್ಲಿ ತೀರಿ ಹೋದ ಸೈನಿಕರ ಪತ್ನಿಯರು ಬಾಳು ಅತಂತ್ರವಾಗಿ ಬದುಕುವುದು ದುಸ್ತರವಾಗುವುದನ್ನು ಆಕೆ ನೋಡಿದ್ದಳು. ಪತಿ ಸೇನೆಯಲ್ಲಿ ಕಾರ್ಯನಿರ್ವಹಿಸಿ ಹುತಾತ್ಮನಾದ ಎಂಬ ಘನತೆ ಅವರೊಂದಿಗೆ ಇದ್ದರೂ ಕೂಡ ತಮ್ಮ ಹಕ್ಕುಗಳ ಕುರಿತಾದ ಅರಿವಿನ ಕೊರತೆ ಹಾಗೂ ಬದುಕನ್ನು ನಡೆಸಲು ಅತ್ಯವಶ್ಯಕವಾದ ಹಣಕಾಸಿನ ಕೊರತೆಯಿಂದ ಉಂಟಾದ ಬಡತನ ಹಾಗೂ ಸಮಾಜದ ಮೌನ ಆಕೆಯ ಸಹನೆಯನ್ನು ಕೆಣಕಿದವು. ಅತಂತ್ರ ಬದುಕು ಕಣ್ಣೀರು, ನೋವು ಮತ್ತು ನಿರಾಶೆಗಳನ್ನು ದುಪ್ಪಟ್ಟು ಮಾಡಬಲ್ಲದು ಹಾಗೂ ಹಾಗೂ ಬದುಕಿನ ಮೇಲೆ ಇರುವ ಭರವಸೆಯನ್ನು ಕ್ಷೀಣಿಸಬಲ್ಲದು ಎಂಬುದು ಆಕೆಗೆ ಗೊತ್ತಿತ್ತು

ತನ್ನ ಪತಿ ತೀರಿದ ಕೇವಲ ಮೂರು ತಿಂಗಳಿನಲ್ಲಿ ಅಂದರೆ ಅಕ್ಟೋಬರ್ 27 ರಲ್ಲಿ ಆಕೆ "ವಸಂತ ರತ್ನ ಫೌಂಡೇಶನ್ ಫಾರ್ ಆರ್ಟ್ಸ್ " ಎಂಬ ಸಂಸ್ಥೆಯನ್ನು ಹುಟ್ಟು ಹಾಕಿದಳು. ಕೆಲ ದೂರವಾಣಿ ಕರೆಗಳು, ಕೆಲವು ಕೈಬರಹದ ಪತ್ರಗಳಿಂದ ಆರಂಭವಾದ ಈ ಸಂಸ್ಥೆಯ ಕಾರ್ಯ ಚಟುವಟಿಕೆಗಳು ಕಾನೂನು ಹಾಗೂ ನ್ಯಾಯದ ಮೇಲಿನ ಭರವಸೆಯನ್ನು ಹೊಂದಿದ್ದು ನಂತರ ಈ ನಂಬಿಕೆಯು ಉಳಿದವರ ಪಾಲಿಗೆ ಜೀವನವನ್ನೇ ಬದಲಾಯಿಸುವ ರೇಖೆಯಾಗಿ ಪರಿಣಮಿಸಿತು. ಸೇನೆಯಲ್ಲಿ ಸೇವೆಯಲ್ಲಿದ್ದುಕೊಂಡು ಹುತಾತ್ಮರಾದ ಸೈನಿಕರ ವಿಧವಾ ಪತ್ನಿಯರನ್ನು ಉದ್ದೇಶಿಸಿ ಆಕೆ ಮಾಡುತ್ತಿದ್ದ ಫೋನ್ ಕರೆಗಳು ಹಾಗೂ ಬರೆಯುತ್ತಿದ್ದ ಪತ್ರಗಳು ಆ ಹೆಣ್ಣು ಮಕ್ಕಳ ಪಾಲಿಗೆ ಘನತೆ ಮತ್ತು ರಕ್ಷಣೆಯ ಭಾವವನ್ನು ನೀಡತೊಡಗಿದವು. ಆಕೆ ಕೇವಲ ಅವರಿಗೆ ದಾನವನ್ನು ಮಾಡಲಿಲ್ಲ. ಬದಲಾಗಿ ಅವರಿಗೆ ಒಂದು ಸುಸಜ್ಜಿತ ಸಮುದಾಯದ ವ್ಯವಸ್ಥೆಯನ್ನು ಸಹಾನುಭೂತಿಯನ್ನು ಹಾಗೂ ಬದುಕಿನ ಮತ್ತೊಂದು ಅವಕಾಶವನ್ನು ತನ್ನ ಸಂಸ್ಥೆಯ ಮೂಲಕ ಕೊಡಮಾಡಿದರು.

ಸಂಸ್ಥೆಯ ಮೂಲಕ ಸುಭಾಷಣೆಯವರ ಭಾವನಾತ್ಮಕ ಬೆಂಬಲವನ್ನು ಪಡೆದ ಮಹಿಳೆಯರು ತಮ್ಮ ಪತಿಯ ಸಾವಿನ ನಂತರದ ನಿವೃತ್ತಿ ವೇತನವನ್ನು ಪಡೆಯಲು, ಅವರ ಹುದ್ದೆಗೆ ತಕ್ಕನಾದ ಗೌರವಾರ್ಹತೆಯನ್ನು ಪಡೆಯಲು ಕಾನೂನಾತ್ಮಕ ಸಲಹೆಗಳನ್ನು, ಔದ್ಯೋಗಿಕ ತರಬೇತಿಗಳನ್ನು ಪಡೆಯಲು ಸಹಾಯ ಹಸ್ತವನ್ನು ಚಾಚಿದರು. ಹುತಾತ್ಮ ಯೋಧರ ಮಕ್ಕಳ ಶೈಕ್ಷಣಿಕ ವಿದ್ಯಾರ್ಥಿ ವೇತನವನ್ನು ಪಡೆಯಲು ಯೋಜನೆಗಳನ್ನು ರೂಪಿಸಿದರು. ಯೋಧರ ವಿಧವಾ ಪತ್ನಿಯರಲ್ಲಿ ಮತ್ತೆ ಬದುಕನ್ನು ಕಟ್ಟಿಕೊಳ್ಳಲು ಅನುವಾಗುವಂತೆ ಔದ್ಯೋಗಿಕ ತರಬೇತಿಯ ಜೊತೆಗೆ ಕಲೆ, ನೃತ್ಯ ಮತ್ತು ಸಂಸ್ಕೃತಿಯ ವಿಭಿನ್ನ ಕಾರ್ಯಕ್ರಮಗಳಲ್ಲಿ ಭಾಗವಹಿಸುವ, ಸಾಮೂಹಿಕ ಚಟುವಟಿಕೆಗಳನ್ನು ಕೈಗೊಳ್ಳುವ ಮತ್ತು ಅದರಲ್ಲಿ ಅವರು ಪಾಲ್ಗೊಳ್ಳುವ ನಿಟ್ಟಿನಲ್ಲಿ ಭರವಸೆಯನ್ನು ತುಂಬಿದರು.

ಆಕೆಯ ನಂಬಿಕೆಯ ಪ್ರಕಾರ ಹುತಾತ್ಮ ಯೋಧರ ವಿಧವಾ ಪತ್ನಿಯರು ತಮ್ಮ ನೋವಿನ ಹತಾಶೆಯ ಬದುಕಿನ ಮೂಲಕ ತಮ್ಮನ್ನು ತಾವು ತೋರ್ಪಡಿಸಿಕೊಳ್ಳದೆ ಹೆಮ್ಮೆಯ ಬದುಕನ್ನು ಬಾಳಬೇಕು. ತಮ್ಮ ಪತಿಯ ಬಲಿದಾನ ಅವರನ್ನು ಮೌನದ, ನಿಶ್ಯಬ್ದದ ಆಳದ ಬದುಕಿಗೆ ತಳ್ಳಬಾರದು ಎಂಬ ಆಶಯ ಆಕೆಯದಾಗಿದ್ದು ತನ್ನ ಸಂಸ್ಥೆಯ ಮೂಲಕ ಅವರ ಬದುಕನ್ನು ನೇರ್ಪಡಿಸುವ ಎಲ್ಲ ರೀತಿಯ ಕ್ರಮಗಳನ್ನು ಆಕೆ ತನ್ನ ಸಂಸ್ಥೆಯ ಮೂಲಕ ಕೈಗೊಂಡಳು. ನುರಿತ ಶಾಸ್ತ್ರೀಯ ನೃತ್ಯ ಕಲಾವಿದೆಯಾಗಿದ್ದ ಆಕೆ ವೇದಿಕೆಯ ಮೇಲೆ ಪ್ರದರ್ಶನ ನೀಡುವುದರ ಜೊತೆ ಜೊತೆಗೆ ಹತ್ತು ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿದರು. ಹುತಾತ್ಮ ಯೋಧರ ಪತ್ನಿಯರ ಸಮಾವೇಶಗಳನ್ನು ಏರ್ಪಡಿಸಿ ಅಲ್ಲಿ ಅವರಿಗೆ ಮಾತನಾಡಲು, ತಮ್ಮ ನೋವು ಮತ್ತು ದುಃಖಗಳನ್ನು ಹೊರಹಾಕಲು ಹಾಗೂ ಮತ್ತೆ ಬದುಕನ್ನು ಎದುರಿಸಲು ಅನುವಾಗುವಂತೆ ತಯಾರಾಗಲು ಪ್ರೇರೇಪಿಸಿದರು. ಖುದ್ದು ತನ್ನ ನೋವನ್ನು ತನ್ನ ಭರತನಾಟ್ಯದ ಪ್ರದರ್ಶನದ ಭಾವ ಭಂಗಿಗಳಲ್ಲಿ ಅಭಿವ್ಯಕ್ತಿಸಿದ ಆಕೆ ಉಳಿದವರಿಗೆ ಆ ಹಾದಿಯಲ್ಲಿ ನಡೆದು ಘನತೆಯ ಬದುಕನ್ನು ಮುನ್ನಡೆಸಲು ದಾರಿ ತೋರಿದರು.

ನಿಧಾನವಾಗಿ ಆದರೆ ಅಷ್ಟೇ ದೃಢವಾಗಿ ಆಕೆಯ ಸಂಸ್ಥೆ ಬೆಳೆಯಿತು. ಇಡೀ ಕರ್ನಾಟಕ ರಾಜ್ಯದ ಎಲ್ಲ





ವೀರ ಹುತಾತ್ಮ ಯೋಧರ ಪತ್ನಿಯರ ಭರವಸೆಗಳನ್ನು ಹೆಚ್ಚಿಸಿ ಅವರು ಮತ್ತೆ ತಮ್ಮ ಬದುಕಿನಲ್ಲಿ ಮುಂದಿನ ಹೆಜ್ಜೆಯನ್ನು ಇಡಲು ಪ್ರೇರಣೆ ದೊರೆಯಿತು. ಮನೆಯ ನಾಲ್ಕು ಗೋಡೆಗಳ ಒಳಗೆ ಇರಲು ನಿರ್ಧರಿಸಿದ್ದ ಯೋಧ ಪತ್ನಿಯರು ಔದ್ಯೋಗಿಕ ತರಬೇತಿಗಳನ್ನು ಪಡೆದು ತಮ್ಮದೇ ಆದ ಉದ್ಯೋಗಗಳಲ್ಲಿ ತೊಡಗಿಕೊಂಡರು, ಮತ್ತೆ ಕೆಲವರು ವಿವಿಧ ಸಂಸ್ಥೆಗಳಲ್ಲಿ ನೌಕರಿ ಪಡೆದರು ಮತ್ತು ಕೆಲ ಚಿಕ್ಕ ವಯಸ್ಸಿನ ವಿಧವೆಯರು ಉನ್ನತ ವಿದ್ಯಾಭ್ಯಾಸವನ್ನು ಮುಂದುವರೆಸಿದರು. ಅವರ ಮಕ್ಕಳಿಗೆ ಶಾಲೆ ಕಾಲೇಜುಗಳಲ್ಲಿ ಪ್ರವೇಶ ಪ್ರಕ್ರಿಯೆ ಸುಲಭವಾಯಿತು ಮತ್ತೆ ಕೆಲವರು ತಮ್ಮ ಬದುಕನ್ನು ಪುನರ್ ನಿರ್ಮಿಸಿಕೊಂಡರು.

ಪತಿಯ ಮರಣದ ನಂತರ ಅವರ ಪತ್ನಿಯರ ಬದುಕು ಮುಗಿದು ಹೋಗುತ್ತದೆ ಎಂಬ ಸಾಮಾಜಿಕ ಅಲಿಖಿತ ಯೋಚನೆಗಳು ನಿಂತುಹೋಗಿ ನಿಧಾನವಾಗಿ ಮತ್ತು ಅಷ್ಟೇ ಸ್ಪಷ್ಟವಾಗಿ ಯೋಧ ಪತ್ನಿಯರ ಧ್ವನಿಗಳು ಮೊಳಗಲಾರಂಭಿಸಿದವು. ಒಂದರ ಹಿಂದೊಂದರಂತೆ ಯೋಧ ಪತ್ನಿಯರ ಬದುಕಿನ ಹೋರಾಟದ, ದೃಢತೆಯ ಹಾಗೂ ಭರವಸೆಯ ಕಥೆಗಳು ಹೊರಬೀಳಲು ಆರಂಭಿಸಿದವು. ತನ್ನ ಬದುಕನ್ನು ನಡೆಸಲು ಬೇರೆಯವರ ಮುಂದೆ ತಲೆಬಾಗುವ ಅವಶ್ಯಕತೆಯನ್ನು ಹೊಂದಿದ್ದ ವೀರಯೋಧರ ಪತ್ನಿಯರು ಇದೀಗ ತಾವೇ ಖುದ್ದಾಗಿ ತಮ್ಮ ಬದುಕಿಗಾಗಿ ಎದ್ದು ನಿಂತಿದ್ದು ತಮ್ಮ ಸುತ್ತಲಿನ ಜನರ ಬದುಕನ್ನು ಸುಧಾರಿಸಲು ಸಹಾಯ ಹಸ್ತ ಚಾಚುತ್ತಿರುವುದು ಕಾಣತೊಡಗಿತು.

ಸುಭಾಷಿಣಿಯವರು ಕೈಗೊಂಡ ವೀರಯೋಧ ಪತ್ನಿಯರ ಹಾಗೂ ಅವರ ಕುಟುಂಬದ ಸಬಲೀಕರಣದ ಕಾರ್ಯಗಳು ಸರ್ಕಾರ ಹಾಗೂ ಸಂಘ ಸಂಸ್ಥೆಗಳ ಗಮನ ಸೆಳೆದವು. 2016ರಲ್ಲಿ ಅವರ ಅಗಣಿತ ಸೇವೆಗೆ "ನೀರಜಾ ಭಾನೋಟ ಪುರಸ್ಕಾರ "ವನ್ನು ನೀಡಿ ಭಾರತ ಘನ ಸರ್ಕಾರವು ಅವರನ್ನು ಗೌರವಿಸಿತು. ವೀರ ಯೋಧ ಪತ್ನಿಯರ ಹಾಗೂ ಮಕ್ಕಳ ಕುರಿತಾದ ಅವರ ಪ್ರೀತಿ ಹಾಗೂ ಸಹಾನುಭೂತಿಯ ಪರಿಣಾಮವಾಗಿ ಅವರಿಗೆ ದೊರೆತ ಈ ಪ್ರಶಸ್ತಿ ಅವರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ಎಂಬುದಂತೂ ಸರ್ವ ವಿಧಿತ. .

ಪರಹಿತ ಪರ ಚಿಂತನೆಗಾಗಿ ಬಾಳುವ ಬದುಕನ್ನು ಯಾವುದೇ ಪ್ರಶಸ್ತಿ ಪುರಸ್ಕಾರಗಳಿಂದ ಅಳೆಯಲಾಗುವುದಿಲ್ಲ ನಿಜ ಆದರೆ ಹುತಾತ್ಮ ಯೋಧರ ಪತ್ನಿಯರು ತಮ್ಮ ಪತಿಯ ಪಿಂಚಣಿಯನ್ನು ಪಡೆದಾಗ ಬಿಡುವ ನೆಮ್ಮದಿಯ ನಿಟ್ಟುಸಿರು, ಅವರ ಮಕ್ಕಳು ತಮಗೆ ದೊರೆತ ಸ್ಕಾಲರ್ ಶಿಪ್ ನ ಬಲದಿಂದ ಶಾಲೆಯಲ್ಲಿ ಎದೆಯುಬ್ಬಿಸಿ ನಡೆದು ಹೋಗುವಾಗ ಉಂಟಾದ ಬದುಕಿನ ಕುರಿತಾದ ಭರವಸೆಯನ್ನು ಕಣ್ಣೋಟದಲ್ಲಿ ಖಂಡಿತವಾಗಿಯೂ ಅಳೆಯಬಹುದು. ಈ ಹಿಂದೆ ಆಳವಾದ ನೋವಿನ ಅಲೆಯಲ್ಲಿ ಹುದುಗಿ ಹೋಗಿದ್ದ ಅವರ ದನಿಯಲ್ಲಿನ ಆತ್ಮವಿಶ್ವಾಸ ಹಾಗೂ ಧನ್ಯತೆಯ ಭಾವವನ್ನು ಸೂಸುವ ಮೊಗದಲ್ಲಿನ ತೃಪ್ತಿ ಸುಭಾಶಿಣಿಯವರಿಗೆ ಮತ್ತಷ್ಟು ಬಲವನ್ನು ತುಂಬುತ್ತದೆ. ಇದುವರೆಗೂ ತಾನು ಸಹಾಯ ಹಸ್ತ ಚಾಚಿದ ವೀರಯೋಧ ಪತ್ನಿಯರಲ್ಲಿ ಗುಂಪನ್ನು ನೋಡಿದಾಗ ಸುಹಾಸಿನಿಗೆ ಅವರು ಕೇವಲ ಸಂತ್ರಸ್ತರಂತೆ ತೋರುವುದಿಲ್ಲ ಅವರಲ್ಲಿ ಆಕೆ ಹೋರಾಡುವ ತಾಕತ್ತುಳ್ಳ ತಾಯಂದಿರನ್ನು ಕಾಣುತ್ತಾರೆ. ಆ ಹೆಣ್ಣು ಮಕ್ಕಳಲ್ಲಿ ತಮ್ಮ ಮಕ್ಕಳ ಭವಿಷ್ಯದ ಕುರಿತಾದ ಕನಸುಗಳನ್ನು ಕಾಣುವ ಯೋಧರಿದ್ದಾರೆ. ಬಹಳಷ್ಟು ಜನ ವಿದ್ಯಾರ್ಥಿಗಳು ನಿಮ್ಮಿಂದಲೇ ನಾನು ನನ್ನ ವಿದ್ಯಾಭ್ಯಾಸವನ್ನು ಪೂರೈಸಲು ಸಾಧ್ಯವಾಯಿತು ಎಂದು ಹೇಳಿದಾಗ ತಾನು ಪಟ್ಟ ಪರಿಶ್ರಮ ಸಾರ್ಥಕವಾಯಿತು ಎಂದು ಆಕೆಗೆ ಭಾಸವಾಗುತ್ತದೆ. ತನ್ನ ಸಂಸ್ಥೆಯನ್ನು ಆರಂಭಿಸಿದ ಬಹಳ ದಿನಗಳ ನಂತರ ವೀರಯೋಧ ಪತ್ನಿಯರ ಗುಂಪು ಕಲೆತು ಸಮಾಲೋಚನೆ ನಡೆಸುತ್ತಿರುವ ಹಾಗೂ ಯಾವುದೇ ಒಂದು ಕಾರ್ಯಕ್ರಮವನ್ನು ನಡೆಸುತ್ತಿರುವಾಗ ಅವರೆಲ್ಲರ ಮಧ್ಯದಲ್ಲಿ ಹೇಳದೆ ಉಳಿದ ನೋವಿನ ಹಿಂದೆಯೂ ಒಂದು ಪುಟ್ಟ ಭರವಸೆ ಅವರನ್ನು ಕಾಯುತ್ತದೆ. ಅಲ್ಲಿ ಆ ಮೌನದಲ್ಲಿ ಯಾವುದೇ ವಿಜಯದ ಘೋಷವಿರುವುದಿಲ್ಲ ಭಾಷಣವಿರುವುದಿಲ್ಲ ಅಲ್ಲಿರುವುದು ಶುದ್ಧ ಮಾನವೀಯತೆಯ ಸ್ಪರ್ಶ, ಏಕೆಂದರೆ ಕೆಲ ಬಲಿದಾನಗಳನ್ನು ಕೇವಲ ಮಡಲುಗಳಿಂದ ಗೌರವಿಸಿದರೆ ಸಾಕಾಗುವುದಿಲ್ಲ.... ಬದಲಾಗಿ ಅವರ ಮನದಾಳದ ನೋವು ನಿರಾಶೆಗಳಿಗೆ ಕಿವಿಯಾಗುತ್ತಾ ಅವರು ಬಿಟ್ಟು ಹೋದ ಅವರ ಕುಟುಂಬಗಳನ್ನು ಪೋಷಿಸುವ ಮೂಲಕ ಅವರಲ್ಲಿ ಧೈರ್ಯ ಭರವಸೆಗಳನ್ನು ತುಂಬುವ ಮೂಲಕ ಅವರನ್ನು ಮುಂದಿನ ಬದುಕಿಗೆ ಸಜ್ಜುಗೊಳಿಸುವುದು ಕೂಡ ಒಂದು ವಿಶಿಷ್ಟ ಕಾರ್ಯ. ಅಂದಹಾಗೆ ಇತ್ತೀಚೆಗೆ ಬಿಡುಗಡೆಯಾದ ಕಾಂತಾರ ಚಾಪ್ಟರ್ 1 ಚಲನಚಿತ್ರದಲ್ಲಿ ತನ್ನ ಸ್ನಿಗ್ಧ ಸೌಂದರ್ಯ ಹಾಗೂ ನಟನೆಯಿಂದ ಎಲ್ಲರನ್ನು ಸೆಳೆದ ನಾಯಕಿಯ ಪಾತ್ರ ವಹಿಸಿದ ರುಕ್ಮಿಣಿ ವಸಂತ್ ಸುಭಾಷಿಣಿ ವಸಂತ ಅವರ ಮಗಳು. ತಾಯಿಯ ಅತ್ಯುತ್ತಮ ಕಾರ್ಯವೈಖರಿಗೆ ತನ್ನ ಸಲಹೆ, ಸಹಕಾರವನ್ನು ನೀಡುತ್ತಿರುವ ಮಗಳು ಕೂಡ ತಾಯಿಯ ಹಾದಿಯಲ್ಲಿ ಸಾಗುತ್ತಿರುವುದು ಹೆಮ್ಮೆಯ ವಿಷಯ ಅಲ್ಲವೇ ಸ್ನೇಹಿತರೆ



ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ ಗದಗ್

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,